VOLUME: 16 | 30 JUNE 2026 | ಮಂಗಳವಾರ | RS: 2 | PAGE: 06 ISSUE: 139 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ನಟಿ ದಿವ್ಯಾ ಸುರೇಶ್ ಅವರ ಎದುರಲ್ಲಿ ಯುವಕನೊಬ್ಬ ಅಸಭ್ಯವಾಗಿ ವರ್ತಿಸಿದ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಈ ವಿಡಿಯೋವನ್ನು ಪೋಸ್ಟ್ ಮಾಡಿರುವ ನಟಿ ಕಾಮುಕನ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಬಿಗ್‌ಬಾಸ್ ಕನ್ನಡ ಸೀಸನ್ 8ರ ಸ್ಪರ್ಧಿ/ ನಟಿ ದಿವ್ಯಾ ಸುರೇಶ್‌ಗೆ ಭಾನುವಾರ ರಾತ್ರಿ 11:30ಕ್ಕೆ ಕೆಟ್ಟ ಅನುಭವ ಆಗಿದೆ. ಭಾನುವಾರ ತಡರಾತ್ರಿ ಕಸಿನ್ ಜೊತೆ ರಸ್ತೆಯಲ್ಲಿ ನಡೆದುಕೊಂಡು ಹೋಗಿದ್ದಾನೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
prabhavaa.com
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ವಿಜಯೇಂದ್ರಗೆ ಗೇಟ್‌ಪಾಸ್ ಖಚಿತ...?

ಬೆಂಗಳೂರು: ರಾಜ್ಯ ಬಿಜೆಪಿಯಲ್ಲಿ ನಾಯಕತ್ವ ಬದಲಾ ವಣೆ ಕುರಿತ ಚರ್ಚೆಗಳು ಮತ್ತೆ ಮುನ್ನೆಲೆಗೆ ಬಂದಿದ್ದು, ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ ಅವರದ್ದೆಂದು ಹೇಳಲಾಗುತ್ತಿರುವ ಆಡಿಯೋ ವೈರಲ್ ಆಗಿರುವುದು ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿದೆ.

ವಿಧಾನ ಪರಿಷತ್ ಚುನಾವಣೆಯ ವೇಳೆ ಬಿಜೆಪಿ ಶಾಸಕರ ಅಡ್ಡ ಮತದಾನದ ಬೆಳವಣಿಗೆಯ ನಂತರ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರ ನಾಯಕತ್ವದ ಕುರಿತು ಪಕ್ಷದೊಳಗೆ ಚರ್ಚೆಗಳು ನಡೆಯುತ್ತಿವೆ ಎಂಬ ಮಾತುಗಳು ಕೇಳಿಬರುತ್ತಿವೆ.

ಇದಕ್ಕೆ ಪೂರಕವಾಗಿ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿರುವ ಆಡಿಯೋದಲ್ಲಿ, ಬಿಜೆಪಿ ಕೇಂದ್ರ ನಾಯಕರೊಂದಿಗೆ ನಡೆದಿರುವುದಾಗಿ ಹೇಳಲಾಗಿರುವ ಸಂಭಾಷಣೆಯಲ್ಲಿ ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷ ಸ್ಥಾನದಿಂದ ಕೆಳಗಿಳಿಸುವ ಕುರಿತು ಚರ್ಚೆ ನಡೆದಿರುವ ಆರೋಪ ಕೇಳಿಬಂದಿದೆ.

ಆಡಿಯೋದಲ್ಲಿನ ಮಾತುಕತೆಯ ಪ್ರಕಾರ, ಬಿ.ವೈ. ವಿಜಯೇಂದ್ರ ಅವರು ರಾಜ್ಯಾಧ್ಯಕ್ಷರಾಗಿ ಮೂರು ವರ್ಷಗಳ ಅವಧಿ ಪೂರ್ಣಗೊಳಿಸುವವರೆಗೆ ಮುಂದುವರಿಯಲು ಅವಕಾಶ ನೀಡಬೇಕು. ಬಳಿಕ ನಾಯಕತ್ವ ಬದಲಾವಣೆ ಕುರಿತು ತೀರ್ಮಾನ ಕೈಗೊಳ್ಳಬಹುದು ಎಂಬ ಅಭಿಪ್ರಾಯ ವ್ಯಕ್ತವಾಗಿರುವುದಾಗಿ ಹೇಳಲಾಗಿದೆ. ಈ ಬೆಳವಣಿಗೆ ರಾಜ್ಯ ಬಿಜೆಪಿಯಲ್ಲಿ ಹೊಸ ಚರ್ಚೆಗೆ ಕಾರಣವಾಗಿದ್ದು, ಪಕ್ಷದೊಳಗಿನ ಬಣ ರಾಜಕೀಯದ ಕುರಿತ ಊಹಾಪೋಹಗಳಿಗೆ ಮತ್ತಷ್ಟು ಬಲ ನೀಡಿದೆ.

ವೈರಲ್ ಆಡಿಯೋ ಕುರಿತು ಪ್ರತಿಕ್ರಿಯಿಸಿದ ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದ ಗೌಡ, ಆಡಿಯೋ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡಲು ನಿರಾಕರಿಸಿದ್ದಾರೆ. "ಆಡಿಯೋ ಕುರಿತು ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ಅದು ನನ್ನದ್ದೇ ಎಂಬುದು ದೃಢಪಟ್ಟಿಲ್ಲ. ನನ್ನದಲ್ಲದ ಆಡಿಯೋ ಅಥವಾ ವಿಡಿಯೋಗಳಿಗೆ ನಾನು ಉತ್ತರಿಸುವುದಿಲ್ಲ" ಎಂದು ಅವರು ಸುದ್ದಿಗಾರರಿಗೆ ತಿಳಿಸಿದ್ದಾರೆ.

ಆಡಿಯೋ ಕುರಿತು ಸತ್ಯಾಸತ್ಯತೆ ಹೊರಬರಲಿ. ಈ ಬಗ್ಗೆ ಹೆಚ್ಚಿನ ಮಾಹಿತಿ ಇಲ್ಲದ ಕಾರಣ ಪ್ರತಿಕ್ರಿಯಿಸುವುದಿಲ್ಲ. ಪಕ್ಷದ ಕೋರ್ ಕಮಿಟಿ ಸಭೆಯಲ್ಲಿ ಕೆಲವು ವಿಚಾರಗಳನ್ನು ಪ್ರಸ್ತಾಪಿಸಿದ್ದೇನೆ. ಪಕ್ಷದ ಕೇಂದ್ರ ಅಥವಾ ರಾಜ್ಯ ನಾಯಕರು ಕೇಳಿದರೆ ಅಗತ್ಯ ಮಾಹಿತಿ ನೀಡುತ್ತೇನೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ವೈರಲ್ ಆಡಿಯೋದ ಸತ್ಯಾಸತ್ಯತೆ ಇನ್ನೂ ದೃಢಪಟ್ಟಿಲ್ಲ. ಈ ಕುರಿತು ಬಿಜೆಪಿ ನಾಯಕತ್ವದಿಂದ ಅಧಿಕೃತ ಪ್ರತಿಕ್ರಿಯೆ ಹೊರಬೀಳಬೇಕಿದೆ. ಸದಾನಂದಗೌಡ ವಿರುದ್ಧ ಗರಂ: ಬಿಜೆಪಿ ಪಕ್ಷದ ಇಬ್ಬರು ಪ್ರಭಾವಿ ನಾಯಕರಾದ ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ ಮತ್ತು ಯಲಹಂಕ ಶಾಸಕ ಎಸ್.ಆರ್. ವಿಶ್ವನಾಥ್ ನಡುವಿನ ವಾಕ್ಸಮರ ತಾರಕಕ್ಕೇರಿದ್ದು, ಇದು ಈಗ ಕಾನೂನು ಹೋರಾಟ ಮತ್ತು ರಾಜಕೀಯ ನಿವೃತ್ತಿಯ ಸವಾಲಿನ ರೂಪ ಪಡೆದುಕೊಂಡಿದೆ.



ಯಲಹಂಕದಲ್ಲಿ ನಡೆದ ಕೆಂಪೇಗೌಡ ಜಯಂತಿ ಕಾರ್ಯಕ್ರಮದ ವಿವಾದದಿಂದ ಆರಂಭವಾದ ಈ ಕಿಡಿ, ಈಗ ಗೂಂಡಾಗಿರಿ, ಭೂಗತ ಲೋಕದ ನಂಟು ಹಾಗೂ ಬಿಡಿಎ ಹಗರಣಗಳ ಆರೋಪ-ಪ್ರತ್ಯಾರೋಪಗಳಿಗೆ ಸಾಕ್ಷಿಯಾಗಿದೆ.

ಯಲಹಂಕದ ಕೆಂಪೇಗೌಡ ಜಯಂತಿ ಕಾರ್ಯಕ್ರಮಕ್ಕೆ ತಮಗೆ ಆಹ್ವಾನ ನೀಡಿದರೂ, ಅಲ್ಲಿಗೆ ಹೋಗದಂತೆ ತಡೆಯಲಾಯಿತು ಎಂದು ಮಾಜಿ ಸಿಎಂ ಡಿ.ವಿ. ಸದಾನಂದಗೌಡ ಆಕ್ರೋಶ ಹೊರಹಾಕಿದ್ದಾರೆ. ಶಾಸಕ ಎಸ್. ಆರ್. ವಿಶ್ವನಾಥ್ ವಿರುದ್ಧ ನೇರ ವಾಗ್ದಾಳಿ ನಡೆಸಿರುವ ಅವರು ಹಲವು ಸ್ಫೋಟಕ ಆರೋಪಗಳನ್ನು ಮಾಡಿದ್ದಾರೆ:

ನನಗೆ ಯಲಹಂಕದ ಕೆಂಪೇಗೌಡ ಜಯಂತಿಗೆ ಹೋಗಬೇಡಿ ಎಂದು ಕರೆ ಮಾಡಲಾಗಿತ್ತು. ವಿಶ್ವನಾಥ್ ನನ್ನನ್ನು ಒಕ್ಕಲಿಗ ಅಲ್ಲ ಎಂದಿದ್ದಾರೆ. ಆದರೆ ನಾನು ಒಕ್ಕಲಿಗ ಅಲ್ಲ ಅನ್ನಲು ಅವರಾರು? ಎಂದು ಪ್ರಶ್ನಿಸಿದ್ದಾರೆ.

ವಿಶ್ವನಾಥ್ ಗೂಂಡಾಗಿರಿ ಮಾಡಿ ಬಂದವರು. ಅವರು ಈ ಹಿಂದೆ ಭೂಗತ ಲೋಕದ ಡಾನ್ ಮುತ್ತಪ್ಪ ರೈ ಕೈಕೆಳಗೆ ಕೆಲಸ ಮಾಡಿದವನು. ನಾನು ಅದೇ ಮುತ್ತಪ್ಪ ರೈ ವಿರುದ್ಧ ಹೋರಾಟ ಮಾಡಿ ಬಂದವನು. ವಿಶ್ವನಾಥ್‌ಗೆ ದುಡ್ಡಿನ ಅಮಲು ಹೆಚ್ಚಾಗಿದೆ ಎಂದು ಡಿವಿಎಸ್ ಗುಡುಗಿದ್ದಾರೆ.

ವಿಶ್ವನಾಥ್ ಅವರ ಹೇಳಿಕೆಗಳ ವಿರುದ್ಧ ಪುತ್ತೂರು ಮತ್ತು ಸುಳ್ಯಗಳಲ್ಲಿ ತೀವ್ರ ಪ್ರತಿಭಟನೆಗಳು ನಡೆಯುತ್ತಿದ್ದು, ನಾಳೆ ಸುದ್ದಿಗೋಷ್ಠಿ ಕೂಡ ನಡೆಯಲಿದೆ ಎಂದು ಸದಾನಂದಗೌಡ ತಿಳಿಸಿದ್ದಾರೆ.

ಡಿ.ವಿ. ಸದಾನಂದಗೌಡರ ಆರೋಪಗಳಿಗೆ ಯಲಹಂಕ ಶಾಸಕ ಎಸ್.ಆರ್. ವಿಶ್ವನಾಥ್ ಅಷ್ಟೇ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದು, ಕೋರ್ಟ್ ಮೆಟ್ಟಿಲೇರುವುದಾಗಿ ಎಚ್ಚರಿಕೆ ನೀಡಿದ್ದಾರೆ: ನನ್ನ ಮೇಲಿನ ಆರೋಪಗಳಿಗೆ ಸದಾನಂದ ಗೌಡರು ದಾಖಲೆ ನೀಡಬೇಕು. ನನಗೂ ಮುತ್ತಪ್ಪ ರೈಗೂ ಇರುವ ಸಂಬಂಧದ ಬಗ್ಗೆ ಮತ್ತು ಬಿಡಿಎನಲ್ಲಿ ಹಣ ಹೊಡೆದಿರುವ ಬಗ್ಗೆ ಅವರು ಕೋರ್ಟ್‌ನಲ್ಲಿ ಸಾಬೀತುಪಡಿಸಲಿ. ನಾನು ಮುತ್ತಪ್ಪ ರೈ ಹೆಸರು ಕೇಳಿದ್ದೇನೆಯೇ ಹೊರತು ಯಾವುದೇ ಸಂಪರ್ಕ ಹೊಂದಿಲ್ಲ. ಅವರ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡುತ್ತೇನೆ ಎಂದಿದ್ದಾರೆ.

ನಾನು ಬಿಡಿಎ ಅಧ್ಯಕ್ಷನಾಗಿದ್ದಾಗಲೇ ಲೋಕಯುಕ್ತ ದಾಳಿಯಾಗಿತ್ತು. ಅಲ್ಲಿ ಸಾಸಿವೆ ಕಾಳಷ್ಟು ತಪ್ಪು ಕೂಡ ಪತ್ತೆಯಾಗಿರಲಿಲ್ಲ. ಸದಾನಂದ ಗೌಡರು ತಮ್ಮ ಹೇಳಿಕೆಯನ್ನು ಕೋರ್ಟ್‌ನಲ್ಲಿ ಸಾಬೀತುಪಡಿಸಿದ ದಿನವೇ ನಾನು ರಾಜಕೀಯ ನಿವೃತ್ತಿ ಪಡೆಯುತ್ತೇನೆ. ಒಂದು ವೇಳೆ ಸಾಬೀತುಪಡಿಸದಿದ್ದರೆ ನೀವೇನು ಮಾಡ್ತೀರಾ? ಎಂದು ಸವಾಲು ಹಾಕಿದ್ದಾರೆ.

ಸದಾನಂದ ಗೌಡ ಒಕ್ಕಲಿಗ ಅಲ್ಲ ಎಂದು ನಾನು ಎಲ್ಲೂ ಹೇಳಿಲ್ಲ, ಕೆಂಪೇಗೌಡರ ವಂಶಸ್ಥರು ಎಂದಿದ್ದೆ ಅಷ್ಟೇ. ಜಯಂತಿಗೆ ಕರೆದಾಗ ಬಾರದೇ ಇದ್ದಾಗ ನೋವಾಗುವುದು ಸಹಜ. ಅವರು ಅಂದು ಮುಖ್ಯಮಂತ್ರಿ ಆಗಬೇಕು ಅಂದಾಗ 24 ಗಂಟೆ ಹೋಟೇಲ್ ಬಾಗಿಲು ಕಾದವನು ನಾನೇ ಎಂಬುದನ್ನು ನೆನಪಿಸಿಕೊಳ್ಳಲಿ ಎಂದು ತಿವಿದಿದ್ದಾರೆ.

ಕರಾವಳಿ ಭಾಗದಲ್ಲಿ ನನ್ನ ವಿರುದ್ಧ ಪ್ರತಿಭಟನೆ ಮಾಡುವಂತೆ ಮಾಡಿ ನನ್ನನ್ನು ಇಷ್ಟು ದೊಡ್ಡ ನಾಯಕನನ್ನಾಗಿ ಮಾಡಿದ್ದಕ್ಕೆ ಸದಾನಂದ ಗೌಡರಿಗೆ ಧನ್ಯವಾದಗಳು.

ನಾವು ಬಾಯಿ ಬಿಚ್ಚಿದರೆ ಇನ್ನು ದೊಡ್ಡದಾಗುತ್ತದೆ. ನೀವು ಸ್ವಲ್ಪ ಸುಮ್ಮನಿದ್ದರೆ ನಿಮಗೇ ಒಳ್ಳೆಯದು ಎಂದು ತಿರುಗೇಟು ನೀಡಿದ್ದಾರೆ.

# ಇಂದಿನಿಂದ ಎಸ್‌ಐಆರ್ ಆರಂಭ

ಬೆಂಗಳೂರು: ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಜೂನ್ 30ರಿಂದ ಆರಂಭವಾಗಲಿದ್ದು, ಜುಲೈ 29ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಮನೆ ಮನೆಗೆ ಭೇಟಿ ನೀಡಿ ಮತದಾರರಿಗೆ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸಲಿದ್ದಾರೆ.

ಈ ಕುರಿತು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಕರ್ನಾಟಕದ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಅವರು, ಮತದಾರರ ಪಟ್ಟಿಯನ್ನು ಇನ್ನಷ್ಟು ನಿಖರ ಹಾಗೂ ಪಾರದರ್ಶಕಗೊಳಿಸುವ ಉದ್ದೇಶದಿಂದ ಈ ವಿಶೇಷ ಅಭಿಯಾನ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಜೂನ್ 30ರಿಂದ ಜುಲೈ 29ರವರೆಗೆ ಬಿಎಲ್‌ಒಗಳು ಮನೆ ಮನೆಗೆ ತೆರಳಿ ಮತದಾರರಿಗೆ ಎರಡು ಪ್ರತಿಗಳಲ್ಲಿ ಗಣತಿ ನಮೂನೆ ವಿತರಿಸಲಿದ್ದು, ಭರ್ತಿ ಮಾಡಿದ ನಮೂನೆಗಳನ್ನು ಮರಳಿ ಸ್ವೀಕರಿಸಲಿದ್ದಾರೆ. ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ.

ಬಳಿಕ ಆಗಸ್ಟ್ 5ರಿಂದ ಸೆಪ್ಟೆಂಬರ್ 4ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅಕ್ಟೋಬರ್ 3ರವರೆಗೆ ಪರಿಶೀಲನೆ ಹಾಗೂ ವಿಲೇವಾರಿ ಪ್ರಕ್ರಿಯೆ ನಡೆಯಲಿದ್ದು, ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟವಾಗಲಿದೆ ಎಂದು ಹೇಳಿದರು.

ರಾಜ್ಯದಲ್ಲಿ ಪ್ರಸ್ತುತ 5.54 ಕೋಟಿ ಮತದಾರರು ಇದ್ದು, ಮತದಾರರ ಗುರುತಿನ ಮಾಹಿತಿಯ ಮ್ಯಾಪಿಂಗ್ ಕಾರ್ಯದಲ್ಲಿ 91.61 ಶೇಕಡಾ ಪ್ರಗತಿ ಸಾಧಿಸಲಾಗಿದೆ. 224 ವಿಧಾನಸಭಾ ಕ್ಷೇತ್ರಗಳ ಪೈಕಿ 183 ಕ್ಷೇತ್ರಗಳಲ್ಲಿ 90 ಶೇಕಡಕ್ಕೂ ಅಧಿಕ ಮ್ಯಾಪಿಂಗ್ ಪೂರ್ಣಗೊಂಡಿದೆ. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಮಾತ್ರ ಈ ಪ್ರಮಾಣ ಕಡಿಮೆ ಇದ್ದು, 70ರಿಂದ 78 ಶೇಕಡದವರೆಗೆ ಮ್ಯಾಪಿಂಗ್ ನಡೆದಿದೆ ಎಂದು ಮಾಹಿತಿ ನೀಡಿದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಗೆ ರಾಜಕೀಯ ಪಕ್ಷಗಳೂ ಸಹಕಾರ ನೀಡುತ್ತಿದ್ದು, ರಾಜ್ಯದಾದ್ಯಂತ ಒಟ್ಟು 1,15,112 ಬೂತ್ ಮಟ್ಟದ ಏಜೆಂಟರನ್ನು ವಿವಿಧ ಪಕ್ಷಗಳು ನೇಮಕ ಮಾಡಿವೆ. ಕಾಂಗ್ರೆಸ್ ಪಕ್ಷ 52,419, ಬಿಜೆಪಿ 48,614, ಜೆಡಿಎಸ್ 14,020 ಸೇರಿದಂತೆ ಇತರೆ ಪಕ್ಷಗಳ ಪ್ರತಿನಿಧಿಗಳು ಈ ಕಾರ್ಯದಲ್ಲಿ ಭಾಗಿಯಾಗಿದ್ದಾರೆ.



ಕೊಯಮತ್ತೂರು- ಲೋಕಮಾನ್ಯ ತಿಲಕ್ ಟರ್ಮಿನಸ್ (ಮುಂಬಯಿ) ಎಕ್ಸ್‌ಪ್ರೆಸ್ ರೈಲಿಗೆ ಯಲಹಂಕ ರೈಲುನಿಲ್ದಾಣದಲ್ಲಿನ ನಿಲುಗಡೆಗೆ ಸನ್ಮಾನ್ಯ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣನವರಿಂದ ಚಾಲನೆ ನೀಡಿದರು.

# ಮತದಾರರ ಪಟ್ಟಿ ಪರಿಷ್ಕರಣೆ: ಸಾರ್ವಜನಿಕರ ಸಹಕಾರಕ್ಕೆ ಮನವಿ

ಬೆಂಗಳೂರು: ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ 2026ರ ಅಂಗವಾಗಿ ಜೂನ್ 30ರಿಂದ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಮನೆ-ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸಲಿದ್ದು, ಈ ಪ್ರಕ್ರಿಯೆಗೆ ಸಾರ್ವಜನಿಕರು ಅಗತ್ಯ ದಾಖಲೆಗಳೊಂದಿಗೆ ಸಹಕರಿಸುವಂತೆ ಬೆಂಗಳೂರು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಮನವಿ ಮಾಡಿದ್ದಾರೆ.

ಜಿಬಿಎ ಕೇಂದ್ರ ಕಚೇರಿಯಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಮನೆ-ಮನೆ ಭೇಟಿ ವೇಳೆ ನಿವಾಸಿಗಳು ಲಭ್ಯವಿಲ್ಲದಿದ್ದರೆ ಬಿಎಲ್‌ಒಗಳು ಇನ್ನೆರಡು ಬಾರಿ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸಲಿದ್ದಾರೆ. ಯಾವುದೇ ಮನೆ ಸಮೀಕ್ಷೆಯಿಂದ ಹೊರಗುಳಿಯದಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ ಪೂರ್ವಭಾವಿ ಕಾರ್ಯವಾಗಿ 2002ರ ಮತದಾರರ ಪಟ್ಟಿಯನ್ನು 2025ರ ಪಟ್ಟಿಯೊಂದಿಗೆ ಮ್ಯಾಪಿಂಗ್ ಮಾಡುವ ಕಾರ್ಯದಲ್ಲಿ ಇದುವರೆಗೆ ಶೇ. 76.32ರಷ್ಟು ಪ್ರಗತಿ ಸಾಧಿಸಲಾಗಿದೆ. ಒಟ್ಟು 1,03,88,363 ಮತದಾರರ ಪೈಕಿ 79,27,902 ಮತದಾರರ ಮ್ಯಾಪಿಂಗ್ ಪೂರ್ಣಗೊಂಡಿದ್ದು, 24,60,461 ಮತದಾರರ ಮ್ಯಾಪಿಂಗ್ ಇನ್ನೂ ಬಾಕಿಯಿದೆ. ಉಳಿದ ಕಾರ್ಯವನ್ನು ಶೀಘ್ರವೇ ಪೂರ್ಣಗೊಳಿಸಲಾಗುವುದು ಎಂದು ಅವರು ಹೇಳಿದರು.

ಬಿಎಲ್‌ಒಗಳು ಬೆಳಗ್ಗೆ ಮನೆಗಳಿಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸಲಿದ್ದು, ಸಂಜೆ ವೇಳೆಗೆ ಭರ್ತಿ ಮಾಡಿದ ನಮೂನೆಗಳನ್ನು ಸಂಗ್ರಹಿಸಿ ಡಿಜಿಟಲ್ ರೂಪದಲ್ಲಿ ಆನ್‌ಲೈನ್‌ಗೆ ಅಪ್‌ಲೋಡ್ ಮಾಡಲಿದ್ದಾರೆ. ಮತದಾರರು ಅಗತ್ಯವಿದ್ದಲ್ಲಿ ತಮ್ಮ ಇತ್ತೀಚಿನ ಭಾವಚಿತ್ರವನ್ನು ಕೂಡ ಸಲ್ಲಿಸಬಹುದಾಗಿದೆ.

ಗಣತಿ ನಮೂನೆಗಳನ್ನು ಮತದಾರರ ಸಹಾಯ ಕೇಂದ್ರಗಳು ಹಾಗೂ ರಜಾದಿನಗಳಲ್ಲಿ ಮತಗಟ್ಟೆಗಳಲ್ಲಿಯೂ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಗಣತಿ ನಮೂನೆ ಭರ್ತಿ ಮಾಡುವ ವೇಳೆ ಅಥವಾ ಮತದಾರರ ನೋಂದಣಿಗೆ ಸಂಬಂಧಿಸಿದ ಗೊಂದಲಗಳನ್ನು ನಿವಾರಿಸಲು ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಚೇರಿಗಳಲ್ಲಿ 2,855 ಮತದಾರರ ಸಹಾಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಸಾರ್ವಜನಿಕರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ಮಹೇಶ್ವರ್ ರಾವ್ ಮನವಿ ಮಾಡಿದರು. ಜಿಲ್ಲೆಯಲ್ಲಿ 28 ಮತದಾರರ ನೋಂದಣಾಧಿಕಾರಿಗಳು, 75 ಸಹಾಯಕ ಮತದಾರರ ನೋಂದಣಾಧಿಕಾರಿಗಳು, 905 ಬಿಎಲ್‌ಒ ಮೇಲ್ವಿಚಾರಕರು ಹಾಗೂ 8,972 ಬಿಎಲ್‌ಒಗಳು ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

# ಬೆಂಗಳೂರು ಅಭಿವೃದ್ಧಿ ಅನುದಾನ ಹಂಚಿಕೆ

ಬೆಂಗಳೂರು: ರಾಜಧಾನಿ ಬೆಂಗಳೂರಿನ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ರೂ.2,000 ಕೋಟಿ ಅನುದಾನ ಹಂಚಿಕೆ ಮಾಡಿರುವುದು ಇದೀಗ ರಾಜಕೀಯ ಚರ್ಚೆಗೆ ಗ್ರಾಸವಾಗಿದೆ. ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡಲಾಗಿದೆ ಎಂದು ಬಿಜೆಪಿ ಆರೋಪಿಸಿದರೆ, ಕಾಂಗ್ರೆಸ್ ನಾಯಕರು ಈ ಆರೋಪವನ್ನು ತಳ್ಳಿಹಾಕಿದ್ದಾರೆ.




ಸರ್ಕಾರದ ಆದೇಶದ ಪ್ರಕಾರ, ಒಟ್ಟು ರೂ.2,000 ಕೋಟಿಯಲ್ಲಿ ರೂ.1,631 ಕೋಟಿ ರಸ್ತೆ, ಚರಂಡಿ ಹಾಗೂ ಪಾದಚಾರಿ ಮಾರ್ಗಗಳ ಅಭಿವೃದ್ಧಿಗೆ ಮೀಸಲಿಡಲಾಗಿದೆ. ಉಳಿದ ರೂ.369 ಕೋಟಿ ನಾಗರಿಕ ಮೂಲಸೌಕರ್ಯ, ವಿಶೇಷ ಯೋಜನೆಗಳು, ಉದ್ಯಾನಗಳು, ಸಮುದಾಯ ಭವನಗಳು, ಶಿಕ್ಷಣ ಮತ್ತು ಆರೋಗ್ಯ ಸೌಲಭ್ಯಗಳು, ಕ್ರೀಡಾ ಮೂಲಸೌಕರ್ಯ, ಮಾರುಕಟ್ಟೆಗಳು ಹಾಗೂ ಕೆರೆಗಳ ಅಭಿವೃದ್ಧಿಗೆ ವಿನಿಯೋಗಿಸಲಾಗಿದೆ.

ಈ ಕುರಿತು ಪ್ರತಿಪಕ್ಷ ನಾಯಕ ಆರ್. ಅಶೋಕ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ಕಾಂಗ್ರೆಸ್ ಸರ್ಕಾರವು ಪಕ್ಷದ ಆಧಾರದ ಮೇಲೆ ಅನುದಾನ ಹಂಚಿಕೆ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಅವರು, "ತೆರಿಗೆದಾರರ ಹಣವನ್ನು ರಾಜಕೀಯ ಲಾಭಕ್ಕಾಗಿ ಬಳಸಬಾರದು. ಬೆಂಗಳೂರು ಎದುರಿಸುತ್ತಿರುವ ಗುಂಡಿಗಳು, ಪ್ರವಾಹ ಹಾಗೂ ಟ್ರಾಫಿಕ್ ಸಮಸ್ಯೆಗಳಿಗೆ ಆದ್ಯತೆ ನೀಡಬೇಕು. ಮುಖ್ಯಮಂತ್ರಿ ಎಲ್ಲರಿಗೂ ಇರಬೇಕು, ಕಾಂಗ್ರೆಸ್‌ಗೆ ಮಾತ್ರ ಅಲ್ಲ" ಎಂದು ಕಿಡಿಕಾರಿದ್ದಾರೆ.

ಬಿಜೆಪಿ ಆರೋಪದಂತೆ, ಸುಮಾರು ರೂ.369 ಕೋಟಿ ಮೊತ್ತವನ್ನು ರಸ್ತೆ ಕಾಮಗಾರಿಗಳ ಬದಲು ಶಾಸಕರ ಕಚೇರಿಗಳು, ಸಮುದಾಯ ಭವನಗಳು, ಬಹುಉದ್ದೇಶ ಕಟ್ಟಡಗಳು ಮತ್ತು ಇತರೆ ನಾಗರಿಕ ಕಾಮಗಾರಿಗಳಿಗೆ ಮರುಹಂಚಿಕೆ ಮಾಡಲಾಗಿದೆ. ಬಿಜೆಪಿ ಆಡಳಿತವಿಲ್ಲದ ಕ್ಷೇತ್ರಗಳಿಗೆ ಕಡಿಮೆ ಅನುದಾನ ನೀಡಲಾಗಿದೆ ಎಂಬ ಆರೋಪವನ್ನೂ ಪಕ್ಷ ಮುಂದಿಟ್ಟಿದೆ.

ಇದಕ್ಕೆ ತಿರುಗೇಟು ನೀಡಿರುವ ಸಚಿವ ಎಂ.ಬಿ. ಪಾಟೀಲ್, ಬಿಜೆಪಿ ಆಡಳಿತದ ಅವಧಿಯಲ್ಲಿಯೂ ಇದೇ ರೀತಿಯ ತಾರತಮ್ಯ ನಡೆದಿತ್ತು ಎಂದು ಹೇಳಿದ್ದಾರೆ. "ಬಿಜೆಪಿ ಅಧಿಕಾರದಲ್ಲಿದ್ದಾಗ ತಮ್ಮ ಪಕ್ಷದ ಶಾಸಕರಿಗೆ ತಲಾ ರೂ.50 ಕೋಟಿ ನೀಡಿದ್ದರೆ, ಕಾಂಗ್ರೆಸ್ ಶಾಸಕರ ಕ್ಷೇತ್ರಗಳಿಗೆ ಕೇವಲ ರೂ.25 ಕೋಟಿ ನೀಡಲಾಗಿತ್ತು. ಆದ್ದರಿಂದ ಬಿಜೆಪಿ ಮೊದಲು ಆತ್ಮಾವಲೋಕನ ಮಾಡಿಕೊಳ್ಳಬೇಕು" ಎಂದು ಅವರು ಪ್ರತಿಕ್ರಿಯಿಸಿದ್ದಾರೆ.

ಅನುದಾನ ಹಂಚಿಕೆಯಲ್ಲಿ ಉತ್ತರ ವಲಯಕ್ಕೆ ರೂ.466.5 ಕೋಟಿ, ಪಶ್ಚಿಮ ವಲಯಕ್ಕೆ ರೂ.415 ಕೋಟಿ, ದಕ್ಷಿಣ ವಲಯಕ್ಕೆ ರೂ.328 ಕೋಟಿ, ಮಧ್ಯ ವಲಯಕ್ಕೆ ರೂ.311.5 ಕೋಟಿ ಹಾಗೂ ಪೂರ್ವ ವಲಯಕ್ಕೆ ರೂ.110 ಕೋಟಿ ಮೀಸಲಿಡಲಾಗಿದೆ.

ಶಾಂತಿನಗರ, ಬ್ಯಾಟರಾಯನಪುರ, ಶಿವಾಜಿನಗರ, ಚಾಮರಾಜಪೇಟೆ, ಗೋವಿಂದರಾಜನಗರ, ವಿಜಯನಗರ, ಸರ್ವಜ್ಞನಗರ, ಪುಲಕೇಶಿನಗರ, ಹೆಬ್ಬಾಳ ಹಾಗೂ ಬಿಟಿಎಂ ಲೇಔಟ್ ಕ್ಷೇತ್ರಗಳು ತಲಾ ರೂ.100 ಕೋಟಿ ಅನುದಾನ ಪಡೆದು ಅಗ್ರಸ್ಥಾನದಲ್ಲಿವೆ. ಮತ್ತೊಂದೆಡೆ ಚಿಕ್ಕಪೇಟೆ, ಮಹಾಲಕ್ಷ್ಮಿ ಲೇಔಟ್, ಮಲ್ಲೇಶ್ವರಂ, ರಾಜಾಜಿನಗರ ಮತ್ತು ಜಯನಗರ ಕ್ಷೇತ್ರಗಳಿಗೆ ತಲಾ ರೂ.40 ಕೋಟಿ ಅನುದಾನ ಮಾತ್ರ ದೊರೆತಿದೆ. ಅನುದಾನ ಹಂಚಿಕೆಯಲ್ಲಿ ಸಮಾನತೆ ಮತ್ತು ಪಾರದರ್ಶಕತೆ ಕುರಿತು ಚರ್ಚೆಗಳು ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆ ಇದೆ.

# ವಿದ್ಯುತ್ ಖಾಸಗೀಕರಣ: ಸಂಪುಟದಲ್ಲಿ ತೀರ್ಮಾನ

ಬೆಂಗಳೂರು: "ವಿದ್ಯುತ್ ನಿಗಮಗಳನ್ನು ಖಾಸಗೀಕರಣ ಮಾಡದಿರುವ ವಿಚಾರವಾಗಿ ನಾನೊಬ್ಬನೇ ತೀರ್ಮಾನ ಮಾಡಲು ಸಾಧ್ಯವಿಲ್ಲ. ಈ ಬಗ್ಗೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ಮಾಡಿ, ನಿಮ್ಮ ಅಭಿಪ್ರಾಯದ ಮೇರೆಗೆ ತೀರ್ಮಾನ ಕೈಗೊಳ್ಳಲಾಗುವುದು" ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭರವಸೆ ನೀಡಿದರು.

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನೌಕರರ ಸಂಘ ಹಾಗೂ ಅಸೋಸಿಯೇಷನ್ ಒಕ್ಕೂಟದವರು ಬೆಂಗಳೂರು ಅರಮನೆ ಮೈದಾನದಲ್ಲಿ ಸೋಮವಾರ ಏರ್ಪಡಿಸಿದ್ದ ಅಭಿನಂದನೆ ಸಮಾರಂಭದಲ್ಲಿ ಶಿವಕುಮಾರ್ ಮಾತನಾಡಿದ ಅವರು, "ವಿದ್ಯುತ್ ನಿಗಮಗಳನ್ನು ಖಾಸಗೀಕರಣ ಮಾಡಬಾರದು ಎಂದು ನೀವು ಹೋರಾಟ ಮಾಡುತ್ತಿದ್ದೀರಿ. ನಾನು ಏನು ಮಾತನಾಡಲಿದ್ದೇನೆ ಎಂದು ಎಲ್ಲರೂ ನೋಡುತ್ತಿದ್ದಾರೆ. ಇದು ಪ್ರಸ್ತಾಪವಾಗಿದ್ದು 2003ರಲ್ಲಿ, ಈ ಕುರಿತ ಕಾನೂನು ತಂದವರು ಯಾರು? ಬಿಜೆಪಿ ಸರ್ಕಾರ. ನೀವು ಯಾರೂ ಆಗ ಅದರ ವಿರುದ್ಧ ಧ್ವನಿ ಎತ್ತಲಿಲ್ಲ. ಯಾರೂ ಹೋರಾಟ ಮಾಡಲಿಲ್ಲ, ಧಿಕ್ಕಾರ ಹೇಳಲಿಲ್ಲ. ನನ್ನ ಬಳಿ ಹಾಗೂ ಜಾರ್ಜ್ ಅವರ ಬಳಿ ಬಂದು ಖಾಸಗೀಕರಣಕ್ಕೆ ಅವಕಾಶ ನೀಡಬೇಡಿ ಎಂದು ಹೇಳುತ್ತಿದ್ದೀರಿ. ನೀವು ಸದಾ ನನ್ನ ಜೊತೆ ಇರುತ್ತೀರಿ ಎಂದು ಹೇಳುತ್ತಿದ್ದೀರಿ. ತಪ್ಪು ಮಾಡಿದವರ ವಿರುದ್ಧ ಧಿಕ್ಕಾರ ಹೇಳಿದಾಗ, ಒಳ್ಳೆಯ ಕೆಲಸ ಮಾಡಿದವರಿಗೆ ಜೈಕಾರ ಹೇಳಿದಾಗ ಮಾತ್ರ ಅದಕ್ಕೆ ಗೌರವ ಬರುತ್ತದೆ" ಎಂದು ತಿಳಿಸಿದರು.

"ಬಿಜೆಪಿ ತಂದಿರುವ ಕಾನೂನು ಸರಿ ಇಲ್ಲ ಎಂದು ನಿಮ್ಮ ಸಂಘಟನೆಗಳ ಅಧ್ಯಕ್ಷರುಗಳು ಎಂದಾದರೂ ಮಾತನಾಡಿದ್ದಾರಾ? ಬಿಜೆಪಿಯವರು ಎಲ್ಲಾ ವಿಚಾರದಲ್ಲೂ ಟೀಕೆಗಳನ್ನು ಮಾಡಿಕೊಂಡು ಇದ್ದಾರೆ. ಅವರ ಟೀಕೆಗಳೆಲ್ಲಾ ಸಾಯುತ್ತವೆ, ನಮ್ಮ ಕೆಲಸಗಳು ಮಾತ್ರ ಉಳಿಯುತ್ತವೆ.

ನೀವೆಲ್ಲರೂ ನಮ್ಮ ಸರ್ಕಾರದ ಹೆಬ್ಬೆಟ್ಟು. ಮುಂಬೈ, ದೆಹಲಿ ಸೇರಿದಂತೆ ಅನೇಕ ನಗರಗಳಲ್ಲಿ ಖಾಸಗೀಕರಣ ಮಾಡಲಾಗಿದೆ. ನೂರಾರು ವರ್ಷಗಳಿಂದ ವಿದ್ಯುತ್ ಲೈನ್ ಎಳೆದವರು ನೀವು, ಬೆಂಬಲ ಕೊಟ್ಟಿದ್ದು ಸರ್ಕಾರ. ಈಗ ಖಾಸಗಿ ಕಂಪನಿಯವರು ದುಡ್ಡು ಮಾಡಲು, ಸಂಪರ್ಕ ನೀಡುವ ಅಧಿಕಾರ ಅವರಿಗೆ ನೀಡಬೇಕಂತೆ" ಎಂದರು.

"ನೀವು ಡಿಕೆ, ಡಿಕೆ ಎಂದು ಕೂಗಿದಾಕ್ಷಣ ನಾನು ಹಿಗ್ಗುವುದಿಲ್ಲ, ಜಗ್ಗುವುದಿಲ್ಲ. ನಮ್ಮದು ಏನಿದ್ದರೂ ಗೀವ್ ಅಂಡ್ ಟೇಕ್ (ಕೊಡು, ಕೊಳ್ಳುವ), ಶೇರಿಂಗ್ ಅಂಡ್ ಕೇರಿಂಗ್ ಪದ್ಧತಿ. ನೀವು ನಮಗೆ ಕಾಳಜಿ ತೋರಬೇಕು, ನಾವು ನಿಮಗೆ ಕಾಳಜಿ ತೋರಬೇಕು. ಈ ಒಪ್ಪಂದಕ್ಕೆ ನೀವು ಬದ್ಧರಾಗಿರುತ್ತೀರಾ? 2028ರಲ್ಲಿ ನಿಮ್ಮ ಸರ್ಕಾರ ಮತ್ತೆ ಅಧಿಕಾರಕ್ಕೆ ಬರಬೇಕು ತಾನೆ? ನುಡಿದಂತೆ ನಡೆಯಬೇಕು, ಕೊಟ್ಟ ಮಾತು ಉಳಿಸಿಕೊಳ್ಳಬೇಕು.



ಈಗಾಗಲೇ ನಮ್ಮ ಸಚಿವರಾದ ಜಾರ್ಜ್ ಅವರು ಎಲ್ಲಾ ಎಸ್ಕಾಂ ಅಧ್ಯಕ್ಷರುಗಳು ಡಿ.ಕೆ. ಶಿವಕುಮಾರ್ ಕಾಲದಲ್ಲಿ ಯಾವುದೇ ಕಾರಣಕ್ಕೂ ಖಾಸಗೀಕರಣ ಆಗಬಾರದು ಎಂದು ನನಗೆ ಕಿವಿಯಲ್ಲಿ ಹೇಳಿದ್ದಾರೆ. ಈ ವಿಚಾರದಲ್ಲಿ ನನ್ನ ಅಭಿಪ್ರಾಯ ನಾನು ಈಗಾಗಲೇ ಹೇಳಿದ್ದು, ಈ ವಿಚಾರವನ್ನು ನಾನೊಬ್ಬನೇ ತೀರ್ಮಾನ ಮಾಡುವುದಿಲ್ಲ. ನಿಮ್ಮ ಅಭಿಪ್ರಾಯವೇ ನನ್ನ ಅಭಿಪ್ರಾಯ. ನೀವು ನನ್ನ ಮೇಲೆ ಇಟ್ಟಿರುವ ನಂಬಿಕೆ ಉಳಿಸಿಕೊಳ್ಳುತ್ತೇನೆ" ಎಂದು ವಾಗ್ದಾನ ನೀಡಿದರು.

"ನಂಬಿಕೆ ಮನುಷ್ಯನ ಶ್ರೇಷ್ಠ ಗುಣ. ನಿಮ್ಮ ಮೇಲೆ ನಂಬಿಕೆ ಇಟ್ಟು ನಾನು ಮುಂದಿನ ಸಚಿವ ಸಂಪುಟದಲ್ಲಿ ತೀರ್ಮಾನ ಮಾಡುತ್ತೇನೆ. ನೀವು ಮೋಸ ಮಾಡಿದರೆ ನಾನು ವಾಜಪೇಯಿ ಅವರ ಸರ್ಕಾರದ ತೀರ್ಮಾನದ ಕಡೆ ಮುಖ ಮಾಡುತ್ತೇನೆ. ಅದಕ್ಕೆ ಅವಕಾಶ ಮಾಡಿಕೊಡಬೇಡಿ. ನಮ್ಮ ನಿಮ್ಮ ಸಂಬಂಧ ಗಟ್ಟಿಯಾಗಿರಬೇಕು" ಎಂದರು.

"ಇಂಧನ ಇಲಾಖೆಯಲ್ಲಿ ಈ ಹಿಂದೆಯೂ ಕ್ರಾಂತಿಕಾರಿ ಬದಲಾವಣೆ ತಂದಿದ್ದೇವೆ, ಈಗಲೂ ಜಾರ್ಜ್ ಅವರ ನೇತೃತ್ವದಲ್ಲಿ ಅನೇಕ ಯೋಜನೆ ತೀರ್ಮಾನ ಮಾಡಿದ್ದಾರೆ. ಈ ಮಧ್ಯೆ ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರದಲ್ಲಿ ಇಂಧನ ಉತ್ಪಾದನೆ ಹೆಚ್ಚಿಸಲು ಯಾವುದಾದರೂ ಯೋಜನೆ ತರಲಾಯಿತೇ? ಇಲಾಖೆಗೆ ಹೊಸ ಭವನ ಕಟ್ಟಿದರೇ? ಕಳೆದ ನಮ್ಮ ಸರ್ಕಾರದ ವೇಳೆ ಇಂಧನ ಭವನ ಕಟ್ಟಲಾಯಿತು. ರೇಸ್ ಕೋರ್ಸ್ ರಸ್ತೆ ಬಳಿ ಖಾಲಿ ಜಾಗದಲ್ಲಿ ಇಂಧನ ಭವನ ನಿರ್ಮಿಸಿ ಸಾಕ್ಷಿಗುಡ್ಡೆ ನಿರ್ಮಿಸಿದ್ದೇವೆ. ಕ್ರೆಡೆಲ್ ಕಟ್ಟಡ ನೋಡಿದ್ದೀರಾ? ನಾವು ಅವಕಾಶ ಸಿಕ್ಕಾಗೆಲ್ಲಾ ಸಾಕ್ಷಿಗುಡ್ಡೆ ನೀಡಿದ್ದೇವೆ" ಎಂದು ಹೇಳಿದರು.

"7 ವರ್ಷಕ್ಕೊಮ್ಮೆ ವೇತನ ಪರಿಷ್ಕರಣೆ ಮಾಡಲಾಗುತ್ತಿತ್ತು. ನಾನು ಅದನ್ನು ಐದು ವರ್ಷಕ್ಕೆ ಇಳಿಸಿದೆ. ನಾನು ಒಂದೇ ಬಾರಿಗೆ ಎಷ್ಟು ಪರ್ಸೆಂಟ್ ವೇತನ ಹೆಚ್ಚಿಸಿದೆ? ನೀವು ಅದನ್ನು ನೆನಪಿಟ್ಟುಕೊಂಡಿದ್ದೀರೋ.. ಮರೆತಿದ್ದಿರೋ? ನಮ್ಮ ತೀರ್ಮಾನ ನಿಮ್ಮ ಬದುಕಿಗೆ ಅನುಕೂಲವಾಯಿತಲ್ಲವೇ? ನಾನು ಯಾವತ್ತೂ ಇಂಜಿನಿಯರ್ ಗಳಿಂದ ಪೆನ್ಸಿಲ್ ನಲ್ಲಿ ಬರೆಸಿ, ನಂತರ ಅದನ್ನು ತಿದ್ದುವ ಕೆಲಸ ಮಾಡಿಲ್ಲ.

ನಾನು ಒಬ್ಬರಿಂದ ಒಂದು ರೂಪಾಯಿ ಲಂಚ ಪಡೆಯದೇ 25 ಸಾವಿರ ಜನರನ್ನು ಇಲಾಖೆಯಲ್ಲಿ ನೇಮಕ ಮಾಡಿದೆ. ಇದನ್ನು ನೀವು ಸ್ಮರಿಸಿಕೊಳ್ಳಬೇಕು" ಎಂದು ಕಿವಿಮಾತು ಹೇಳಿದರು.

"ದೀಪ ಉರಿಯುವಾಗ ಅದರ ಬೆಳಕು ಕಾಣುತ್ತದೆ. ಅದರ ಹಿಂದೆ ಇರುವ ಬತ್ತಿ ಹಾಗೂ ಎಣ್ಣೆ ಯಾರಿಗೂ ಕಾಣುವುದಿಲ್ಲ.

ಭಾರತ ಸಾರಥಿ
30/06/2026
BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕುವೆಂಪು ನೆನಪು ಕಾರ್ಯಕ್ರಮ ಉದ್ಘಾಟಿಸಿದ ದಿನೇಶ್ ಗುಂಡೂರಾವ್





ಬೆಂಗಳೂರು: ಕನ್ನಡ ಜನಶಕ್ತಿ ಕೇಂದ್ರದ ವತಿಯಿಂದ ಸ್ವಾತಂತ್ರ್ಯ ಉದ್ಯಾನವನದ ಮುಂಭಾಗ ರಾಷ್ಟ್ರಕವಿ ಕುವೆಂಪು ಅವರ ಸ್ಮರಣಾರ್ಥ ಆಯೋಜಿಸಿದ್ದ "ಕುವೆಂಪು ನೆನಪು" ಕಾರ್ಯಕ್ರಮವನ್ನು ಗಾಂಧಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ದಿನೇಶ್ ಗುಂಡೂರಾವ್ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಷ್ಟ್ರಕವಿ ಕುವೆಂಪು ಅವರ ಸಾಹಿತ್ಯ, ಮಾನವೀಯ ಮೌಲ್ಯಗಳು ಹಾಗೂ ಕನ್ನಡ ನಾಡು-ನುಡಿಯ ಬೆಳವಣಿಗೆಗೆ ನೀಡಿದ ಕೊಡುಗೆಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದು ಹೇಳಿದರು. ಕುವೆಂಪು ಅವರ ವಿಶ್ವಮಾನವ ಸಂದೇಶ ಹಾಗೂ ಸಮಾನತೆಯ ಚಿಂತನೆಗಳು ಪ್ರತಿಯೊಬ್ಬರ ಜೀವನದಲ್ಲಿ ಅಳವಡಿಸಿಕೊಳ್ಳುವಂತವು ಎಂದು ಅಭಿಪ್ರಾಯಪಟ್ಟರು. ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಉಳಿವು-ಬೆಳವಣಿಗೆಯಲ್ಲಿ ಕುವೆಂಪು ಅವರ ಪಾತ್ರ ಅಪಾರವಾಗಿದ್ದು, ಅವರ ಆದರ್ಶಗಳು ಯುವಜನತೆಗೆ ಪ್ರೇರಣೆಯಾಗಿವೆ. ಕನ್ನಡದ ಬಗ್ಗೆ ಹೆಮ್ಮೆ ಮತ್ತು ಅಭಿಮಾನ ಬೆಳೆಸುವ ಕೆಲಸವನ್ನು ಎಲ್ಲರೂ ಕೈಗೊಳ್ಳಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯ ಕನ್ನಡ ಹೋರಾಟಗಾರ ಸಾ.ರಾ. ಗೋವಿಂದು, ಕನ್ನಡ ಸಂಘಟನೆಗಳ ಮುಖಂಡ ಎಂ. ತಿಮ್ಮಯ್ಯ, ಕನ್ನಡ ಜನಶಕ್ತಿ ಕೇಂದ್ರದ ಸಿ.ಕೆ. ರಾಮೇಗೌಡ, ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಹನುಮಂತ ನಾಯಕ್, ಸ್ವಾತಂತ್ರ್ಯ ಉದ್ಯಾನ ಉಳಿಸಿ ಹೋರಾಟ ಸಮಿತಿಯ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಿದ್ದರು.

ಗಣ್ಯರು ಕುವೆಂಪು ಅವರ ಜೀವನ, ಸಾಹಿತ್ಯ ಸಾಧನೆ, ಸಾಮಾಜಿಕ ಚಿಂತನೆಗಳು ಮತ್ತು ಕನ್ನಡದ ಮೇಲಿನ ಅವರ ಅಪಾರ ಪ್ರೀತಿಯನ್ನು ಸ್ಮರಿಸಿದರು. ಕನ್ನಡ ಸಾಹಿತ್ಯ, ಸಂಸ್ಕೃತಿ ಹಾಗೂ ಮಾನವೀಯ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳು ಅತ್ಯಂತ ಅಗತ್ಯ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕನ್ನಡಾಭಿಮಾನಿಗಳು, ಸಾಹಿತ್ಯಾಸಕ್ತರು ಹಾಗೂ ವಿವಿಧ ಕನ್ನಡಪರ ಸಂಘಟನೆಗಳ ಪ್ರತಿನಿಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಾಷ್ಟ್ರಕವಿಗೆ ಗೌರವ ನಮನ ಸಲ್ಲಿಸಿದರು.

# ಪರಿಸರ ಸಂರಕ್ಷಣೆಗೆ ವಿಶೇಷ ಕಾರ್ಯಕ್ರಮ



ಕನಕಪುರ

ನಾಡಪ್ರಭು ಕೆಂಪೇಗೌಡರ 517ನೇ ಜಯಂತಿಯ ಅಂಗವಾಗಿ ಲಯನ್ಸ್ ಜಿಲ್ಲಾ 317ಎ ವತಿಯಿಂದ ಪರಿಸರ ಸಂರಕ್ಷಣೆಯ ಸಂದೇಶ ಸಾರುವ ಉದ್ದೇಶದಿಂದ ಗಿಡ ನೆಡುವ ಹಾಗೂ ಸಸಿ ವಿತರಣಾ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಕನಕಪುರದ ಮಯಾನ್ಸ್ ರೆಸಾರ್ಟ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಪರಿಸರವನ್ನು ಉಳಿಸುವ ಮೂಲಕ ಮುಂದಿನ ಪೀಳಿಗೆಗೆ ಉತ್ತಮ ಭವಿಷ್ಯ ನಿರ್ಮಿಸಬಹುದೆಂಬ ಸಂದೇಶವನ್ನು ಸಾರಲಾಯಿತು. ಪರಿಸರ ರಕ್ಷಣೆ, ಹಸಿರು ಅಭಿವೃದ್ಧಿ ಹಾಗೂ ಸುಸ್ಥಿರ ಭವಿಷ್ಯದ ನಿರ್ಮಾಣಕ್ಕಾಗಿ ಲಯನ್ಸ್ ಸಂಸ್ಥೆ ನಿರಂತರವಾಗಿ ವೃಕ್ಷಾರೋಪಣ, ಸಸಿ ವಿತರಣೆ ಮತ್ತು ಪರಿಸರ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಈ ಕಾರ್ಯಕ್ರಮವೂ ಅದಕ್ಕೆ ಮತ್ತೊಂದು ಉದಾಹರಣೆಯಾಯಿತು.

ಕಾರ್ಯಕ್ರಮಕ್ಕೆ ಲಯನ್ಸ್ ಜಿಲ್ಲಾ 317ಎ ಜಿಲ್ಲಾ ಗವರ್ನರ್ ಲಯನ್ ಡಾ. ಜಿ. ಮೋಹನ್ ಮುಖ್ಯ ಅತಿಥಿಯಾಗಿ ಆಗಮಿಸಿ ಗಿಡ ನೆಡುವ ಮೂಲಕ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದ್ದು, ಹಸಿರು ವಾತಾವರಣ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಲಯನ್ ಮರಸಪ್ಪ ರವಿ, ಲಯನ್ ಎಸ್. ರಾಘವೇಂದ್ರ, ಲಯನ್ ಎಂ.ಎನ್. ಸತ್ಯನಾರಾಯಣ, ಲಯನ್ ಫಿಲಿಪ್ ರಾಜ್, ಲಯನ್ ಶಾರದಾ ಮೋಹನ್, ಲಯನ್ ರಘುಪ್ರಕಾಶ್, ಲಯನ್ ರಾಜಾನಂದುಜಯ್ಯ, ಲಯನ್ ವೀರಭದ್ರ ಬ್ಯಾಡಿಗೆ, ಲಯನ್ ವೇಣುಗೋಪಾಲ್ ಶೆಟ್ಟಿ ಹಾಗೂ ಲಯನ್ ಲತಾ ಆರ್.ಬಿ. ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಮೆರುಗು ತಂದರು.

ಕಾರ್ಯಕ್ರಮದ ಅಂತ್ಯದಲ್ಲಿ, ಮುಂದಿನ ದಿನಗಳಲ್ಲಿಯೂ ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ಹಸಿರು ಅಭಿಯಾನಗಳನ್ನು ಇನ್ನಷ್ಟು ವ್ಯಾಪಕವಾಗಿ ಹಮ್ಮಿಕೊಳ್ಳುವುದಾಗಿ ಲಯನ್ಸ್ ಜಿಲ್ಲಾ 317ಎ ತಿಳಿಸಿತು.

# ಕ್ಷೇತ್ರದ ಕಾಂಗ್ರೆಸ್ ಪಕ್ಷದಲ್ಲಿ ಶಿಸ್ತು ಮಾಯ!

ಶಿಡ್ಲಘಟ್ಟ

ಕ್ಷೇತ್ರದ ಕಾಂಗ್ರೆಸ್ ಪಕ್ಷದಲ್ಲಿ ಶಿಸ್ತು ಸಂಪೂರ್ಣವಾಗಿ ಕಣ್ಮರೆಯಾಗಿದ್ದು, ಆಕಾಂಕ್ಷಿಗಳು ವೈಯಕ್ತಿಕ ಅಸ್ತಿತ್ವಕ್ಕಾಗಿ ಪರಸ್ಪರ ಪೈಪೋಟಿಗೆ ಇಳಿದಿರುವುದು ಜನರಿಗೆ ಮನರಂಜನೆಯ ವಿಷಯವಾಗಿದ್ದು, ಪಕ್ಷದ ವರ್ಚಸ್ಸಿಗೆ ಧಕ್ಕೆ ತರುತ್ತಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯ ಸಂಚಾಲಕ ಬಳುವನಹಳ್ಳಿ ಸಿ.ವಿ. ಲೋಕೇಶ್‌ಗೌಡ ಆರೋಪಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜಾಪ್ರಭುತ್ವದಲ್ಲಿ ಮತದಾರರೇ ಅಂತಿಮ ತೀರ್ಪುಗಾರರು. ಯಾರು ಉತ್ತಮ ಅಭ್ಯರ್ಥಿ ಎಂಬುದನ್ನು ಜನರೇ ನಿರ್ಧರಿಸುತ್ತಾರೆ. ಆದರೆ ಕೆಲವರು ತಾವೇ ಅಭ್ಯರ್ಥಿಗಳೆಂದು ಘೋಷಿಸಿಕೊಂಡು ಪರಸ್ಪರ ಪೈಪೋಟಿ ನಡೆಸುತ್ತಿರುವುದು ದುರಹಂಕಾರದ ಪರಮಾವಧಿಯಾಗಿದೆ ಎಂದು ಪರೋಕ್ಷವಾಗಿ ಕಾಂಗ್ರೆಸ್ ಮುಖಂಡ ಆಂಜಿನಪ್ಪ (ಪುಟ್ಟು) ವಿರುದ್ಧ ವಾಗ್ದಾಳಿ ನಡೆಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿರುವ ಸಂದರ್ಭದಲ್ಲಿ ಜನಪ್ರತಿನಿಧಿಗಳು ಮತ್ತು ಪಕ್ಷದ ಆಕಾಂಕ್ಷಿಗಳು ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಜನರಿಗೆ ಅನುಕೂಲವಾಗುವ ಯೋಜನೆಗಳನ್ನು ಜಾರಿಗೆ ತರುವತ್ತ ಗಮನಹರಿಸಬೇಕು. ಅದನ್ನು ಬಿಟ್ಟು ಪರಸ್ಪರ ಕೆಸರೆರಚಾಟದಲ್ಲಿ ತೊಡಗುವ ಮೂಲಕ ಕಾಂಗ್ರೆಸ್ ಪಕ್ಷವನ್ನು ಸಾರ್ವಜನಿಕವಾಗಿ ಮುಜುಗರಕ್ಕೀಡು ಮಾಡುತ್ತಿದ್ದಾರೆ ಎಂದು ಟೀಕಿಸಿದರು.

ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರವು ರೇಷ್ಮೆ, ಹೈನುಗಾರಿಕೆ, ಹೂವು, ಹಣ್ಣು ಹಾಗೂ ತರಕಾರಿ ಉತ್ಪಾದನೆಗೆ ಮಾತ್ರವಲ್ಲ, ಪ್ರಜ್ಞಾವಂತ ಮತದಾರರಿಗೂ ಹೆಸರುವಾಸಿಯಾಗಿದೆ. ಇಲ್ಲಿನ ಮತದಾರರು ಪ್ರತಿಯೊಂದು ಚುನಾವಣೆಯಲ್ಲೂ ಸೂಕ್ತ ಅಭ್ಯರ್ಥಿಯನ್ನು ಆಯ್ಕೆ ಮಾಡಿರುವ ಇತಿಹಾಸವಿದೆ. ಹೊರಗಿನಿಂದ ಬಂದು ಸಮಾಜಸೇವಕರ ಸೋಗಿನಲ್ಲಿ ರಾಜಕೀಯ ಮಾಡಲು ಯತ್ನಿಸುವವರನ್ನು ಜನತೆ ಇದುವರೆಗೆ ಬೆಂಬಲಿಸಿಲ್ಲ. ಕ್ಷೇತ್ರದ ಜನರ ನಾಡಿಮಿಡಿತವನ್ನು ಅರ್ಥ ಮಾಡಿಕೊಳ್ಳದೆ ರಾಜಕೀಯ ಮಾಡುವವರಿಗೆ ಮತದಾರರೇ ಸೂಕ್ತ ಉತ್ತರ ನೀಡಲಿದ್ದಾರೆ ಎಂದು ಹೇಳಿದರು.

ಮುಂಬರುವ 2028ರ ವಿಧಾನಸಭೆ ಚುನಾವಣೆಯಲ್ಲಿ ಯಾರನ್ನು ಶಾಸಕರನ್ನಾಗಿ ಆಯ್ಕೆ ಮಾಡಬೇಕು ಎಂಬುದನ್ನು ಕ್ಷೇತ್ರದ ಮತದಾರರೇ ನಿರ್ಧರಿಸುತ್ತಾರೆ. ಆದ್ದರಿಂದ ರಾಜಕೀಯ ಆಕಾಂಕ್ಷಿಗಳು ತಾಳ್ಮೆಯಿಂದ ಜನಸೇವೆಯಲ್ಲಿ ತೊಡಗಬೇಕು. ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವ ಕೆಲಸಕ್ಕೆ ಆದ್ಯತೆ ನೀಡಬೇಕು. ಒಬ್ಬರ ಮೇಲೊಬ್ಬರು ಆರೋಪ-ಪ್ರತ್ಯಾರೋಪ ಮಾಡುವ ಬೀದಿ ರಾಜಕೀಯವನ್ನು ಕೈಬಿಟ್ಟು ಅಭಿವೃದ್ಧಿಯ ರಾಜಕಾರಣಕ್ಕೆ ಒತ್ತು ನೀಡಬೇಕು ಎಂದು ಅವರು ಆಗ್ರಹಿಸಿದರು.

# ಡಿಜಿಟಲ್ ವಹಿವಾಟುಗಳಲ್ಲಿ ಸುರಕ್ಷತೆ ಅತ್ಯಗತ್ಯ

ಬೆಂಗಳೂರು

ಡಿಜಿಟಲ್ ಪಾವತಿಗಳ ಬಳಕೆ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಬೆನ್ನಲ್ಲೇ, ಆನ್‌ಲೈನ್ ವಂಚನೆ ಪ್ರಕರಣಗಳೂ ಏರಿಕೆಯಾಗುತ್ತಿದ್ದು, ಗ್ರಾಹಕರು ಹೆಚ್ಚು ಎಚ್ಚರಿಕೆಯಿಂದ ಇರಬೇಕೆಂದು ಎಸ್‌ಬಿಐ ಕಾರ್ಡ್ ಸಲಹೆ ನೀಡಿದೆ.

ಇಂದು ಗ್ರಾಹಕರು ಶಾಪಿಂಗ್, ಪ್ರಯಾಣ ಬುಕ್ಕಿಂಗ್, ಬಿಲ್ ಪಾವತಿ ಹಾಗೂ ದೈನಂದಿನ ಹಣಕಾಸು ವ್ಯವಹಾರಗಳಿಗಾಗಿ ಡಿಜಿಟಲ್ ವೇದಿಕೆಗಳನ್ನು ಹೆಚ್ಚಾಗಿ ಬಳಸುತ್ತಿದ್ದಾರೆ. ಆದರೆ ಇದೇ ವೇಳೆ ಸೈಬರ್ ವಂಚಕರು ಹೊಸ ಹೊಸ ತಂತ್ರಗಳ ಮೂಲಕ ಬಳಕೆದಾರರನ್ನು ಗುರಿಯಾಗಿಸುತ್ತಿರುವುದು ಆತಂಕಕ್ಕೆ ಕಾರಣವಾಗಿದೆ.

ಆರ್‌ಬಿಐನ 2025-26ನೇ ಸಾಲಿನ ವಾರ್ಷಿಕ ವರದಿ ಪ್ರಕಾರ, ದೇಶದಲ್ಲಿ ವರದಿಯಾಗಿರುವ ಒಟ್ಟು ವಂಚನೆ ಪ್ರಕರಣಗಳಲ್ಲಿ ಶೇಕಡಾ 74ರಷ್ಟು ಪ್ರಕರಣಗಳು ಕಾರ್ಡ್ ಮತ್ತು ಇಂಟರ್‌ನೆಟ್ ವಂಚನೆಗಳಿಗೆ ಸಂಬಂಧಿಸಿವೆ. ಇಂತಹ ವಂಚನೆಗಳು ಗ್ರಾಹಕರಿಗೆ ಆರ್ಥಿಕ ನಷ್ಟದ ಜೊತೆಗೆ ಮಾನಸಿಕ ಒತ್ತಡವನ್ನೂ ಉಂಟುಮಾಡುತ್ತಿವೆ.

ಈ ಹಿನ್ನೆಲೆಯಲ್ಲಿ ಗ್ರಾಹಕರ ಸುರಕ್ಷತೆಯನ್ನು ಬಲಪಡಿಸಲು ಎಸ್‌ಬಿಐ ಕಾರ್ಡ್ ಸುಧಾರಿತ ಭದ್ರತಾ ತಂತ್ರಜ್ಞಾನ, 24x7 ಲೈವ್ ಚಾಟ್ ಬೆಂಬಲ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ಆದಾಗ್ಯೂ, ವಂಚನೆ ತಡೆಯಲು ಗ್ರಾಹಕರ ಜಾಗರೂಕತೆಯೇ ಅತ್ಯಂತ ಪ್ರಮುಖ ಅಂಶವಾಗಿದೆ ಎಂದು ಸಂಸ್ಥೆ ತಿಳಿಸಿದೆ.

ಈ ಕುರಿತು ಪ್ರತಿಕ್ರಿಯಿಸಿರುವ ಎಸ್‌ಬಿಐ ಕಾರ್ಡ್‌ನ ವ್ಯವಸ್ಥಾಪಕ ನಿರ್ದೇಶಕಿ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಲಿಲಾ ಪಾಂಡೆ, "ಡಿಜಿಟಲ್ ಪಾವತಿಗಳ ಭವಿಷ್ಯ ಪರಸ್ಪರ ನಂಬಿಕೆಯ ಮೇಲೆ ನಿಂತಿದೆ. ಹಣಕಾಸು ಸಂಸ್ಥೆಗಳು ಭದ್ರತಾ ವ್ಯವಸ್ಥೆಗಳನ್ನು ನಿರಂತರವಾಗಿ ಬಲಪಡಿಸುತ್ತಿದ್ದರೂ, ಗ್ರಾಹಕರು ಸಹ ಜಾಗೃತರಾಗಿರಬೇಕು. ಅಪರಿಚಿತ ಕರೆಗಳು, ಸಂದೇಶಗಳು ಹಾಗೂ ಅನುಮಾನಾಸ್ಪದ ಲಿಂಕ್‌ಗಳ ಬಗ್ಗೆ ಎಚ್ಚರಿಕೆ ವಹಿಸುವುದು, ಒಟಿಪಿ, ಸಿವಿವಿ ಹಾಗೂ ಬ್ಯಾಂಕಿಂಗ್ ಮಾಹಿತಿಯನ್ನು ಯಾರೊಂದಿಗೂ ಹಂಚಿಕೊಳ್ಳದಿರುವುದು ಅತ್ಯಗತ್ಯ" ಎಂದು ಹೇಳಿದ್ದಾರೆ.

# ಮಹಿಳಾ ರಸ್ತೆ ಸುರಕ್ಷತೆಗೆ ವಿನೂತನ ಸಂದೇಶ



ಬೆಂಗಳೂರು: ಫ್ಯಾಷನ್ ಮತ್ತು ರಸ್ತೆ ಸುರಕ್ಷತೆಯ ಅಪೂರ್ವ ಸಂಗಮಕ್ಕೆ ಸಾಕ್ಷಿಯಾದ ಬೆಂಗಳೂರು ಟೈಮ್ಸ್ ಫ್ಯಾಷನ್ ವೀಕ್‌ನ 13ನೇ ಆವೃತ್ತಿಯಲ್ಲಿ, ಮಹಿಳಾ ಸವಾರರ ಸುರಕ್ಷತೆಯನ್ನು ಉತ್ತೇಜಿಸುವ ಉದ್ದೇಶದಿಂದ ಮಾಡೆಲ್‌ಗಳು ಹೆಲ್ಮೆಟ್ ಧರಿಸಿ ರ್‍ಯಾಂಪ್ ಮೇಲೆ ಹೆಜ್ಜೆ ಹಾಕಿದರು.

ರಾಜಾಜಿನಗರದ ಶೆರಾಟನ್ ಗ್ರ್ಯಾಂಡ್‌ನಲ್ಲಿ ಜೂನ್ 26 ಮತ್ತು 27ರಂದು ನಡೆದ ಪ್ರತಿಷ್ಠಿತ ಫ್ಯಾಷನ್ ಕಾರ್ಯಕ್ರಮದಲ್ಲಿ, ಭಾರತದ ಮೊದಲ ಮಹಿಳಾ ಕೇಂದ್ರಿತ ಹೆಲ್ಮೆಟ್ ಬ್ರ್ಯಾಂಡ್ ಟ್ವರ್ಾ ಹೆಲ್ಮೆಟ್ಸ್ ವಿಶೇಷ ಆಕರ್ಷಣೆಯಾಗಿ ಹೊರಹೊಮ್ಮಿತು. ಜಾಗತಿಕ ಖ್ಯಾತಿಯ ಡಿಸೈನರ್ ವೇರ್ ಬ್ರ್ಯಾಂಡ್ ಪಂಕಜ್ ಸೋನಿ ಹೌಸ್ ಸಹಯೋಗದಲ್ಲಿ ನಡೆದ ಪ್ರದರ್ಶನದಲ್ಲಿ, ಮೊದಲ ಬಾರಿಗೆ ಫ್ಯಾಷನ್ ಮಾಡೆಲ್‌ಗಳು ಹೆಲ್ಮೆಟ್ ಧರಿಸಿ ರ್‍ಯಾಂಪ್ ವಾಕ್ ನಡೆಸುವ ಮೂಲಕ ಗಮನ ಸೆಳೆದರು.

ಸೌಂದರ್ಯ, ಶೈಲಿ ಮತ್ತು ಸುರಕ್ಷತೆಯನ್ನು ಒಂದೇ ವೇದಿಕೆಯಲ್ಲಿ ಪ್ರಸ್ತುತಪಡಿಸಿದ ಈ ಪ್ರದರ್ಶನವು "ರಸ್ತೆ ಸುರಕ್ಷತೆಯೂ ಫ್ಯಾಷನ್ ಆಗಬಹುದು" ಎಂಬ ಬಲವಾದ ಸಂದೇಶವನ್ನು ಸಾರಿತು. ಮಹಿಳೆಯರಲ್ಲಿ ಹೆಲ್ಮೆಟ್ ಧರಿಸುವ ಸಂಸ್ಕೃತಿಯನ್ನು ಉತ್ತೇಜಿಸುವ ಉದ್ದೇಶದಿಂದ ಆಯೋಜಿಸಲಾದ ಈ ವಿನೂತನ ಕಾರ್ಯಕ್ರಮ ಪ್ರೇಕ್ಷಕರಿಂದ ಮೆಚ್ಚುಗೆ ಪಡೆಯಿತು. ಈ ಕುರಿತು ಮಾತನಾಡಿದ ಟ್ವರ್ಾ ಹೆಲ್ಮೆಟ್ಸ್ ಸಂಸ್ಥಾಪಕಿ ಹಾಗೂ ಸಿಇಒ ಅಲ್ಪನಾ ಪರಿದಾ, "ಬೆಂಗಳೂರು ಟೈಮ್ಸ್ ಫ್ಯಾಷನ್ ವೀಕ್‌ನೊಂದಿಗೆ ಕೈಜೋಡಿಸಿರುವುದು ನಮಗೆ ಮಹತ್ವದ ಮೈಲಿಗಲ್ಲು. ನಮ್ಮ ಹೆಲ್ಮೆಟ್‌ಗಳು ಕೇವಲ ಸುರಕ್ಷತಾ ಸಾಧನಗಳಲ್ಲ, ಅವು ಶೈಲಿ ಮತ್ತು ವ್ಯಕ್ತಿತ್ವವನ್ನು ಪ್ರತಿಬಿಂಬಿಸುವ ಫ್ಯಾಷನ್ ಪರಿಕರಗಳಾಗಿಯೂ ಕಾರ್ಯನಿರ್ವಹಿಸುತ್ತವೆ. ಸುರಕ್ಷತೆ ಮತ್ತು ಸೌಂದರ್ಯ ಒಂದಕ್ಕೊಂದು ಪೂರಕವಾಗಿರಬಹುದು ಎಂಬುದನ್ನು ನಾವು ಈ ವೇದಿಕೆಯ ಮೂಲಕ ತೋರಿಸಿದ್ದೇವೆ" ಎಂದು ಹೇಳಿದರು. ಬೆಂಗಳೂರು ಟೈಮ್ಸ್ ಫ್ಯಾಷನ್ ವೀಕ್ ಭಾರತೀಯ ಫ್ಯಾಷನ್ ಕ್ಷೇತ್ರದ ಸೃಜನಶೀಲತೆಯನ್ನು ಜಾಗತಿಕ ಮಟ್ಟದಲ್ಲಿ ಪ್ರದರ್ಶಿಸುವ ಪ್ರಮುಖ ವೇದಿಕೆಯಾಗಿದ್ದು, ಈ ಬಾರಿ ರಸ್ತೆ ಸುರಕ್ಷತೆಯಂತಹ ಸಾಮಾಜಿಕ ಸಂದೇಶವನ್ನೂ ಫ್ಯಾಷನ್ ಮೂಲಕ ಜನರಿಗೆ ತಲುಪಿಸುವ ಪ್ರಯತ್ನ ವಿಶೇಷವಾಗಿ ಗಮನ ಸೆಳೆಯಿತು.

# ಜಗಳ ಬಿಡಿಸಲು ಹೋದ ಪೊಲೀಸ್ ಪೇದೆ ಮೇಲೆ ಹಲ್ಲೆ ಆರೋಪ: ಪ್ರಕರಣ ದಾಖಲು

ಗುಡಿಬಂಡೆ

ತಾಲೂಕಿನ ಗರುಡಾಚಾರ್ಲಹಳ್ಳಿ ಗ್ರಾಮದಲ್ಲಿ ಮೊಹರಂ ಆಚರಣೆ ವೇಳೆ ನಡೆದ ಗಲಾಟೆಯನ್ನು ನಿಯಂತ್ರಿಸಲು ತೆರಳಿದ್ದ ಕರ್ತವ್ಯನಿರತ ಪೊಲೀಸ್ ಪೇದೆ ಮೇಲೆ ಕೆಲ ಯುವಕರು ಹಲ್ಲೆ ನಡೆಸಿದ ಘಟನೆ ನಡೆದಿದೆ.



ಘಟನೆಯ ವಿವರಗಳ ಪ್ರಕಾರ, ಮೊಹರಂ ಆಚರಣೆ ವೇಳೆ ಕೆಲ ಯುವಕರು ಮದ್ಯದ ಅಮಲಿನಲ್ಲಿ ಗಲಾಟೆ ನಡೆಸುತ್ತಿದ್ದರು. ಸ್ಥಳೀಯರಿಂದ ಮಾಹಿತಿ ಪಡೆದ ಗುಡಿಬಂಡೆ ಪೊಲೀಸರು, ಪೊಲೀಸ್ ಕಾನ್ಸ್ಟೆಬಲ್ ಮಹೇಂದ್ರ ಹಾಗೂ ಹೋಂ ಗಾರ್ಡ್ ಪ್ರಸಾದ್ ಸ್ಥಳಕ್ಕೆ ತೆರಳಿ ಪರಿಸ್ಥಿತಿಯನ್ನು ನಿಯಂತ್ರಿಸಲು ಪ್ರಯತ್ನಿಸಿದ್ದಾರೆ.

ಈ ವೇಳೆ ಗಲಾಟೆ ಮಾಡದಂತೆ ಯುವಕರಿಗೆ ಬುದ್ಧಿವಾದ ಹೇಳಲಾಗುತ್ತಿದ್ದು, ಕಾನ್ಸ್ಟೆಬಲ್ ಮಹೇಂದ್ರ ಅವರು ನಡೆದ ಘಟನೆಗಳನ್ನು ಮೊಬೈಲ್‌ನಲ್ಲಿ ವಿಡಿಯೋ ಮಾಡುತ್ತಿದ್ದಾಗ, ಆಕ್ರೋಶಗೊಂಡ ಯುವಕರ ಗುಂಪು ಮೊಬೈಲ್ ಕಸಿದುಕೊಂಡು ಹಲ್ಲೆ ನಡೆಸಿದೆ ಎಂದು ಆರೋಪಿಸಲಾಗಿದೆ. ಅಲ್ಲದೆ, ಪೇದೆಯ ಕೈಯಲ್ಲಿದ್ದ ಲಾಠಿಯನ್ನು ಕಸಿದುಕೊಂಡು ಅದರಿಂದಲೂ ಹಲ್ಲೆ ನಡೆಸಲಾಗಿದೆ ಎನ್ನಲಾಗಿದೆ.

ಘಟನೆಯಿಂದ ಸ್ಥಳದಲ್ಲಿ ಕೆಲಕಾಲ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದ್ದು, ಬಳಿಕ ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ.

ಈ ಸಂಬಂಧ ಗರುಡಾಚಾರ್ಲಹಳ್ಳಿ ಗ್ರಾಮದ ಶ್ರೀನಿವಾಸ್, ಕಾರ್ತಿಕ್ ಸೇರಿದಂತೆ ಹಲವರ ವಿರುದ್ಧ ಗುಡಿಬಂಡೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# 108 ವಿದ್ಯಾರ್ಥಿಗಳಿಗೆ ಉತ್ಕರ್ಷ್ ವಿದ್ಯಾರ್ಥಿವೇತನ ವಿತರಣೆ



ಚಿತ್ರದುರ್ಗ

ಗ್ರಾಮೀಣ ಭಾಗದ ಪ್ರತಿಭಾವಂತ ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ಬೆಂಬಲ ನೀಡುವ ಉದ್ದೇಶದಿಂದ ವೇದಾಂತ ಐರನ್ ಅಂಡ್ ಸ್ಟೀಲ್ ಲಿಮಿಟೆಡ್ ಐರನ್ ಓರ್ ಕರ್ನಾಟಕ (ಐಒಕೆ) ಸಂಸ್ಥೆಯು 108 ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಉತ್ಕರ್ಷ್ ವಿದ್ಯಾರ್ಥಿವೇತನ ವಿತರಿಸಿತು.

ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಿಲ್ಲೆಯ 22 ಗ್ರಾಮಗಳ ವಿದ್ಯಾರ್ಥಿಗಳಿಗೆ ಒಟ್ಟು ರೂ.12 ಲಕ್ಷ ಮೊತ್ತದ ವಿದ್ಯಾರ್ಥಿವೇತನವನ್ನು ವಿತರಿಸಲಾಯಿತು. ಕಠಿಣ ಆಯ್ಕೆ ಪ್ರಕ್ರಿಯೆಯ ಮೂಲಕ 33 ಎಸ್‌ಎಸ್‌ಎಲ್‌ಸಿ, 26 ಪಿಯುಸಿ ಹಾಗೂ 49 ಪದವಿ ವಿದ್ಯಾರ್ಥಿಗಳನ್ನು ವಿದ್ಯಾರ್ಥಿವೇತನಕ್ಕೆ ಆಯ್ಕೆ ಮಾಡಲಾಗಿತ್ತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿದ್ದ ಬಿಆರ್‌ಸಿ ಅಧಿಕಾರಿ ಸಂಪತ್ ಕುಮಾರ್ ಎಸ್. ಮಾತನಾಡಿ, ಯುವಜನರೇ ದೇಶದ ಭವಿಷ್ಯವಾಗಿದ್ದು, ಗ್ರಾಮೀಣ ಹಿನ್ನೆಲೆಯ ವಿದ್ಯಾರ್ಥಿಗಳಿಗೆ ವೇದಾಂತ ಸಂಸ್ಥೆ ನೀಡುತ್ತಿರುವ ಶೈಕ್ಷಣಿಕ ನೆರವು ಶ್ಲಾಘನೀಯವಾಗಿದೆ ಎಂದು ಹೇಳಿದರು.

ಆರ್ಥಿಕ ಅಡೆತಡೆಗಳು ವಿದ್ಯಾರ್ಥಿಗಳ ಕನಸುಗಳಿಗೆ ಅಡ್ಡಿಯಾಗಬಾರದು. ನಿರಂತರ ಪರಿಶ್ರಮ, ದೃಢಸಂಕಲ್ಪ ಮತ್ತು ಶಿಕ್ಷಣದ ಮೂಲಕ ವಿದ್ಯಾರ್ಥಿಗಳು ತಮ್ಮ ಗುರಿ ಸಾಧಿಸಬೇಕು ಎಂದು ಅವರು ಕರೆ ನೀಡಿದರು.

# ಸ್ತನ ಆರೋಗ್ಯಕ್ಕೆ ಸಮಗ್ರ ಆರೈಕೆ: ಬೆಂಗಳೂರಿನಲ್ಲಿ ವಿಶೇಷ ಸ್ತನ ಆರೈಕೆ ಕೇಂದ್ರ ಆರಂಭ



ಬೆಂಗಳೂರು: ರಾಜ್ಯದಲ್ಲಿ ಸ್ತನ ಕ್ಯಾನ್ಸರ್ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮಹಿಳೆಯರಿಗೆ ತಪಾಸಣೆ, ರೋಗನಿರ್ಣಯ, ಚಿಕಿತ್ಸೆ ಮತ್ತು ಚೇತರಿಕೆ ಸೇವೆಗಳನ್ನು ಒಂದೇ ಸೂರಿನಡಿ ಒದಗಿಸುವ ಉದ್ದೇಶದಿಂದ ಬೆಂಗಳೂರಿನಲ್ಲಿ ವಿಶೇಷ ಸ್ತನ ಆರೈಕೆ ಕೇಂದ್ರವನ್ನು ಆರಂಭಿಸಲಾಗಿದೆ.

ಸ್ತನ ಆರೋಗ್ಯ ಸಮಸ್ಯೆಗಳ ಕುರಿತು ಅನೇಕ ಮಹಿಳೆಯರು ಆರಂಭದಲ್ಲಿ ಅನಿಶ್ಚಿತತೆ ಮತ್ತು ಆತಂಕವನ್ನು ಎದುರಿಸುತ್ತಾರೆ. ಸ್ತನದಲ್ಲಿ ನೋವು, ಅಸಹಜ ಮ್ಯಾಮೊಗ್ರಾಮ್ ವರದಿ, ಕುಟುಂಬದಲ್ಲಿ ಕ್ಯಾನ್ಸರ್ ಹಿನ್ನೆಲೆ ಅಥವಾ ಇತರ ಆರೋಗ್ಯ ಸಮಸ್ಯೆಗಳ ಕಾರಣದಿಂದ ವಿವಿಧ ವಿಭಾಗಗಳ ವೈದ್ಯರನ್ನು ಸಂಪರ್ಕಿಸಬೇಕಾಗುವ ಪರಿಸ್ಥಿತಿ ಸಾಮಾನ್ಯವಾಗಿದೆ. ಈ ಹಿನ್ನೆಲೆಯಲ್ಲಿ ಸಮಗ್ರ ಹಾಗೂ ಸುಲಭ ವೈದ್ಯಕೀಯ ಸೇವೆಯ ಅಗತ್ಯವನ್ನು ಮನಗಂಡು ಸ್ಪರ್ಶ್‌ಕೇರ್ ಆಸ್ಪತ್ರೆಗಳು ಸ್ಪರ್ಶ್‌ಕೇರ್ ಸೆಂಟರ್ ಫಾರ್ ಬ್ರೆಸ್ಟ್ ಕೇರ್ ಅನ್ನು ಆರಂಭಿಸಿವೆ.

ಈ ಕೇಂದ್ರವು ಸ್ತನ ಆರೋಗ್ಯ ಸಂಬಂಧಿತ ಎಲ್ಲಾ ಸೇವೆಗಳನ್ನು ಒಂದೇ ಸ್ಥಳದಲ್ಲಿ ಒದಗಿಸುವ ಬಹುಶಿಸ್ತೀಯ ವೈದ್ಯಕೀಯ ಸೌಲಭ್ಯವಾಗಿದ್ದು, ತಪಾಸಣೆಯಿಂದ ಆರಂಭಿಸಿ ಚಿಕಿತ್ಸೆ ಮತ್ತು ನಂತರದ ಆರೈಕೆಯವರೆಗೆ ಸಮಗ್ರ ಸೇವೆಗಳನ್ನು ನೀಡಲಿದೆ.

ಸ್ಪರ್ಶ್‌ಕೇರ್ ಆಸ್ಪತ್ರೆಗಳ ಸ್ತನ ಕ್ಯಾನ್ಸರ್ ಶಸ್ತ್ರಚಿಕಿತ್ಸಕಿ ಡಾ. ಎಂ.ಎಸ್. ಸುಶ್ರುತ ಮಾತನಾಡಿ, "ಸ್ತನ ಚಿಕಿತ್ಸಾಲಯಕ್ಕೆ ಬರುವ ಎಲ್ಲ ಮಹಿಳೆಯರೂ ಕ್ಯಾನ್ಸರ್ ರೋಗಿಗಳಾಗಿರುವುದಿಲ್ಲ. ಬಹುತೇಕರು ತಮ್ಮ ಆರೋಗ್ಯದ ಬಗ್ಗೆ ಕಾಡುತ್ತಿರುವ ಅನುಮಾನಗಳಿಗೆ ಸ್ಪಷ್ಟ ಉತ್ತರ ಪಡೆಯಲು ಬರುತ್ತಾರೆ ಎಂದು ಹೇಳಿದರು.

# ಯೋಗ ದಿನಾಚರಣೆ ಹಿನ್ನೆಲೆ: ಮೆಗಾ ಆರೋಗ್ಯ ಶಿಬಿರ



ಬೆಂಗಳೂರು

ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ, ಕರ್ನಾಟಕ ಕ್ಷತ್ರಿಯ ಮರಾಠ ಪರಿಷತ್(ರಿ) ಸಮುದಾಯ ಯೋಗಕ್ಷೇಮ ಮತ್ತು ಜೀವ ಉಳಿಸುವ ಉಪಕ್ರಮಗಳನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ರಕ್ತದಾನ ಶಿಬಿರ ಮತ್ತು ಕಣ್ಣಿನ ತಪಾಸಣೆ ಸೇರಿದಂತೆ ಸಮಗ್ರ ಆರೋಗ್ಯ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಿದೆ. ಇದರ ರಾಜ್ಯ ಅಧ್ಯಕ್ಷ ಎಸ್. ಸುರೇಶ್ ರಾವ್ ಸಾಠೆ, ಗವರ್ನಿಂಗ್ ಕೌನ್ಸಿಲ್ ಛೇರ್ಮನ್ ಎಸ್. ಆರ್. ಸಿಂಧ್ಯಾ, ಖಜಾಂಚಿ ಟಿ.ಆರ್. ವೆಂಕಟ್ ರಾವ್ ಚವ್ಹಾಣ್ ಮತ್ತು ಎಲ್ಲಾ ಸಮಿತಿ ಸದಸ್ಯರು ನೇತೃತ್ವದ ಬಹುಮುಖಿ ಕಾರ್ಯಕ್ರಮದಲ್ಲಿ ಉತ್ತೇಜಕ ಯೋಗ ಅಧಿವೇಶನ, ಶ್ರದ್ಧಾ ಐ ಕೇರ್ ಟ್ರಸ್ಟ್ ಸಹಯೋಗದೊಂದಿಗೆ ಉಚಿತ ಕಣ್ಣಿನ ತಪಾಸಣೆ ಶಿಬಿರ ಮತ್ತು ಲಯನ್ಸ್ ಬ್ಲಡ್ ಸೆಂಟರ್ ಜೊತೆಗೆ ಆಯೋಜಿಸಲಾದ ಸ್ವಯಂಪ್ರೇರಿತ ರಕ್ತದಾನ ಶಿಬಿರವನ್ನು ಒಳಗೊಂಡಿತ್ತು.

# 'ದೂರದೃಷ್ಟಿಯ ಮಹಾನಾಯಕ ಕೆಂಪೇಗೌಡರು'



ಬೆಂಗಳೂರು

ನಾಡಪ್ರಭು ಕೆಂಪೇಗೌಡರು ಕೇವಲ ಒಂದು ಪ್ರದೇಶದ ಆಡಳಿತಗಾರರಾಗಿರಲಿಲ್ಲ; ಅವರು ಜಾಗತಿಕ ಮಟ್ಟದ ದೂರದೃಷ್ಟಿ ಹೊಂದಿದ್ದ ಶ್ರೇಷ್ಠ ನಗರ ಯೋಜಕರಾಗಿದ್ದರು. ಐದು ಶತಮಾನಗಳ ಹಿಂದೆಯೇ ಅವರು ಹಾಕಿಕೊಟ್ಟ ಸುಸ್ಥಿರ ನಗರಾಭಿವೃದ್ಧಿಯ ಬುನಾದಿಯೇ ಇಂದು ಬೆಂಗಳೂರು ಜಾಗತಿಕ ತಂತ್ರಜ್ಞಾನ ಮತ್ತು ನಾವೀನ್ಯತೆಯ ರಾಜಧಾನಿಯಾಗಿ ಬೆಳೆಯಲು ಮುಖ್ಯ ಕಾರಣವಾಗಿದೆ ಎಂದು ಭಾರತದ ಗೌರವಾನ್ವಿತ ಉಪರಾಷ್ಟ್ರಪತಿಗಳಾದ ಸಿ.ಪಿ.ರಾಧಾಕೃಷ್ಣನ್ ಅವರು ಹೇಳಿದರು

ನಾಡಪಭು ಕೆಂಪೇಗೌಡ ಪ್ರತಿಷ್ಠಾನದ ವತಿಯಿಂದ ಬೆಂಗಳೂರು ನಗರ ವಿಶ್ವವಿದ್ಯಾಲಯದ ಜ್ಞಾನಜ್ಯೋತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ ನಾಡ ಪಭು ಕೆಂಪೇಗೌಡ ಅವರ 517 ನೇ ಜಯಂತೋತ್ಸವ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಅರ್ಹ ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ಕೆಂಪೇಗೌಡರ ಆಡಳಿತ ವೈಖರಿಯನ್ನು ಶ್ಲಾಘಿಸಿದರು.

ಕೆಂಪೇಗೌಡರು ಕೇವಲ ರಸ್ತೆ ಮತ್ತು ಮಾರುಕಟ್ಟೆಗಳನ್ನು ನಿರ್ಮಿಸಲಿಲ್ಲ. ನೂರಾರು ಕೆರೆ-ಕಲ್ಯಾಣಿಗಳನ್ನು ತೋಡಿಸುವ ಮೂಲಕ ಪರಿಸರ ಸಂರಕ್ಷಣೆ ಮತ್ತು ನೀರಿನ ಭದ್ರತೆಗೆ ಅಪ್ರತಿಮ ಕೊಡುಗೆ ನೀಡಿದ್ದಾರೆ. ಇಂದಿನ ಆಧುನಿಕ ನಗರ ಯೋಜನೆಗಳಿಗೆ ಅವರ ಜಲ ನಿರ್ವಹಣಾ ತಂತ್ರಜ್ಞಾನವು ಅತ್ಯಂತ ಪ್ರಸ್ತುತವಾಗಿದೆ ಮತ್ತು ನಾವೆಲ್ಲರೂ ಅದರಿಂದ ಕಲಿಯಬೇಕಾದದ್ದು ಸಾಕಷ್ಟಿದೆ ಎಂದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿ ಈ ವರ್ಷದ 'ನಾಡಪ್ರಭು ಕೆಂಪೇಗೌಡ ಪ್ರಶಸ್ತಿ'ಗೆ ಭಾಜನರಾದ ಸಾಧಕರನ್ನು ಅಭಿನಂದಿಸುತ್ತಾ, "ಕೆಂಪೇಗೌಡರ ಹೆಸರಿನಲ್ಲಿ ಪ್ರಶಸ್ತಿ ಸ್ವೀಕರಿಸುತ್ತಿರುವುದು ಅತ್ಯಂತ ಹೆಮ್ಮೆಯ ವಿಷಯ. ಈ ಗೌರವವು ಸಮಾಜದ ಪ್ರಗತಿಗಾಗಿ ಇನ್ನಷ್ಟು ಶ್ರಮಿಸಲು ನಿಮಗೆ ಪ್ರೇರಣೆಯಾಗಲಿ ಎಂದು ಪ್ರಶಸ್ತಿ ಪುರಸ್ಕೃತರನ್ನು ಹಾರೈಸಿದರು.

ದೇಶದ ಯುವ ಸಮುದಾಯಕ್ಕೆ ಕರೆ ನೀಡಿದ ಉಪರಾಷ್ಟ್ರಪತಿಗಳು, "ಕೆಂಪೇಗೌಡರ ಧೈರ್ಯ, ಸಾಮಾಜಿಕ ನ್ಯಾಯ, ಮತ್ತು ಎಲ್ಲರನ್ನೂ ಒಳಗೊಳ್ಳುವ ಸೌಹಾರ್ದತೆಯ ತತ್ವಗಳನ್ನು ಇಂದಿನ ಯುವ ಪೀಳಿಗೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ

ತಿಪಟೂರು

ನಗರದ ರೋಟರಿ ಭವನದಲ್ಲಿ ಹಾಗೂ ಅಶ್ವಿನಿ ಜುವೆಲರ್ಸ್‌ನ 25ನೇ ವರ್ಷದ ಬೆಳ್ಳಿ ಹಬ್ಬದ ಅಂಗವಾಗಿ ರೋಟರಿ ಸಂಸ್ಥೆಯ ಸಹಯೋಗದಲ್ಲಿ ಉಚಿತ ಸೂಪರ್ ಸ್ಪೆಷಾಲಿಟಿ ಬೃಹತ್ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಯಿತು.

ಶಿಬಿರವನ್ನು ನಗರಸಭೆ ಪೌರಾಯುಕ್ತ ವಿಶ್ವೇಶ್ವರ ಬದರಗಡೆ ಉದ್ಘಾಟಿಸಿ ಮಾತನಾಡಿ, ಸಾರ್ವಜನಿಕರು ತಮ್ಮ ಆರೋಗ್ಯದ ಕಡೆ ಹೆಚ್ಚಿನ ಗಮನ ನೀಡಬೇಕು. ರೋಗ ಬಂದ ನಂತರ ಚಿಕಿತ್ಸೆ ಪಡೆಯುವುದಕ್ಕಿಂತ ಮುಂಚಿತವಾಗಿ ಜಾಗೃತಿ ವಹಿಸುವುದು ಅತ್ಯಂತ ಮುಖ್ಯ ಎಂದು ಹೇಳಿದರು.

ವೈದ್ಯ ಡಾ. ಜಿ.ಎಸ್. ಶ್ರೀಧರ್ ಮಾತನಾಡಿ, ಬದಲಾಗುತ್ತಿರುವ ಜೀವನಶೈಲಿ ಮತ್ತು ಆಹಾರ ಪದ್ಧತಿಯಿಂದಾಗಿ ಚಿಕ್ಕ ವಯಸ್ಸಿನಲ್ಲೇ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿರುವುದು ಆತಂಕಕಾರಿ ಸಂಗತಿ ಎಂದು ಹೇಳಿದರು. ಪ್ರತಿಯೊಬ್ಬರೂ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಹಾಗೂ ಪೌಷ್ಟಿಕ ಆಹಾರ ಸೇವಿಸಬೇಕು ಎಂದು ಸಲಹೆ ನೀಡಿದರು.

ಶಿಬಿರದಲ್ಲಿ ನೂರಾರು ಜನರು ಪಾಲ್ಗೊಂಡು ತಜ್ಞ ವೈದ್ಯರಿಂದ ಉಚಿತ ತಪಾಸಣೆ ಹಾಗೂ ಸಲಹೆಗಳನ್ನು ಪಡೆದರು.

ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಅಧ್ಯಕ್ಷೆ ವನಿತಾ ಪ್ರಸನ್ನಕುಮಾರ್, ಕಾರ್ಯದರ್ಶಿ ಕೋಮಲ, ಅಶ್ವಿನಿ ಜುವೆಲರ್ಸ್‌ನ ಸತೀಶ್ ಸೇರಿದಂತೆ ವಿವಿಧ ಆಸ್ಪತ್ರೆಗಳ ವೈದ್ಯರು, ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಬಂಡೀಪುರ–ನಾಗರಹೊಳೆ ಜಂಗಲ್ ಸಫಾರಿಗೆ ಮತ್ತೆ ಹಸಿರು ನಿಶಾನೆ

ಬೆಂಗಳೂರು

ರಾಜ್ಯದ ಪ್ರಮುಖ ವನ್ಯಜೀವಿ ತಾಣಗಳಾದ ಬಂಡೀಪುರ ಹಾಗೂ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಜಂಗಲ್ ಸಫಾರಿ (ಉದ್ಯಾನ ಪ್ರವಾಸ) ಯನ್ನು ಪೂರ್ಣ ಪ್ರಮಾಣದಲ್ಲಿ ಪುನರಾರಂಭಿಸಲು ರಾಜ್ಯ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ.

ತಜ್ಞರು ಮತ್ತು ಅಧಿಕಾರಿಗಳನ್ನು ಒಳಗೊಂಡ ತಾಂತ್ರಿಕ ಸಮಿತಿಯ ವರದಿಯನ್ನು ಪರಿಶೀಲಿಸಿದ ಬಳಿಕ ಸರ್ಕಾರ ಈ ತೀರ್ಮಾನ ಕೈಗೊಂಡಿದ್ದು, ವೈಜ್ಞಾನಿಕ ಮೌಲ್ಯಮಾಪನ ಹಾಗೂ ಪರಿಸರದ ಸಾಗಣೆ ಸಾಮರ್ಥ್ಯದ ಆಧಾರದ ಮೇಲೆ ಸಫಾರಿ ಚಟುವಟಿಕೆಗಳಿಗೆ ಅನುಮೋದನೆ ನೀಡಲಾಗಿದೆ.

ತಾಂತ್ರಿಕ ಸಮಿತಿಯ ಶಿಫಾರಸಿನಂತೆ ವನ್ಯಜೀವಿಗಳ ಸಂರಕ್ಷಣೆ ಮತ್ತು ಪರಿಸರ ಸಮತೋಲನಕ್ಕೆ ಧಕ್ಕೆಯಾಗದ ರೀತಿಯಲ್ಲಿ ನಿಯಂತ್ರಿತ ಹಾಗೂ ಸುಸ್ಥಿರ ಮಾದರಿಯಲ್ಲಿ ಜಂಗಲ್ ಸಫಾರಿ ನಡೆಸಲು ಸೂಚಿಸಲಾಗಿದೆ. ರಾಜ್ಯ ಸರ್ಕಾರದ ಈ ನಿರ್ಧಾರದಿಂದ ಪರಿಸರ ಪ್ರವಾಸೋದ್ಯಮಕ್ಕೆ ಮತ್ತಷ್ಟು ಉತ್ತೇಜನ ಸಿಗಲಿದ್ದು, ಸ್ಥಳೀಯರಿಗೆ ಉದ್ಯೋಗ ಮತ್ತು ಜೀವನೋಪಾಯದ ಅವಕಾಶಗಳು ಹೆಚ್ಚುವ ನಿರೀಕ್ಷೆಯಿದೆ. ಪ್ರವಾಸೋದ್ಯಮ ಚಟುವಟಿಕೆಗಳಿಂದ ಗ್ರಾಮೀಣ ಆರ್ಥಿಕತೆಗೆ ಸಹ ಬಲ ದೊರೆಯಲಿದೆ.

ಕರ್ನಾಟಕವು ಪರಿಸರ ಸ್ನೇಹಿ ಪ್ರವಾಸೋದ್ಯಮ ಕ್ಷೇತ್ರದಲ್ಲಿ ದೇಶದಲ್ಲೇ ಮುಂಚೂಣಿಯಲ್ಲಿದ್ದು, ವನ್ಯಜೀವಿ ಸಂರಕ್ಷಣೆ ಹಾಗೂ ಪ್ರವಾಸೋದ್ಯಮದ ನಡುವೆ ಸಮತೋಲನ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಹಲವು ಕ್ರಮಗಳನ್ನು ಕೈಗೊಂಡಿದೆ. ಬಂಡೀಪುರ ಮತ್ತು ನಾಗರಹೊಳೆ ಸಫಾರಿಗಳ ಪುನರಾರಂಭದಿಂದ ದೇಶ–ವಿದೇಶಗಳ ಪ್ರವಾಸಿಗರಿಗೆ ಉತ್ತಮ ಅನುಭವ ದೊರೆಯಲಿದ್ದು, ವನ್ಯಜೀವಿ ವೀಕ್ಷಣೆಗೆ ಹೊಸ ಉತ್ತೇಜನ ಸಿಗಲಿದೆ.

ಪರಿಸರ ವ್ಯವಸ್ಥೆಯ ಸಮಗ್ರತೆಯನ್ನು ಕಾಪಾಡುತ್ತಲೇ ವನ್ಯಜೀವಿ ಸಂರಕ್ಷಣೆ, ಸ್ಥಳೀಯ ಸಮುದಾಯಗಳ ಜೀವನೋಪಾಯ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ಆದ್ಯತೆ ನೀಡುವ ಬದ್ಧತೆಯನ್ನು ಸರ್ಕಾರ ಮುಂದುವರಿಸಲಿದೆ ಎಂದು ಮುಖ್ಯಮಂತ್ರಿ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

## ಭೂಕಂಪ: ಸಾವಿನ ಸಂಖ್ಯೆ 589ಕ್ಕೆ ಏರಿಕೆ

ಕರಾಕಾಸ್

ವೆನೆಜುವೆಲಾದಲ್ಲಿ ಸಂಭವಿಸಿದ ಪ್ರಬಲ ಅವಳಿ ಭೂಕಂಪ ದೇಶವನ್ನೇ ನಲುಗಿಸಿದೆ. ಭೂಕಂಪದಲ್ಲಿ ಮೃತಪಟ್ಟವರ ಸಂಖ್ಯೆ 589ಕ್ಕೆ ಏರಿಕೆಯಾಗಿದ್ದು, 4,300ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಅವಶೇಷಗಳಡಿ ಸಿಲುಕಿರುವವರಿಗಾಗಿ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ಜೂನ್ 24ರಂದು ವೆನೆಜುವೆಲಾದ ಕೆರಿಬಿಯನ್ ಕರಾವಳಿ ಸಮೀಪ 7.2 ಮತ್ತು 7.5 ತೀವ್ರತೆಯ ಎರಡು ಪ್ರಬಲ ಭೂಕಂಪಗಳು ಸಂಭವಿಸಿದ್ದವು. ಈ ಭೂಕಂಪದಿಂದ ಹಲವು ಕಟ್ಟಡಗಳು ಕುಸಿದಿದ್ದು, ವ್ಯಾಪಕ ಹಾನಿಯಾಗಿದೆ. ಭೂಕಂಪದಿಂದ ವೆನೆಜುವೆಲಾದ ಪ್ರಮುಖ ವಿಮಾನ ನಿಲ್ದಾಣಕ್ಕೂ ಹಾನಿಯಾಗಿದೆ.

# ಮುಂಗಾರು ಸಿದ್ಧತೆ ಸ್ಥಿತಿಗತಿ ಪರಿಶೀಲನೆ

ತುಮಕೂರು

ಜಿಲ್ಲೆಯ ಪ್ರಸ್ತುತ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮ ಹಾಗೂ ವಾರ್ಡ್‌ಗಳ ಸ್ಥಿತಿಗತಿ ಮತ್ತು ಕೈಗೊಂಡಿರುವ ಕ್ರಮಗಳ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಶುಭ ಕಲ್ಯಾಣ್ ಪರಿಶೀಲಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಬಹುದಾದ ಪ್ರದೇಶಗಳ ಕುರಿತು ಅಗತ್ಯ ಮುನ್ನೆಚ್ಚರಿಕೆ ಹಾಗೂ ಸಿದ್ಧತಾ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕುಡಿಯುವ ನೀರಿನ ಮೂಲಗಳ ಪರೀಕ್ಷೆ, ಸ್ವಚ್ಛತೆ ಮತ್ತು ಕ್ಲೋರಿನೇಷನ್ ಪ್ರಗತಿ, 2026ನೇ ಸಾಲಿನ ಪೂರ್ವ ಮುಂಗಾರು ಹಾಗೂ ಮುಂಗಾರು ಮಳೆಯಿಂದ ಉಂಟಾದ ಹಾನಿ ಮತ್ತು ಪರಿಹಾರ ವಿತರಣೆಯ ವಿವರಗಳನ್ನು ಪರಿಶೀಲಿಸಿದ ಅವರು, ಮುಂಗಾರು ಹಂಗಾಮಿನಲ್ಲಿ ಸಂಭವಿಸಬಹುದಾದ ಅತಿವೃಷ್ಟಿ ಮತ್ತು ಅನಾವೃಷ್ಟಿ ಪರಿಸ್ಥಿತಿಗಳಿಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳು ಕೈಗೊಂಡಿರುವ ಪೂರ್ವಸಿದ್ಧತಾ ಕ್ರಮಗಳ ಕುರಿತು ಚರ್ಚಿಸಿದರು.

ಕೃಷಿ, ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಗಳ ವತಿಯಿಂದ ಬಿತ್ತನೆ ಪ್ರಗತಿ, ಬೆಳೆ ಸಮೀಕ್ಷೆ ಹಾಗೂ ಬೆಳೆ ವಿಮೆ ಯೋಜನೆಗಳ ಅನುಷ್ಠಾನದ ಬಗ್ಗೆ ಮಾಹಿತಿ ಪಡೆಯಲಾಯಿತು. ಹೋಬಳಿವಾರು ಮೇವು ಲಭ್ಯತೆ, ಜಿಲ್ಲಾ ವಿಪತ್ತು ಉಪಶಮನ ನಿಧಿ ಅಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಪ್ರಗತಿ, ಜಿಲ್ಲೆಯ ಹವಾಮಾನ ಮತ್ತು ಮಳೆ ಮಾಪನ ಕೇಂದ್ರಗಳ ಕಾರ್ಯನಿರ್ವಹಣೆ ಕುರಿತು ಪರಿಶೀಲನೆ ನಡೆಸಿದರು.

ಹೋಬಳಿ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಗ್ರಾಮ ಮತ್ತು ವಾರ್ಡ್‌ಗಳಿಗೆ ನೀಡಿರುವ ಭೇಟಿ ವಿವರಗಳು, ತಾಲ್ಲೂಕು ಟಾಸ್ಕ್ ಫೋರ್ಸ್ ಸಮಿತಿ ಸಭೆಗಳ ಪ್ರಗತಿ ಹಾಗೂ ತಹಶೀಲ್ದಾರರ ಪಿಡಿ ಖಾತೆಗಳಲ್ಲಿ ಲಭ್ಯವಿರುವ ಅನುದಾನ ಮತ್ತು ಹೆಚ್ಚುವರಿ ಅನುದಾನದ ಬೇಡಿಕೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ವಿಡಿಯೋ ಸಂವಾದದ ಮೂಲಕ ಸಭೆಯಲ್ಲಿ ಭಾಗವಹಿಸಿ ಅಗತ್ಯ ಮಾಹಿತಿಯನ್ನು ಪ್ರಸ್ತುತಪಡಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಹಾಗೂ ವಿವಿಧ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಉಚಿತ ಬೃಹತ್ ಆರೋಗ್ಯ ತಪಾಸಣಾ ಶಿಬಿರ

ತಿಪಟೂರು

ನಗರದ ರೋಟರಿ ಭವನದಲ್ಲಿ ಅಶ್ವಿನಿ ಜುವೆಲರ್ಸ್‌ನ 25ನೇ ವರ್ಷದ ಬೆಳ್ಳಿ ಹಬ್ಬದ ಅಂಗವಾಗಿ ರೋಟರಿ ಕ್ಲಬ್ ಸಹಯೋಗದಲ್ಲಿ ಆಯೋಜಿಸಿದ್ದ ಉಚಿತ ಸೂಪರ್ ಸ್ಪೆಷಾಲಿಟಿ ಬೃಹತ್ ಆರೋಗ್ಯ ತಪಾಸಣಾ ಶಿಬಿರಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಯಿತು.

ನಗರಸಭೆ ಪೌರಾಯುಕ್ತ ವಿಶ್ವೇಶ್ವರ ಬದರಗಡೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿ, ಆರೋಗ್ಯವೇ ಜೀವನದ ಅಮೂಲ್ಯ ಸಂಪತ್ತು. ಪ್ರತಿಯೊಬ್ಬರೂ ತಮ್ಮ ಕುಟುಂಬ ಸದಸ್ಯರೊಂದಿಗೆ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ರೋಗ ಬಂದ ನಂತರ ಚಿಕಿತ್ಸೆ ಪಡೆಯುವುದಕ್ಕಿಂತ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುವುದು ಉತ್ತಮ ಎಂದು ತಿಳಿಸಿದರು.

ವೈದ್ಯ ಡಾ. ಜಿ.ಎಸ್. ಶ್ರೀಧರ್ ಮಾತನಾಡಿ, ಬದಲಾಗುತ್ತಿರುವ ಜೀವನಶೈಲಿ ಹಾಗೂ ಆಹಾರ ಪದ್ಧತಿಯಿಂದ ಚಿಕ್ಕ ವಯಸ್ಸಿನಲ್ಲೇ ಹಲವು ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿವೆ.

ಆದ್ದರಿಂದ ಪ್ರತಿಯೊಬ್ಬರೂ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಪೌಷ್ಟಿಕಾಂಶಯುಕ್ತ ಆಹಾರ, ಹಸಿರು ತರಕಾರಿಗಳ ಸೇವನೆ ಹಾಗೂ ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳುವ ಮೂಲಕ




ಅನೇಕ ರೋಗಗಳನ್ನು ತಡೆಗಟ್ಟಬಹುದು ಎಂದು ಸಲಹೆ ನೀಡಿದರು.

ಶಿಬಿರದಲ್ಲಿ ನೂರಾರು ಮಂದಿ ಭಾಗವಹಿಸಿ ವಿವಿಧ ತಜ್ಞ ವೈದ್ಯರಿಂದ ಉಚಿತ ಆರೋಗ್ಯ ತಪಾಸಣೆ ಮಾಡಿಸಿಕೊಂಡು ವೈದ್ಯಕೀಯ ಸಲಹೆ ಹಾಗೂ ಮಾರ್ಗದರ್ಶನ ಪಡೆದುಕೊಂಡರು. ಆರೋಗ್ಯ ಜಾಗೃತಿ ಮೂಡಿಸುವಲ್ಲಿ ಈ ಶಿಬಿರ ಮಹತ್ವದ ಪಾತ್ರ ವಹಿಸಿತು.

ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಅಧ್ಯಕ್ಷೆ ವನಿತಾ ಪ್ರಸನ್ನಕುಮಾರ್, ಕಾರ್ಯದರ್ಶಿ ಕೋಮಲ, ಅಶ್ವಿನಿ ಜುವೆಲರ್ಸ್‌ನ ಸತೀಶ್, ವಿವಿಧ ಆಸ್ಪತ್ರೆಗಳ ವೈದ್ಯರು, ಸಿಬ್ಬಂದಿ, ರೋಟರಿ ಸಂಸ್ಥೆಯ ಪದಾಧಿಕಾರಿಗಳು, ಸದಸ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ರಸ್ತೆಯಲ್ಲಿ, ನಿಲ್ಲಿಸುತ್ತಿರುವ ಕಂಟೇನರ್‌ಗಳ ತೆರವಿಗೆ ಒತ್ತಾಯಿಸಿ, ಪ್ರತಿಭಟನೆ

ವಿಜಯಪುರ

ರಾಷ್ಟ್ರೀಯ ಹೆದ್ದಾರಿಯ ಪಕ್ಕದಲ್ಲಿರುವ ಸರ್ವಿಸ್ ರಸ್ತೆಯನ್ನು, ಕಂಟೇನರ್ ಗಳ ನಿಲುಗಡೆಗಾಗಿ ಬಳಕೆ ಮಾಡಿಕೊಳ್ಳುತ್ತಿರುವುದರಿಂದ, ವಾಹನ ಸವಾರರು, ಸೇರಿದಂತೆ ನಾಗರಿಕರು ಅಪಘಾತಗಳಿಗೆ ಒಳಗಾಗಿ ಪ್ರಾಣ ಕಳೆದುಕೊಳ್ಳುತ್ತಿದ್ದರೂ, ಸಂಬಂಧಪಟ್ಟವರು ಯಾರೂ ಗಮನಹರಿಸುತ್ತಿಲ್ಲ ಎಂದು ಮುದುಗುರ್ಕಿ, ಇರಿಗೇನಹಳ್ಳಿ, ಬುಳ್ಳಹಳ್ಳಿ, ವೆಂಕಟಗಿರಿಕೋಟೆ ಗ್ರಾಮಸ್ಥರು ಕನ್ನಡ ಜನಸೇನೆಯ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದರು.

ಪ್ರತಿಭಟನಾಕಾರರು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಪೊಲೀಸ್, ಸೇರಿದಂತೆ ಸ್ಥಳೀಯ ಆಡಳಿತದ ವಿರುದ್ಧ ಘೋಷಣೆಗಳು ಕೂಗಿ ಪ್ರತಿಭಟನೆ ನಡೆಸಿದರು.

ವೆಂಕಟಗಿರಿಕೋಟೆ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಆರ್.ಅಮರನಾಥ್ ಮಾತನಾಡಿ, ವೆಂಕಟಗಿರಿಕೋಟೆ, ಮುದುಗುರ್ಕಿ, ಇರಿಗೇನಹಳ್ಳಿ ಗೇಟ್ ನಲ್ಲಿ ಪದೇ ಪದೇ ಅಪಘಾತಗಳು ಆಗುತ್ತಿವೆ. ಈ ಬಗ್ಗೆ ಉಸ್ತುವಾರಿ ಸಚಿವರು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ಜಿಲ್ಲಾಧಿಕಾರಿಗಳ ಗಮನಕ್ಕೆ ತಂದಿದ್ದೇವೆ. ಸಚಿವರು, ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಮುದುಗುರ್ಕಿ ಗ್ರಾಮಕ್ಕೆ ಭೇಟಿ ನೀಡಿ, ಅಪಘಾತಗಳಿಗೆ ಕಾರಣವಾಗುತ್ತಿರುವ ಕಂಟೇನರ್ ಗಳನ್ನು ನಿಲ್ಲಿಸಬಾರದೆಂದು ಸೂಚನೆ ನೀಡಿದ್ದರು. ಆದರೆ, ಸ್ಥಳೀಯ ಪೊಲೀಸರು, ಕಂಟೇನರ್ ಗಳ ನಿಲುಗಡೆಯನ್ನು ತಡೆಯಲು ವಿಫಲರಾಗಿದ್ದಾರೆ.

ನಾವು ಹೆದ್ದಾರಿಗೆ ಅಡ್ಡಿಪಡಿಸಿಲ್ಲ. ಜನರ ಪ್ರಾಣ ಉಳಿಸುವುದೇ ನಮ್ಮ ಉದ್ದೇಶವಾಗಿದೆ. ಸರ್ವಿಸ್ ರಸ್ತೆಯಲ್ಲಿ




ಪ್ರತಿಭಟನೆ ನಡೆಸಲೂ ಅನುಮತಿ ನೀಡದೇ, ಕಂಟೇನರ್ ಗಳ ನಿಲುಗಡೆಗೆ ಅವಕಾಶ ಮಾಡಿಕೊಟ್ಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕನ್ನಡ ಜನಸೇನೆಯ ರಾಜ್ಯಾಧ್ಯಕ್ಷ ಗಿರೀಶ್ ಮಾತನಾಡಿ, ನಾಗಾರ್ಜುನ ಕಾಲೇಜಿನಿಂದ ಆವತಿವರೆಗೆ ಸಂಪರ್ಕ ರಸ್ತೆ ಸರಿಯಾಗಿ ಮಾಡಿಲ್ಲ. ನೂರಾರು ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಸರ್ವಿಸ್ ರಸ್ತೆ ಮಾಡಿದ್ದರೂ, ಕಂಟೇನರ್ ಗಳನ್ನು ನಿಲ್ಲಿಸಿಕೊಳ್ಳಲು ಮಾಡಿದಂತಿದೆ. ಅಡ್ಡಾದಿಡ್ಡಿಯಾಗಿ ನಿಲ್ಲಿಸುತ್ತಾರೆ.

ಸರ್ವಿಸ್ ರಸ್ತೆಯಲ್ಲಿ ಹೋಗಬೇಕಾಗಿರುವವರು, ಹೆದ್ದಾರಿಗೆ ಹೋಗಿ, ಅಪಘಾತಗಳಿಗೆ ತುತ್ತಾಗುತ್ತಿದ್ದಾರೆ. ಹೆಣ್ಣು ಮಕ್ಕಳು, ಮಹಿಳೆಯರು ಓಡಾಡುವುದು ಕಷ್ಟವಾಗಿದೆ.

ನಾವು ಎರಡು ಬಾರಿ ಹೋರಾಟ ಮಾಡಿದರೂ ಪ್ರಯೋಜನವಾಗಿಲ್ಲ. ನಾವು ಈ ಬಗ್ಗೆ ಹೋರಾಟ ಮಾಡಿದರೆ, ನಮ್ಮ ಮೇಲೆ ದೌರ್ಜನ್ಯ ಮಾಡಿಸುತ್ತಿದ್ದಾರೆ. ಯಾವುದೇ ದೌರ್ಜನ್ಯಗಳಿಗೆ ಹೆದರುವ ಮಾತೇ ಇಲ್ಲ. ಕಂಟೇನರ್ ಗಳನ್ನು ತೆರವುಗೊಳಿಸದಿದ್ದರೆ, ರಾಷ್ಟ್ರೀಯ ಹೆದ್ದಾರಿಯನ್ನು ತಡೆದು ಹೋರಾಟ ಮಾಡಬೇಕಾಗುತ್ತದೆ ಎಂದರು.

ಮುದುಗುರ್ಕಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಎಂ.ಮಾರಪ್ಪ ಮಾತನಾಡಿ, 2013 ರಿಂದ ಚತುಷ್ಪಥ ರಸ್ತೆ ಮಾಡಿದ್ದಾರೆ. ನಮ್ಮ ಗ್ರಾಮದವರು ಸುಮಾರು 25 ಮಂದಿ ಸಾವನ್ನಪ್ಪಿದ್ದಾರೆ. ವೇಗವಾಗಿ ಬರುವ ವಾಹನಗಳು ಅಪಘಾತ ಮಾಡಿಹೋಗುತ್ತಾರೆ. ಸಿಮೆಂಟ್ ಕಂಟೇನರ್ ಗಳನ್ನು ಸರ್ವಿಸ್ ರಸ್ತೆಯಲ್ಲಿ ಜನರಿಗೆ ತೊಂದರೆಯಾಗುವಂತೆ ನಿಲ್ಲಿಸಿದರೂ ಪೊಲೀಸರು, ಯಾಕೆ ಕಣ್ಣು ಮುಚ್ಚಿ ಕುಳಿತಿದ್ದಾರೋ ಗೊತ್ತಾಗುತ್ತಿಲ್ಲ. ಸಚಿವರು, ಸಂಸದರು ಗಮನಹರಿಸಿ, ಇಲ್ಲಿನ ಜನರಿಗೆ ಆಗುತ್ತಿರುವ



ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್ ಅವರು ಶುಕ್ರವಾರ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಈ ಸಂರ್ಭರ್ದಲ್ಲಿ ಶಾಸಕರಾದ ಪೊನ್ನಣ್ಣ, ರಾಘವೇಂದ್ರ ಹಿಟ್ನಾಳ್, ಅಪ್ಪಾಜಿ ನಾಡಗೌಡ ಹಾಗೂ ಯಶವಂತರಾಯ ಗೌಡ ಅವರು ಉಪಸ್ಥಿತರಿದ್ದರು.

# ಓಂ ಶಕ್ತಿ ಮಾಲಾಧಾರಿಗಳಿಗೆ ಉಚಿತ ಬಸ್ ಸೇವೆ ಮುಂದುವರಿಕೆ

ಮುಳಬಾಗಿಲು

ಕಳೆದ ಎಂಟು ವರ್ಷಗಳಿಂದ ಓಂ ಶಕ್ತಿ ಮಾಲಾಧಾರಿಗಳಿಗೆ ಉಚಿತ ಬಸ್ ವ್ಯವಸ್ಥೆಯನ್ನು ಕಲ್ಪಿಸುತ್ತಿದ್ದು, ಇದನ್ನು ಯಾವುದೇ ರಾಜಕೀಯ ಉದ್ದೇಶದಿಂದ ಮಾಡುತ್ತಿಲ್ಲ ಎಂದು ಶಾಸಕ ಸಮೃದ್ಧಿ ವಿ. ಮಂಜುನಾಥ ಹೇಳಿದರು.

ನಗರದ ಕುರುಬರಪೇಟೆಯಲ್ಲಿ ನೂತನ ಸಮುದಾಯ ಭವನ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇವರ ಭಕ್ತಿ ಹಾಗೂ ಆಶೀರ್ವಾದದಿಂದ ಈ ಸೇವೆಯನ್ನು ನಿರಂತರವಾಗಿ ಮುಂದುವರಿಸಿಕೊಂಡು ಬರುತ್ತಿದ್ದೇನೆ. ಸಮಾಜ ಸೇವೆಗಾಗಿ ಹೊಸದಾಗಿ ರಾಜಕೀಯಕ್ಕೆ ಬಂದವನಲ್ಲ. ಪ್ರಚಾರಕ್ಕಾಗಿ ಕಾರ್ಯ ಮಾಡುವ ವ್ಯಕ್ತಿಯೂ ಅಲ್ಲ ಎಂದು



ಹೇಳಿದರು.

ಕೆಲವರು ಉಚಿತ ಬಸ್ ವ್ಯವಸ್ಥೆ ಕುರಿತು ಅನಗತ್ಯ ಟೀಕೆ ಮಾಡುತ್ತಿರುವುದನ್ನು ಉಲ್ಲೇಖಿಸಿದ ಅವರು, ಜನಸೇವೆ ಮತ್ತು ಧಾರ್ಮಿಕ ಸೇವೆಯನ್ನು ಪ್ರಾಮಾಣಿಕವಾಗಿ ಮಾಡುತ್ತಿದ್ದೇನೆ. ಜನರ ನಂಬಿಕೆ ಮತ್ತು ದೇವರ ಅನುಗ್ರಹವೇ ನನಗೆ ಪ್ರೇರಣೆ ಎಂದು ತಿಳಿಸಿದರು.

ನಾನು ಸುಲಭವಾಗಿ ಭರವಸೆ ನೀಡುವುದಿಲ್ಲ. ಆದರೆ ಒಮ್ಮೆ ಮಾತು ಕೊಟ್ಟರೆ ಅದನ್ನು ಉಳಿಸಿಕೊಳ್ಳಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ. ಕೊಟ್ಟ ಮಾತನ್ನು ತಪ್ಪಿಸಿದ ಉದಾಹರಣೆಗಳು ಇಲ್ಲ ಎಂದು ಶಾಸಕರು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಯುವ ಮುಖಂಡ ಸಂಗೊಳ್ಳಿ ವೆಂಕಟೇಶ್, ಕುರುಬ ಸಮುದಾಯದ ಯುವಕರಿಗೆ ಶಿಕ್ಷಣ, ಉದ್ಯೋಗ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಬೆಳೆಯಲು ಹೆಚ್ಚಿನ ಅವಕಾಶಗಳನ್ನು ಕಲ್ಪಿಸಬೇಕು. ಸಮುದಾಯದ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕಿದ್ದು, ಪರಸ್ಪರ ಕಾಲೆಳೆಯುವ ಮನೋಭಾವವನ್ನು ಬಿಟ್ಟು ಸಹಕಾರದ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕುರುಬ ಸಮುದಾಯವು ನಂಬಿಕೆ, ಪ್ರೀತಿ ಮತ್ತು ವಿಶ್ವಾಸಕ್ಕೆ ಹೆಸರುವಾಸಿಯಾಗಿದ್ದು, ಸಮಾಜದ ಹಿತಕ್ಕಾಗಿ ಎಲ್ಲ ರೀತಿಯ ಸಹಕಾರ ನೀಡಲು ತಾವು ಸದಾ ಸಿದ್ಧರಿರುವುದಾಗಿ ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕ ನಲ್ಲೂರು ರಘುಪತಿ ರೆಡ್ಡಿ, ನಗರಸಭೆಯ ಮಾಜಿ ಅಧ್ಯಕ್ಷ ಎಂ.ಆರ್. ಮುರಳಿ, ಕನಕ ನೌಕರರ ಸಂಘದ ತಾಲೂಕು ಅಧ್ಯಕ್ಷ ಎಸ್.ಆರ್. ವೆಂಕಟೇಶಪ್ಪ, ಕುರುಬರ ಸಂಘದ ತಾಲೂಕು ಅಧ್ಯಕ್ಷ ಸುಬ್ರಮಣಿ, ಗ್ರಾ.ಪಂ. ಸದಸ್ಯರ ಮಹಾ ಒಕ್ಕೂಟದ ಮಾಜಿ ಅಧ್ಯಕ್ಷ ಪೆತ್ತಾಂಡ್ಲಹಳ್ಳಿ ಶಂಕರ್ ಸೇರಿದಂತೆ ಹಲವು ಗಣ್ಯರು, ಮುಖಂಡರು ಹಾಗೂ ಸಮುದಾಯದ ಸದಸ್ಯರು ಭಾಗವಹಿಸಿದ್ದರು.

# 4ರಂದು ಅಹವಾಲು ಪರಿಶೀಲನಾ ಸಭೆ

ರಾಮನಗರ

ಬೆಂಗಳೂರು ದಕ್ಷಿಣ ಜಿಲ್ಲೆಯ ಮಾಗಡಿ (4) ಮತ್ತು ಹಾರೋಹಳ್ಳಿ (4) ತಾಲ್ಲೂಕಿನಲ್ಲಿ ಹೊಸದಾಗಿ ಪುನರ್ ರಚನೆಯಾದ ಒಟ್ಟು 8 ಗ್ರಾಮ ಪಂಚಾಯಿತಿಗಳಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 5ರಂತೆ ಗ್ರಾಮ ಪಂಚಾಯತಿಗೆ ವಾರ್ಡ್/ಕ್ಷೇತ್ರ ವಾರು ಜನಸಂಖ್ಯೆ ಹಾಗೂ ಆಯ್ಕೆಯಾಗಬೇಕಾದ ಪ್ರಾದೇಶಿಕ ಚುನಾವಣಾ ಕ್ಷೇತ್ರವ್ಯಾಪ್ತಿಗೆ ಸದಸ್ಯರ ಸಂಖ್ಯೆ ಕರಡು ಅಧಿಸೂಚನೆಯನ್ನು ಕೋಷ್ಟಕ–1ರಲ್ಲಿ ಹೊರಡಿಸಲಾಗಿದೆ.

ಈ ಅಧಿಸೂಚನೆಗೆ 2026ರ ಜುಲೈ 2ರೊಳಗೆ ಸಲ್ಲಿಸಲ್ಪಟ್ಟ ಆಕ್ಷೇಪಣೆ/ಅಹವಾಲುಗಳ ಪರಿಶೀಲನಾ ಸಭೆಯನ್ನು ಜುಲೈ 4ರಂದು ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 12.30ರ ವರೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ನ್ಯಾಯಾಲಯದ ಸಭಾಂಗಣದಲ್ಲಿ ನಡೆಸಲಾಗುವುದು.

ಆಕ್ಷೇಪಣೆ ಮತ್ತು ಅಹವಾಲುಗಳನ್ನು ಸಲ್ಲಿಸಿರುವವರು ಪರಿಶೀಲನಾ ಸಭೆಯಲ್ಲಿ ಭಾಗವಹಿಸಲು ಇಚ್ಛಿಸಿದಲ್ಲಿ ಸರ್ಕಾರದಿಂದ ನೀಡಿರುವ ಭಾವಚಿತ್ರವುಳ್ಳ ಗುರುತಿನ ಚೀಟಿಯ ಮೂಲ ಪ್ರತಿಯೊಂದಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿ, ಜಿಲ್ಲಾ ಕಚೇರಿ ಸಂಕೀರ್ಣ, ಬಿ.ಎಂ. ರಸ್ತೆ, ರಾಮನಗರ, ಬೆಂಗಳೂರು ದಕ್ಷಿಣ ಜಿಲ್ಲೆ ಇಲ್ಲಿಗೆ ಹಾಜರಾಗುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ

ರಾಮನಗರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ ಕಾರ್ಯಕ್ರಮವನ್ನು ಜೂ. 27ರ ಶನಿವಾರ ಆಯೋಜಿಸಲಾಗಿದೆ.

ಜೂ.27ರ ಶನಿವಾರ ಬೆಳಿಗ್ಗೆ 9 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ನಾಡಪ್ರಭು ಶ್ರೀ ಕೆಂಪೇಗೌಡರವರ ಪ್ರತಿಮೆಗೆ ಪುಷ್ಪಾರ್ಚನೆ ಹಾಗೂ ಬೆಳ್ಳಿ ರಥದಲ್ಲಿ ಮೆರವಣಿಗೆ ಆಯೋಜಿಸಲಾಗಿದೆ. ನಂತರ ಬೆಳಿಗ್ಗೆ 10.30ಕ್ಕೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ವೇದಿಕೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ ಅವರು ಅಧ್ಯಕ್ಷತೆ ವಹಿಸುವರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್. ಮಂಜುನಾಥ್, ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಸಿ. ಬಾಲಕೃಷ್ಣ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಪಿ. ಯೋಗೇಶ್ವರ್, ವಿಧಾನಪರಿಷತ್ ಶಾಸಕರಾದ ಎಸ್. ಪುಟ್ಟಣ್ಣ, ಎಸ್. ರವಿ, ಸುಧಾಮ್ ದಾಸ್, ರಾಮೋಜಿ ಗೌಡ, ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎಚ್.ಎಂ. ರೇವಣ್ಣ, ಬೆಂಗಳೂರು ದಕ್ಷಿಣ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಕೆ. ರಾಜು, ಬಿ.ಎಂ.ಐ.ಸಿ.ಪಿ.ಎ ಅಧ್ಯಕ್ಷರಾದ ರಘುನಂದನ್ ರಾಮಣ್ಣ, ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಅಧ್ಯಕ್ಷರಾದ ಎನ್. ಗಂಗಾಧರ್, ರಾಮನಗರ ನಗರಸಭೆ ಅಧ್ಯಕ್ಷರಾದ ಕೆ. ಶೇಷಾದ್ರಿ (ಶಶಿ), ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಜಿ.ಎನ್. ನಟರಾಜು ಗಾಣಕಲ್, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಚೇತನ್ ಕುಮಾರ್ ಎ.ಬಿ ಹಾಗೂ ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ವಿ.ಎಚ್. ರಾಜು ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

# ವಿದ್ಯುತ್ ವ್ಯತ್ಯಯ

ರಾಮನಗರ

66/11 ಕೆವಿ ಇಗ್ಗಲೂರು ವಿದ್ಯುತ್ ಉಪಕೇಂದ್ರಗಳ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಇಗ್ಗಲೂರು, 66ಕೆವಿ ಇಎಚ್‌ಟಿ, ಎಂ/ಎಸ್ ಸಿಐಎನ್‌ಎಲ್, ನಿಡಗೋಡಿ, ಮಾರೇಗೌಡನದೊಡ್ಡಿ, ನೇರಳೂರು, ಸರಗೂರು, ಎಲೆತೋಟದಹಳ್ಳಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳು ವ್ಯಾಪ್ತಿಯಲ್ಲಿ ಜೂ. 26ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಸಗೊಬ್ಬರ ಪೂರೈಕೆ, ವಿತರಣೆಯಲ್ಲಿ ವ್ಯತ್ಯಯವಾಗದಂತೆ ಕ್ರಮವಹಿಸಲು ಸೂಚನೆ

ರಾಮನಗರ

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರಸಗೊಬ್ಬರ ಪೂರೈಕೆ ಮತ್ತು ವಿತರಣೆಯಲ್ಲಿ ಯಾವುದೇ ರೀತಿಯ ವ್ಯತ್ಯಯವಾಗದಂತೆ ಎಚ್ಚರಿಕೆಯ ಕ್ರಮವಹಿಸಬೇಕು ಎಂದು ರಸಗೊಬ್ಬರ ಉತ್ಪಾದಕ ಸಂಸ್ಥೆಗಳ ಪ್ರತಿನಿಧಿಗಳಿಗೆ ಹಾಗೂ ಮಾರಾಟಗಾರರಿಗೆ ಜಿಲ್ಲಾಧಿಕಾರಿ ಯಶವಂತ್ ಗುರುಕರ್ ಅವರು ಸೂಚಿಸಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ 2026–27ನೇ ಸಾಲಿನ ಕೃಷಿ ಪರಿಕರ ತಯಾರಕ ಮತ್ತು ಮಾರಟಗಾರರ ಜಿಲ್ಲಾ ಮಟ್ಟದ ಸಭೆಯಲ್ಲಿ ಮಾತಾನಾಡಿದರು.

ಜಿಲ್ಲೆಯಲ್ಲಿ ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಹಾಗೂ ಕೃತಕ ಅಭಾವ ಸೃಷ್ಟಿಸಿದ ಪ್ರಕರಣ ಕಂಡುಬಂದರೆ ಪರವಾನಗಿ ರದ್ದು ಮಾಡಲಾಗುವುದು ಎಂದ ಅವರು, ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ರಸಗೊಬ್ಬರ ಮಾರಾಟ ಪ್ರಮಾಣವನ್ನು ಗಮನಿಸಬೇಕು, ಅಗತ್ಯವಿರುವ ಪ್ರಮಾಣವನ್ನು ಮುಂಜಾಗ್ರತೆಯಾಗಿ ದಾಸ್ತಾನು ಮಾಡಿಕೊಂಡು ಬೇಡಿಕೆಗೆ ತಕ್ಕಂತೆ ಪೂರೈಸಬೇಕು. ರೈತರಿಗೆ ಯಾವುದೇ ಅಡೆತಡೆಯಾಗದಂತೆ ಅಧಿಕಾರಿಗಳು ನಿಗವಹಿಸಬೇಕು ಎಂದು ಸೂಚಿಸಿದರು.

ರೈತರಿಗೆ ರಸಗೊಬ್ಬರ ಲಭ್ಯತೆ ಬಗ್ಗೆ ಅರಿವು ಮೂಡಿಸಲು ಮತ್ತು ರಸಗೊಬ್ಬರಗಳಿಗೆ ಪರ್ಯಾಯವಾಗಿ ಸಾವಯವ ಗೊಬ್ಬರ ಹೆಚ್ಚು ಬಳಕೆ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳು ಜಾಗೃತಿ ಮೂಡಿಸಬೇಕು, ರಸಗೊಬ್ಬರ ಮಾರಾಟ ಮಳಿಗೆಯ ಮುಂದೆ ದಾಸ್ತಾನು ಮತ್ತು ಗರಿಷ್ಟ ಮಾರಟ ದರ ವಿವರಗಳನ್ನು ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶಿಸಬೇಕು.

ಭಾರತ ಸಾರಥಿ
27/06/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಆಸ್ತಿ ದಾಖಲೀಕರಣ ಪ್ರಗತಿ ಪರಿಶೀಲನೆ

ತುಮಕೂರು

ಜಿಲ್ಲೆಯ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಸಂರಕ್ಷಣೆ, ಅಭಿವೃದ್ಧಿ, ಸರ್ವೆ ಕಾರ್ಯಗಳ ಪ್ರಗತಿ ಹಾಗೂ ಒತ್ತುವರಿ ತೆರವು ಕಾರ್ಯಗಳ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಅಫೆಕ್ಸ್ ಸಮಿತಿಯ ಅಧ್ಯಕ್ಷರಾದ ಶುಭ ಕಲ್ಯಾಣ್ ಅವರು ಸಮಗ್ರ ಪರಿಶೀಲನೆ ನಡೆಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ನಡೆದ ಜಿಲ್ಲಾ ಅಫೆಕ್ಸ್ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಒಟ್ಟು ಇರುವ ಕೆರೆಗಳು, ಸರ್ವೆ ಮಾಡಿರುವ ಹಾಗೂ ಸರ್ವೆಗೆ ಬಾಕಿ ಇರುವ ಕೆರೆಗಳ ವಿವರ, ಒತ್ತುವರಿಯಾಗಿರುವ ಕೆರೆಗಳು ಮತ್ತು ಒತ್ತುವರಿ ತೆರವುಗೊಳಿಸಿರುವ ಕೆರೆಗಳ ಸ್ಥಿತಿಗತಿಯನ್ನು ಅವಲೋಕಿಸಿದರು.

ಅಲ್ಲದೆ, ಮಲೀನಗೊಂಡ ಮತ್ತು ಕಲುಷಿತಗೊಂಡ ಕೆರೆಗಳ ಮಾಹಿತಿ, ಕುಡಿಯುವ ನೀರಿಗೆ ಯೋಗ್ಯವಾಗಿರುವ ಕೆರೆಗಳ ಸ್ಥಿತಿ, ಪುನರುಜ್ಜೀವನಗೊಳಿಸಿರುವ ಕೆರೆಗಳ ಸಂಖ್ಯೆ ಹಾಗೂ ಕೈಗೊಂಡಿರುವ ಅಭಿವೃದ್ಧಿ ಕ್ರಮಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ–2014ರ ಅನ್ವಯ ಕೈಗೊಂಡಿರುವ ಕ್ರಮಗಳು ಹಾಗೂ ಕೆರೆಗಳ ಸಂರಕ್ಷಣೆಗೆ ಜಿಲ್ಲಾಡಳಿತ ಕೈಗೊಂಡಿರುವ ವಿಶೇಷ ಕಾರ್ಯಚಟುವಟಿಕೆಗಳ ಬಗ್ಗೆ ಚರ್ಚಿಸಿದರು.

ಸಭೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿನ ದೇವಾಲಯಗಳು ಹಾಗೂ ಧಾರ್ಮಿಕ ದತ್ತಿ ಸಂಸ್ಥೆಗಳ ಆಸ್ತಿ ಮತ್ತು ಜಮೀನುಗಳ ದಾಖಲೀಕರಣ, ಸರ್ವೆ ಕಾರ್ಯಗಳ ಪ್ರಗತಿ ಮತ್ತು ಬಾಕಿ ಇರುವ ಪ್ರಕರಣಗಳ ಕುರಿತು ಪರಿಶೀಲನೆ ನಡೆಸಿದರು.

ಕೆರೆಗಳ ಸಂರಕ್ಷಣೆ, ಒತ್ತುವರಿ ತಡೆ ಹಾಗೂ ದೇವಾಲಯ ಆಸ್ತಿಗಳ ಸಮಗ್ರ ದಾಖಲೀಕರಣ ಕಾರ್ಯಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ವಿಡಿಯೋ ಸಂವಾದದ ಮೂಲಕ ಭಾಗವಹಿಸಿ ಅಗತ್ಯ ಮಾಹಿತಿಯನ್ನು ಪ್ರಸ್ತುತಪಡಿಸಿದರು.

# ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ

ತುಮಕೂರು

ಜಿಲ್ಲೆಯಲ್ಲಿ ಇದೇ ಜೂನ್ 28ರಂದು ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ಜಿಲ್ಲಾ ಪಲ್ಸ್ ಪೋಲಿಯೋ ಚಾಲನಾ ಸಮಿತಿ ಸಭೆಯು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿ ಶುಭ ಕಲ್ಯಾಣ್ ಅವರ ಅಧ್ಯಕ್ಷತೆಯಲ್ಲಿ ಗುರುವಾರ ನಡೆಯಿತು.

ಸಭೆಯಲ್ಲಿ ಜಿಲ್ಲಾಧಿಕಾರಿಗಳು ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಪೂರ್ವಸಿದ್ಧತೆಗಳ ಕುರಿತು ಸಮಗ್ರ ಪರಿಶೀಲನೆ ನಡೆಸಲಾಯಿತು. ಲಸಿಕಾ ಕೇಂದ್ರಗಳ ಸ್ಥಾಪನೆ, ಲಸಿಕೆಗಳ ಸುರಕ್ಷಿತ ಸಂಗ್ರಹಣೆ ಮತ್ತು ವಿತರಣೆ, ಸಾರಿಗೆ ವ್ಯವಸ್ಥೆ, ಜಾಗೃತಿ ಅಭಿಯಾನಗಳು ಹಾಗೂ ವಿವಿಧ ಇಲಾಖೆಗಳ ನಡುವಿನ ಸಮನ್ವಯ ಕ್ರಮಗಳ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದರು.

ನಂತರ ಮಾತನಾಡಿದ ಅವರು, ಜಿಲ್ಲೆಯ ಐದು ವರ್ಷದೊಳಗಿನ ಯಾವುದೇ ಮಗು ಪಲ್ಸ್ ಪೋಲಿಯೋ ಲಸಿಕೆಯಿಂದ ವಂಚಿತವಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು. ಆರೋಗ್ಯ ಇಲಾಖೆ ಸೇರಿದಂತೆ ಎಲ್ಲಾ ಸಂಬಂಧಿತ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ನಿರ್ದೇಶಿಸಿದರು.

ಮನೆ–ಮನೆ ಭೇಟಿ ತಂಡಗಳು, ಸಂಚಾರ ಲಸಿಕಾ ತಂಡಗಳು ಹಾಗೂ ವಿಶೇಷ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುವ ತಂಡಗಳ ಮೂಲಕ ಶೇ.100ರಷ್ಟು ಲಸಿಕಾ ವ್ಯಾಪ್ತಿಯನ್ನು ಸಾಧಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಅಗತ್ಯವಿರುವ ಎಲ್ಲಾ ಸಿದ್ಧತೆಗಳನ್ನು ಪೂರ್ಣಗೊಳಿಸುವಂತೆ ಸಭೆಯಲ್ಲಿ ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು, ತಹಶೀಲ್ದಾರರು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಚಾಲನಾ ಸಮಿತಿಯ ಇತರ ಸದಸ್ಯರು ಭಾಗವಹಿಸಿದ್ದರು.

# ಕೇಂದ್ರ ಸಚಿವ ಸಂಪುಟ ಪುನರ್‌ರಚನೆ ಸಾಧ್ಯತೆ

ನವದೆಹಲಿ

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರದಲ್ಲಿ ಶೀಘ್ರ ಸಚಿವ ಸಂಪುಟ ಪುನರ್ ರಚನೆಯಾಗುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ಮಾಡಿರುವ ಗೃಹ ಸಚಿವ ಅಮಿತ್ ಶಾ ಭಾನುವಾರ ಅಥವಾ ಸೋಮವಾರ ಸಚಿವ ಸಂಪುಟ ಪುನರ್ ರಚನೆಗೆ ಸಮಯ ಕೇಳಿದ್ದಾರೆ ಎಂದು ಹೇಳಲಾಗಿದೆ.

ಹೊಸ ಸಂಪುಟದಲ್ಲಿ ಹಲವು ಮಂದಿ ಸಚಿವರು ಹಾಗೂ ಆರು ಮಂದಿ ರಾಜ್ಯಖಾತೆ ಸಚಿವರನ್ನು ಕೈ ಬಿಡಲಾಗುತ್ತಿದೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್‌ರನ್ನು ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯಕ್ಕೆ ವರ್ಗಾವಣೆ ಮಾಡುವ ಸಾಧ್ಯತೆ ಇದೆ. ಧರ್ಮೇಂದ್ರ ಪ್ರಧಾನ್ ಮತ್ತು ಹರ್ದೀಪ್ ಸಿಂಗ್ ಪುರಿ ಅವರನ್ನು ಸಚಿವ ಸಂಪುಟದಿಂದ ಹೊರಗಿಡ್ತಾರೆ ಎಂಬ ಚರ್ಚೆ ಆಗ್ತಿದೆ.

ಆರ್‌ಬಿಐ ಮಾಜಿ ಗವರ್ನರ್ ಮತ್ತು ಪ್ರಧಾನ ಮಂತ್ರಿಯ ಕಚೇರಿಯ ಪ್ರಧಾನ ಕಾರ್ಯದರ್ಶಿ ಶಕ್ತಿಕಾಂತ ದಾಸ್ ಅವರಿಗೆ ಸಚಿವ ಸ್ಥಾನ ನೀಡುವ ಸಾಧ್ಯತೆ ಹೆಚ್ಚಿದೆ. ಆಪ್ ಹಾಗೂ ಉದ್ಧವ್ ಠಾಕ್ರೆ ನೇತೃತ್ವದ ಶಿವಸೇನೆ ತೊರೆದು ಬಂದಿರುವ ಸಂಸದರಿಗೆ ಮಣೆ ಹಾಕುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.

ಬಿಹಾರದ ಮಾಜಿ ಸಿಎಂ ನಿತೀಶ್ ಕುಮಾರ್, ಅನುರಾಗ್ ಠಾಕೂರ್, ಮಹಾರಾಷ್ಟ್ರ ಡಿಸಿಎಂ ಏಕನಾಥ್ ಶಿಂಧೆ ಪುತ್ರ ಶ್ರೀಕಾಂತ್ ಶಿಂಧೆ, ಯುಬಿಟಿಯಿಂದ ಬಂದಿರುವ ಸಂಸದ ಸಂಜಯ್ ದಿನಾ ಪಾಟೀಲ್, ಪಂಜಾಬ್ ಆಪ್‌ನಿಂದ ಬಂದಿರುವ ರಾಘವಚಡ್ಡಾ, ಅಶೋಕ್ ಮಿತ್ತಲ್ ಸೇರಿ ಹಲವರಿಗೆ ಸಚಿವ ಸ್ಥಾನ ಸಿಗೋ ಸಾಧ್ಯತೆ ಇದೆ ಎನ್ನಲಾಗಿದೆ.

# ಕೊರಟಗೆರೆಯಲ್ಲಿ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ

ಕೊರಟಗೆರೆ



ಮಕ್ಕಳನ್ನು ಪೋಲಿಯೋ ಮುಕ್ತ ಭವಿಷ್ಯದತ್ತ ಕೊಂಡೊಯ್ಯುವ ಉದ್ದೇಶದಿಂದ ಜೂನ್ 28ರಿಂದ ಜುಲೈ 1ರವರೆಗೆ ಕೊರಟಗೆರೆ ತಾಲೂಕಿನಲ್ಲಿ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಹಶೀಲ್ದಾರ್ ಮಂಜುನಾಥ್ ಕೆ. ತಿಳಿಸಿದ್ದಾರೆ.

ಪಟ್ಟಣದ ಮಿನಿ ವಿಧಾನಸೌಧ ಸಭಾಂಗಣದಲ್ಲಿ ನಡೆದ ಪೋಲಿಯೋ ದಿನದ ವಿಶೇಷ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ನಿರ್ದೇಶನದಂತೆ ಹುಟ್ಟಿದ ದಿನದ ಮಗುವಿನಿಂದ ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಾಗುವುದು ಎಂದು ತಿಳಿಸಿದರು.

ತಾಲೂಕಿನ ಗ್ರಾಮೀಣ ಭಾಗದಲ್ಲಿ 142 ಆರೋಗ್ಯ ಕೇಂದ್ರಗಳಲ್ಲಿ ಹಾಗೂ ಕೊರಟಗೆರೆ ಪಟ್ಟಣದ 15 ವಾರ್ಡ್‌ಗಳಲ್ಲಿ ಲಸಿಕಾ ಕೇಂದ್ರಗಳನ್ನು ತೆರೆಯಲಾಗುತ್ತಿದೆ. ಇದರ ಜೊತೆಗೆ ಬಸ್ ನಿಲ್ದಾಣ, ಗೊರವನಹಳ್ಳಿ ದೇವಾಲಯ, ಹೋಬಳಿ ಕೇಂದ್ರಗಳು ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿಯೂ ವಿಶೇಷ ಲಸಿಕಾ ಕೇಂದ್ರಗಳನ್ನು ಸ್ಥಾಪಿಸಿ ಮಕ್ಕಳಿಗೆ ಲಸಿಕೆ ನೀಡುವ ವ್ಯವಸ್ಥೆ ಮಾಡಲಾಗಿದೆ.

ಪೋಷಕರು ತಮ್ಮ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಬೇಕು. ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ವಿಶೇಷ ಕಾಳಜಿ ವಹಿಸಲಾಗಿದ್ದು, ನಿಗದಿತ ದಿನಗಳ ನಂತರವೂ ಎರಡು ದಿನಗಳ ಕಾಲ ಮನೆ–ಮನೆಗೆ ತೆರಳಿ ಲಸಿಕೆ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

ಸಭೆಯಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಅಪೂರ್ವ, ತಾಲೂಕು ಆರೋಗ್ಯಾಧಿಕಾರಿ ಡಾ. ಜ್ಯೋತ್ಸ್ನಾ ರೆಡ್ಡಿ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಉಮೇಶ್ ಹಾಗೂ ಶಿಕ್ಷಣ, ಸಮಾಜ ಕಲ್ಯಾಣ ಮತ್ತು ಆರೋಗ್ಯ ಇಲಾಖೆಯ ಅಧಿಕಾರಿಗಳು ಭಾಗವಹಿಸಿ ಅಭಿಯಾನದ ಯಶಸ್ಸಿಗೆ ಅಗತ್ಯ ಸಿದ್ಧತೆಗಳ ಕುರಿತು ಚರ್ಚಿಸಿದರು.

ತಾಲೂಕಿನ ಎಲ್ಲಾ ಪೋಷಕರು ತಮ್ಮ ಮಕ್ಕಳ ಆರೋಗ್ಯ ಮತ್ತು ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಪಲ್ಸ್ ಪೋಲಿಯೋ ಅಭಿಯಾನದಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

# ‘ಬರವಣಿಗೆಯೆಂಬ ದೀಪ ಹಚ್ಚಿದಾಗ ಸಾಹಿತ್ಯದ ಸಂಪತ್ತು ಹೊರಬರುತ್ತದೆ’



ತುಮಕೂರು

ಸಾಹಿತ್ಯ ಎಂಬುದು ಕತ್ತಲಲ್ಲಿ ಅಡಗಿರುವ ಸಂಪತ್ತು. ಅದನ್ನು ಬರವಣಿಗೆ ಎಂಬ ದೀಪದ ಬೆಳಕನ್ನು ಹಚ್ಚಿ ಹೊರಗೆ ತರಬೇಕು. ಬರವಣಿಗೆಯನ್ನು ಆರಂಭಿಸಲು ಯಾರೂ ಹಿಂಜರಿಯಬಾರದು ಎಂದು ರಾಷ್ಟ್ರಕವಿ ಕುವೆಂಪು ಅವರ ಪುತ್ರಿ ತಾರಿಣಿ ಚಿದಾನಂದಗೌಡ ಹೇಳಿದರು.

ತುಮಕೂರು ವಿಶ್ವವಿದ್ಯಾನಿಲಯದ ಕುವೆಂಪು ಅಧ್ಯಯನ ಪೀಠದ ವತಿಯಿಂದ ಜೂ. 25ರ ಗುರುವಾರದಂದು ಆಯೋಜಿಸಿದ್ದ ಮಗಳು ಕಂಡಂತೆ ಕುವೆಂಪು ಎಂಬ ಶೀರ್ಷಿಕೆಯ ಆಪ್ತ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಗಳು ಕಂಡಂತೆ ಕುವೆಂಪು ಪುಸ್ತಕ ಬರೆಯುವಾಗ ಮೊದಲು ಭಯವಿತ್ತು. ಆದರೆ ಬರೆಯಲು ಆರಂಭಿಸಿದ ಮೇಲೆ ಅದು ಮುಗಿಯುವವರೆಗೂ ತಿಳಿಯಲೇ ಇಲ್ಲ. ಕುವೆಂಪು ಅವರು ಮನೆಯಲ್ಲಿ ಎಲ್ಲರಂತೆ ಅತ್ಯಂತ ಸರಳ ವ್ಯಕ್ತಿಯಾಗಿದ್ದರು. ಮಕ್ಕಳ ವಿದ್ಯಾಭ್ಯಾಸ ಹಾಗೂ ಅವರ ಇಷ್ಟಗಳಿಗೆ ಕುವೆಂಪು ಸದಾ ಪ್ರೋತ್ಸಾಹ ನೀಡುತ್ತಿದ್ದರು. ಮಕ್ಕಳು ಏನನ್ನು ಸಾಧಿಸಬೇಕೆಂದುಕೊಳ್ಳುತ್ತಾರೋ ಅದಕ್ಕೆ ತಮ್ಮ ಕೈಲಾದ ಸಹಾಯ ಮಾಡುತ್ತಿದ್ದರು ಎಂದರು.

ತುಮಕೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ವೆಂಕಟೇಶ್ವರಲು ಎಂ. ಮಾತನಾಡಿ ಉತ್ತಮವಾದ ದೂರದೃಷ್ಟಿ ಹಾಗೂ ಗುರಿಯನ್ನಿಟ್ಟುಕೊಂಡು ಪ್ರಾಮಾಣಿಕವಾಗಿ ಕೆಲಸ ಮಾಡಿದರೆ ಯಾವುದೇ ಕೆಲಸವೂ ಅಸಾಧ್ಯವಲ್ಲ.

ಅಂದಿನ ಕುಲಪತಿಗಳಾಗಿದ್ದ ಚಿದಾನಂದ ಗೌಡರು ಹಾಗೂ ಅವರಿಗೆ ಬೆಂಬಲ ನೀಡಿದ ಕುಲಸಚಿವ ಪ್ರವೀಣ್ ಚಂದ್ರಪಾಂಡೆ ಅವರು ಕೇವಲ ನಾಲ್ಕು ವರ್ಷಗಳಲ್ಲಿ ಕುವೆಂಪು ವಿವಿಯನ್ನು ತಳಮಟ್ಟದಿಂದ ಕಟ್ಟಿ ಬೆಳೆಸಿದರು. ಸಾರಿಗೆ, ವಿದ್ಯುತ್, ನೀರು ಸೇರಿದಂತೆ ಎಲ್ಲಾ ಮೂಲಸೌಕರ್ಯಗಳನ್ನು ಒದಗಿಸಿ, ಇಂದು ಆ ವಿಶ್ವವಿದ್ಯಾನಿಲಯವು ಉಳಿದೆಲ್ಲವುಗಳಿಗಿಂತ ವಿಭಿನ್ನವಾಗಿ ನಿಲ್ಲುವಂತೆ ಮಾಡಿದ್ದಾರೆ. ಕುವೆಂಪು ವಿವಿಯ ಮಾದರಿಯಲ್ಲೇ ತುಮಕೂರು ವಿಶ್ವವಿದ್ಯಾನಿಲಯವೂ ಅಭಿವೃದ್ಧಿಯಾಗಬೇಕು ಎಂಬುದು ನಮ್ಮೆಲ್ಲರ ಗುರಿಯಾಗಿದೆ. ಹಿರಿಯರ ಮಾರ್ಗದರ್ಶನದಲ್ಲಿ ನಾವು ಮುಂದೆ ಸಾಗಲಿದ್ದೇವೆ ಎಂದು ತಿಳಿಸಿದರು.

ಕುವೆಂಪು ಅಧ್ಯಯನ ಪೀಠದ ಸಂಯೋಜಕರಾದ ಪ್ರೊ. ಗೀತಾ ವಸಂತ ಅವರು ಆಶಯ ನುಡಿಗಳನ್ನಾಡಿದರು. ಕುವೆಂಪು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ. ಕೆ. ಚಿದಾನಂದಗೌಡ ಉಪಸ್ಥಿತರಿದ್ದರು.

# ಪುಸ್ತಕ ಸಂತೆ ಮಳಿಗೆಗೆ ಭೂಮಿ ಪೂಜೆ

ತುಮಕೂರು



ನಗರದಲ್ಲಿ ಈ ತಿಂಗಳ 26ರಿಂದ ನಡೆಯಲಿರುವ ವೀರಲೋಕ ಪುಸ್ತಕ ಸಂತೆ’ಯ ಪುಸ್ತಕ ಹಬ್ಬದ ಅಂಗವಾಗಿ ಗುರುವಾರ ಗಾಜಿನಮನೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸಿದ್ದಲಿಂಗಪ್ಪ ಅವರು ಪುಸ್ತಕ ಸಂತೆಯ ಮೊದಲ ಮಳಿಗೆಗೆ ಭೂಮಿ ಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಸಿದ್ದಲಿಂಗಪ್ಪನವರು, ತುಮಕೂರಿನಲ್ಲಿ ಪುಸ್ತಕಗಳ ಮೂಲಕ ಕನ್ನಡವನ್ನು ಕಟ್ಟುವ ಸತ್ಕಾರ್ಯ ಅದ್ಭುತವಾಗಿ ನಡೆಯುತ್ತಿದೆ. ಭಾಷೆ ಮತ್ತು ಸಾಹಿತ್ಯವನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಪರಮ ಕರ್ತವ್ಯವಾಗಿದೆ. ಈ ಬೃಹತ್ ಜ್ಞಾನದ ಹಬ್ಬವನ್ನು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಉದ್ಘಾಟಿಸಲಿದ್ದಾರೆ. ಹಾಗೂ ಈ ಬೃಹತ್ ಪುಸ್ತಕ ಸಂತೆಗೆ ಹಿರಿಯ ಸಾಹಿತಿ ಡಾ. ಹಂ.ಪ. ನಾಗರಾಜಯ್ಯ ಚಾಲನೆ ನೀಡುವರು. ಶಾಸಕ ಜಿ.ಬಿ. ಜ್ಯೋತಿಗಣೇಶ್ ಅವರು ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವರು. ಹಿರಿಯ ಸಾಹಿತಿ ನಾಡೋದ ಡಾ. ಬರಗೂರು ರಾಮಚಂದ್ರಪ್ಪ ಜ್ಞಾನದ ಜಾತ್ರೆಯ ಅಧ್ಯಕ್ಷತೆ ವಹಿಸುವರು ಎಂದು ಹೇಳಿದರು.

ಪುಸ್ತಕ ಸಂತೆಯ ಸಂಚಾಲಕ ಆರ್.ಕೆ ಶ್ರೀನಿವಾಸ ಮಾತನಾಡಿ, ಇಂದಿನ ಡಿಜಿಟಲ್ ಯುಗದಲ್ಲಿ ಪುಸ್ತಕಗಳ ಓದು ಅತ್ಯಗತ್ಯವಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಈ ಸಂತೆಗೆ ಆಗಮಿಸಬೇಕು ಮತ್ತು ತಮಗೆ ಇಷ್ಟವಾದ ಪುಸ್ತಕಗಳನ್ನು ಖರೀದಿಸುವ ಮೂಲಕ ನಮ್ಮ ಶ್ರೀಮಂತ ಪುಸ್ತಕ ಸಂಸ್ಕೃತಿಯನ್ನು ಮುಂದಿನ ತಲೆಮಾರಿಗೆ ದಾಟಿಸುವ ಜವಾಬ್ದಾರಿಯನ್ನು ಹೊರಬೇಕು ಎಂದು ಕರೆಕೊಟ್ಟರು.

ತುಮಕೂರು ಜಿಲ್ಲೆಯು ಸದಾ ಸಾಹಿತ್ಯ ಮತ್ತು ವೈಚಾರಿಕತೆಗೆ ಭದ್ರ ಬುನಾದಿ ಹಾಕಿಕೊಟ್ಟಿರುವ ಪುಣ್ಯಭೂಮಿ. ಜಿಲ್ಲೆಯ ಎಲ್ಲಾ ಸಾಹಿತ್ಯಾಸಕ್ತರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಗಾಜಿನ ಮನೆಗೆ ಆಗಮಿಸಬೇಕು. ವಿಶೇಷವಾಗಿ ಪೋಷಕರು ತಮ್ಮ ಮಕ್ಕಳನ್ನು ಈ ಸಂತೆಗೆ ಕರೆತಂದು, ಅವರಿಗೆ ಪುಸ್ತಕಗಳ ಅದ್ಭುತ ಲೋಕವನ್ನು ಪ್ರತ್ಯಕ್ಷವಾಗಿ ಪರಿಚಯಿಸಿಕೊಡಬೇಕು ಎಂದು ಹೇಳಿದರು.

ಸಂಘಟಕರಾದ ರೇವಣಸಿದ್ದಪ್ಪ, ಮಲ್ಲಿಕಾರ್ಜುನ ಕೆಂಕೆರೆ, ಗುರುನಾಥ ರಾಜಗೀರ, ಅನಂತ ಕುಣಿಗಲ್, ಜ್ಯೋತಿ, ಸೌಮ್ಯ, ನರೇಂದ್ರಬಾಬು, ಶೈಲಜಾ, ರಕ್ಷಿತ್ ಕುಮಾರ, ಗೋವರ್ಧನ, ರಾಧ, ಚಂದನಾ, ಶಿವಕುಮಾರ್, ಜಗದೀಶ್‌ಗೌಡ, ನಂದನ, ಸಿದ್ದೇಗೌಡ ಮೊದಲಾದವರು ಈ ವೇಳೆ ಹಾಜರಿದ್ದರು.

# ಮೂವರನ್ನು ಕೊಂದಿರುವುದಾಗಿ ಒಪ್ಪಿಕೊಂಡ ಕೊಲೆ ಆರೋಪಿಗಳು..!

ಬೆಂಗಳೂರು

ಇಲ್ಲಿನ ಕೆಆರ್ ಪುರದ ಸೀಗೇಹಳ್ಳಿಯಲ್ಲಿ ನಡೆದಿದ್ದ ಕೊಲೆ ಪ್ರಕರಣದಲ್ಲಿ ಮೂವರನ್ನು ನಾವೇ ಹತ್ಯೆಗೈದಿರುವುದಾಗಿ ಆರೋಪಿಗಳಾದ ಶ್ವೇತಾ ಹಾಗೂ ಕೆನತ್ ಪೊಲೀಸರ ಮುಂದೆ ತಪ್ಪೊಪ್ಪಿಕೊಂಡಿದ್ದಾರೆ.

ಕಳೆದ ಸೋಮವಾರ ಕೌಟುಂಬಿಕ ಕಲಹದ ಹಿನ್ನೆಲೆ ಶ್ವೇತಾ ಮತ್ತು ಆಕೆಯ ಪ್ರಿಯಕರ ಕೆನತ್ ಸೇರಿಕೊಂಡು ಶ್ವೇತಾಳ ತಂದೆ ಸೋಮಸುಂದರ್, ತಾಯಿ ಮುತ್ತು ಲಕ್ಷ್ಮೀ ಮತ್ತು ಸಹೋದರಿ ಸುಪ್ರಿಯಾಳನ್ನು ತನ್ನ ಫ್ಲ್ಯಾಟ್‌ನಲ್ಲೇ ಬರ್ಬರವಾಗಿ ಇರಿದು ಕೊಲೆ ಮಾಡಿದ್ರು. ನಂತರ ಇಬ್ಬರನ್ನು ಪುದುಚೇರಿಯಲ್ಲಿ ಪೊಲೀಸರು ಬಂಧಿಸಿದ್ದಾರೆ.

ಪೊಲೀಸರು ಇಬ್ಬರ ಪ್ರಾಥಮಿಕ ವಿಚಾರಣೆ ನಡೆಸಿದ್ದು, ಈ ವೇಳೆ ಮೂವರನ್ನು ನಾವೇ ಕೊಲೆ ಮಾಡಿದ್ದೇವೆ ಎಂದು ಒಪ್ಪಿಕೊಂಡಿದ್ದಾರೆ. ಆದರೆ ಕೊಲೆಗೆ ಕಾರಣ ಏನು ಅನ್ನೋದರ ಬಗ್ಗೆ ಖಚಿತವಾಗಿ ಮಾಹಿತಿ ನೀಡುತ್ತಿಲ್ಲ. ಹೀಗಾಗಿ ಕೆಆರ್ ಪುರ ಪೊಲೀಸರು, ಇಬ್ಬರನ್ನೂ ತಲಾ ಹದಿನೈದು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ಪಡೆದಿದ್ದಾರೆ.

ಪೊಲೀಸರ ವಿಚಾರಣೆಯಲ್ಲಿ ಕೊಲೆಗೆ ಅಸಲಿ ಕಾರಣ ಏನು ಅನ್ನೋದು ಗೊತ್ತಾಗಬೇಕಿದೆ.

# ಫಸಲ್ ವಿಮಾ ಯೋಜನೆಗೆ ನೋಂದಣಿ ಆರಂಭ

ಬೆಂಗಳೂರು ಗ್ರಾಮಾಂತರ ಜಿಲ್ಲೆ

2026–27ನೇ ಸಾಲಿನ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆಯಡಿ ಬೆಳೆ ವಿಮೆ ನೋಂದಣಿ ಪ್ರಕ್ರಿಯೆ ಆರಂಭವಾಗಿದ್ದು, ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಯೋಜನೆಯ ಪ್ರಯೋಜನ ಪಡೆಯುವಂತೆ ಕೃಷಿ ಇಲಾಖೆ ಕರೆ ನೀಡಿದೆ.

ಜಿಲ್ಲೆಯಲ್ಲಿ ಎಸ್‌ಬಿಐ ಜನರಲ್ ಇನ್ಶೂರೆನ್ಸ್ ಕಂಪನಿ ಲಿಮಿಟೆಡ್ ಸಹಯೋಗದೊಂದಿಗೆ ಹೋಬಳಿ ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಯೋಜನೆ ಜಾರಿಗೊಳಿಸಲಾಗುತ್ತಿದೆ. ಪ್ರಕೃತಿ ವಿಕೋಪ, ಅತಿವೃಷ್ಟಿ, ಅನಾವೃಷ್ಟಿ ಸೇರಿದಂತೆ ವಿವಿಧ ಕಾರಣಗಳಿಂದ ಬೆಳೆ ನಷ್ಟ ಉಂಟಾದ ಸಂದರ್ಭದಲ್ಲಿ ರೈತರಿಗೆ ಆರ್ಥಿಕ ಭದ್ರತೆ ಒದಗಿಸುವ ಉದ್ದೇಶದಿಂದ ಈ ಯೋಜನೆ ರೂಪಿಸಲಾಗಿದೆ.

ಆಸಕ್ತ ರೈತರು ಪಹಣಿ, ಕಂದಾಯ ರಶೀದಿ, ಖಾತೆ ಪುಸ್ತಕ, ಬ್ಯಾಂಕ್ ಪಾಸ್‌ಬುಕ್ ಹಾಗೂ ಆಧಾರ್ ಕಾರ್ಡ್ ದಾಖಲಾತಿಗಳೊಂದಿಗೆ ಸಮೀಪದ ಬ್ಯಾಂಕ್, ಕರ್ನಾಟಕ ಒನ್, ಗ್ರಾಮ ಒನ್ ಅಥವಾ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಿ ಬೆಳೆ ವಿಮೆ ಮಾಡಿಸಿಕೊಳ್ಳಬಹುದು.

ಯೋಜನೆಯಡಿ ವಿವಿಧ ಬೆಳೆಗಳಿಗೆ ಆಕರ್ಷಕ ವಿಮಾ ಸೌಲಭ್ಯ ಕಲ್ಪಿಸಲಾಗಿದೆ. ರಾಗಿ, ಭತ್ತ, ಮುಸುಕಿನ ಜೋಳ, ಹುರಳಿ, ನೆಲಗಡಲೆ, ತೊಗರಿ ಹಾಗೂ ಟೊಮೆಟೊ ಸೇರಿದಂತೆ ಪ್ರಮುಖ ಬೆಳೆಗಳಿಗೆ ವಿಮಾ ರಕ್ಷಣೆ ದೊರೆಯಲಿದೆ. ರೈತರು ಕಡಿಮೆ ಪ್ರೀಮಿಯಂ ಪಾವತಿಸಿ ಹೆಚ್ಚಿನ ವಿಮಾ ಮೊತ್ತದ ಭದ್ರತೆ ಪಡೆಯಬಹುದಾಗಿದೆ.

ರಾಗಿ ಬೆಳೆಗೆ ಎಕರೆಗೆ 19,960 ರೂಪಾಯಿವರೆಗೆ, ಭತ್ತಕ್ಕೆ 43,440 ರೂಪಾಯಿವರೆಗೆ, ಮುಸುಕಿನ ಜೋಳಕ್ಕೆ 30,480 ರೂಪಾಯಿವರೆಗೆ, ನೆಲಗಡಲೆಗೆ 26,160 ರೂಪಾಯಿವರೆಗೆ ಹಾಗೂ ಟೊಮೆಟೊ ಬೆಳೆಗೆ 67,920 ರೂಪಾಯಿವರೆಗೆ ವಿಮಾ ರಕ್ಷಣೆ ಲಭ್ಯವಿದೆ. ಹವಾಮಾನ ವೈಪರೀತ್ಯದಿಂದ ಬೆಳೆ ನಷ್ಟ ಉಂಟಾದರೆ ರೈತರಿಗೆ ಪರಿಹಾರ ದೊರೆಯುವ ಮೂಲಕ ಆರ್ಥಿಕ ಸಂಕಷ್ಟವನ್ನು ಎದುರಿಸಲು ನೆರವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ರೈತರು ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಸಹಕಾರ ಇಲಾಖೆ, ಬೆಳೆ ವಿಮಾ ಸಂಸ್ಥೆ ಅಥವಾ ಬೆಳೆ ಸಾಲ ವಿತರಿಸುವ ಬ್ಯಾಂಕ್ ಹಾಗೂ ಸಹಕಾರಿ ಬ್ಯಾಂಕ್‌ಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕಿ ಬಿ.ಜಿ. ಕಲಾವತಿ ತಿಳಿಸಿದ್ದಾರೆ.

ಕೃಷಿ ಕ್ಷೇತ್ರದಲ್ಲಿ ಅನಿಶ್ಚಿತತೆ ಹೆಚ್ಚುತ್ತಿರುವ ಸಂದರ್ಭದಲ್ಲಿ ಬೆಳೆ ವಿಮೆ ರೈತರ ಬದುಕಿಗೆ ಭದ್ರತೆಯ ಕವಚವಾಗಿದ್ದು, ಜಿಲ್ಲೆಯ ರೈತರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಇಲಾಖೆ ಮನವಿ ಮಾಡಿದೆ.

# ಲೇಖನ ಸಾಮಗ್ರಿಗಳ ವಿತರಣೆ

ತುಮಕೂರು

ಇಡೀ ರಾಜ್ಯದಲ್ಲಿಯೇ ತುಮಕೂರಿನ ಉತ್ತರ ಬಡಾವಣೆ ಶಾಲೆ ಅತ್ಯಂತ ಸುಸಜ್ಜಿತ ಶಾಲೆಯಾಗಿ ಪರಿವರ್ತನೆಗೊಂಡು, ಸರಕಾರಿ ಶಾಲೆಗಳಲ್ಲಿಯೇ ಮಾದರಿ ಶಾಲೆ ಎನಿಸಿದೆ ಎಂದು ತುಮಕೂರು ನಗರ ಶಾಸಕ ಜಿ.ಬಿ.ಜೋತಿಗಣೇಶ್ ಅಭಿಪ್ರಾಯಪಟ್ಟಿದ್ದಾರೆ.

ನಗರದ ಶಿರಾಗೇಟ್‌ನ ಸರಕಾರಿ ಹಿರಿಯಪ್ರಾಥಮಿಕ ಶಾಲೆ ಉತ್ತರ ಬಡಾವಣೆಯಲ್ಲಿ ಶ್ರೀಚಾಮುಂಡೇಶ್ವರಿ ಎಜುಕೇಷನಲ್ ಚಾರಿಟಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಲೇಖನ ಸಾಮಗ್ರಿಗಳ ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತಿದ್ದ ಅವರು, ಅಜಾಕ್ಸ್ ಇಂಜಿನಿಯರಿಂಗ್ ಕಂಪನಿಯ ಸಿ.ಎಸ್.ಆರ್. ನಿಧಿ ಸಹಯೋಗದಲ್ಲಿ ಸುಮಾರು 15 ಕೋಟಿ ರೂ ಅದ್ಬುತವಾದ ಕಟ್ಟಡ ನಿರ್ಮಾಣ ಗೊಂಡಿದ್ದು,ಮುಂದಿನ ದಿನಗಳಲ್ಲಿ ಇಡೀ ಶಾಲೆಯ ಚಿತ್ರಣವೇ ಬದಲಾಗಲಿದೆ.2018–19ರಲ್ಲಿ 500 ಇದ್ದ ಮಕ್ಕಳ ಸಂಖ್ಯೆ ಇಂದು 1060ಕ್ಕೆ ಮುಟ್ಟಿದೆ.

ಮತ್ತಷ್ಟು ಎತ್ತರಕ್ಕೆ ಶಾಲೆ ಹಾಗೂ ಶಾಲೆಯಲ್ಲಿ ಕಲಿಯುವ ಮಕ್ಕಳು ಬೆಳೆಯುವಂತಾಗಲಿ.ಇದಕ್ಕೆ ಅಗತ್ಯವಿರುವ ಪೂರಕ ಸಿಬ್ಬಂದಿ ಮತ್ತು ಮೂಲಭೂತ ಸೌಕರ್ಯವನ್ನು ಇಲಾಖೆಯ ಕಲ್ಪಿಸುವಂತೆ ಉಪಸ್ಥಿತರಿದ್ದ ಡಿಡಿಪಿಐ ಮತ್ತು ಬಿಇಓ ಅವರಿಗೆ ಸೂಚಿಸಿದರು.

ಅಜಾಕ್ಸ್ ಸಂಸ್ಥೆ ತನ್ನ ಸಿ.ಎಸ್.ಆರ್.ನಿಧಿಯಲ್ಲಿ ಸರಕಾರಿ ಶಾಲೆಗಳ ಅಭಿವೃದ್ದಿಗಾಗಿ ಶಾಲೆಗಳನ್ನು ಆಯ್ಕೆಯಲ್ಲಿ ತೊಡಗಿದ್ದ ಸಂದರ್ಭದಲ್ಲಿ ಸುಮಾರು 7 ಎಕರೆ ವಿಸ್ತೀರ್ಣ ಹೊಂದಿರುವ ಈ ಶಾಲೆ ಎಲ್ಲ ರೀತಿಯಿಂದಲೂ ಅವರಿಗೆ ಸೂಕ್ತವಾಗಿ ಕಂಡು ಬಂದ ಹಿನ್ನೆಲೆಯಲ್ಲಿ ಸುಮಾರು 15 ಕೋಟಿ ರೂಗಳನ್ನು ಖರ್ಚು ಮಾಡಿ, ಮೂರು ಹಂತಸ್ಥಿನ ಕಟ್ಟಡದ ಜೊತೆಗೆ, ಕಂಪ್ಯೂಟರ್ ಲ್ಯಾಬ್, ಸ್ಮಾರ್ಟ್ ಕ್ಲಾಸ್ ರೂ ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ನಿರ್ಮಾಣ ಮಾಡಿ, ಒಂದು ಹಂತದವರೆಗೆ ನಿರ್ವಹಣೆಯನ್ನು ಮಾಡಲು ಮುಂದಾಗಿದೆ.

ಈಗಾಗಲೇ ಕಟ್ಟಡ ಪೂರ್ಣಗೊಂಡಿದ್ದು, ಉಳಿದ ಕಾಮಗಾರಿಗಳು ಪ್ರಗತಿಯಲ್ಲಿವೆ. ಉತ್ತರ ಬಡಾವಣೆ ಶಾಲೆಯನ್ನು ಆಯ್ಕೆ ಮಾಡಿಕೊಂಡಿದ್ದಕ್ಕಾಗಿ ಅಜಾಕ್ಸ್ ಇಂಜಿನಿಯರಿಂಗ್ ಕಂಪನಿಯ ಮುಖ್ಯಸ್ಥರಾದ ವಿಜಯನ್ ಹಾಗೂ ಸಿ.ಎಸ್.ಆರ್.ಅಧಿಕಾರಿ ಮಂಜುನಾಥ್ ಅವರಿಗೆ ಹಾಗು ಇದಕ್ಕಾಗಿ ಶ್ರಮಿಸಿದ ಡಿಡಿಪಿಐ, ಬಿಇಓ ಹಾಗೂ ಶಾಲೆಯ ಪದವಿಧರ ಮುಖ್ಯ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರಿಗೆ ಹೃಪೂರ್ವ ಅಭಿನಂದನೆ ಸಲ್ಲಿಸುವುದಾಗಿ ಶಾಸಕ ಜಿ.ಬಿ.ಜೋತಿಗಣೇಶ್ ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಹನುಮಂತಪ್ಪ ಮಾತನಾಡಿ,ಉತ್ತರ ಬಡಾವಣೆಯ ಶಾಲೆ ಇಂದು ಈ ಮಟ್ಟಕ್ಕೆ ಬರಲು ಕಾರಣ, ಐಎಎಸ್ ಅಧಿಕಾರಿ ಜಿ.ಪ್ರಭು ಹಾಗೂ ಇಲ್ಲಿನ ಶಿಕ್ಷಕರ ವೃಂದ.ಈಗಾಗಲೇ ಶಾಲೆಯಲ್ಲಿರುವ ಶಿಕ್ಷಕರ ಕೊರತೆ ನೀಗಿಸಲು ಹೆಚ್ಚುವರಿಯಾಗಿ ನಾಲ್ವರು ಅಥಿತಿ ಶಿಕ್ಷಕರನ್ನು ನೀಡಲಾಗಿದೆ. ಅಲ್ಲದೆ ಶೈಕ್ಷಣಿಕ ವ್ಯವಸ್ಥೆಗೆ ಧಕ್ಕೆಯಾಗದಂತೆ ಎಲ್ಲಾ ಕ್ರಮಗಳನ್ನು ಇಲಾಖೆ ವಹಿಸುತ್ತಿದೆ.ಇದರ ಪ್ರಯೋಜನವನ್ನು ಮಕ್ಕಳು ಪಡೆದುಕೊಂಡು, ತಮ್ಮ ಭವಿಷ್ಯವನ್ನು ಉತ್ತಮ ಪಡಿಸಿಕೊಳ್ಳುವಂತೆ ಸಲಹೆ ನೀಡಿದರು.

# 2.73 ಕೋಟಿ ರೂ. ಬಾಕಿ ಕರ ವಸೂಲಾತಿಗೆ ಆದೇಶ

ಕೋಲಾರ




ಜಿಲ್ಲೆಯ ಸಾರ್ವಜನಿಕ ಗ್ರಂಥಾಲಯಗಳ ಅಭಿವೃದ್ಧಿ, ಮೂಲಸೌಕರ್ಯ ವೃದ್ಧಿ ಹಾಗೂ ಡಿಜಿಟಲೀಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳಾದ ಡಾ. ಎಂ. ಆರ್. ರವಿ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಗ್ರಂಥಾಲಯ ಪ್ರಾಧಿಕಾರ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯು ಜರುಗಿತು.

ಸಭೆಯಲ್ಲಿ ಜಿಲ್ಲೆಯ ವಿವಿಧ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಿಂದ ಪ್ರಾಧಿಕಾರಕ್ಕೆ ಬರಬೇಕಾದ ಗ್ರಂಥಾಲಯ ಉಪಕರದ (ಖಭಡಿಚಿಡಿಥಿ ಅಥ) ಪ್ರಗತಿ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು, ಬಾಕಿ ಉಳಿಸಿಕೊಂಡಿರುವ ಸ್ಥಳೀಯ ಸಂಸ್ಥೆಗಳ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿ ತಕ್ಷಣವೇ ಬಾಕಿ ಮೊತ್ತವನ್ನು ಪಾವತಿ ಮಾಡಿಸಿಕೊಳ್ಳಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲೆಯ ಒಟ್ಟು 6 ಪ್ರಮುಖ ಸ್ಥಳೀಯ ಸಂಸ್ಥೆಗಳಿಂದ 31/03/2026ರ ಅಂತ್ಯಕ್ಕೆ ರೂ. 3,55,24,939.00 ಒಟ್ಟು ಗ್ರಂಥಾಲಯ ಕರದ ಬೇಡಿಕೆ ಇತ್ತು. ಇದರಲ್ಲಿ ಕೇವಲ ರೂ. 82,16,809.00 ಮಾತ್ರ ಪ್ರಾಧಿಕಾರಕ್ಕೆ ಪಾವತಿಯಾಗಿದ್ದು, ಇನ್ನುಳಿದಂತೆ ಬರೋಬ್ಬರಿ ರೂ. 2,73,08,130.00 (2.73 ಕೋಟಿ ರೂ.) ಮೊತ್ತ ಬಾಕಿ ಉಳಿದಿದೆ.

ಸ್ಥಳೀಯ ಸಂಸ್ಥೆಗಳ ಬಾಕಿ ವಿವರವನ್ನು ಪರಿಶೀಲಿಸಿದಾಗ ಮುಳಬಾಗಲು ನಗರಸಭೆಯು ರೂ. 72,69,000.00 ಬೇಡಿಕೆಯಲ್ಲಿ ಒಂದೂ ರೂಪಾಯಿ ಪಾವತಿಸದೆ ಸಂಪೂರ್ಣ ರೂ. 72,69,000.00 ಮೊತ್ತವನ್ನು ಬಾಕಿ ಉಳಿಸಿಕೊಂಡಿರುವುದು ಕಂಡುಬಂದಿದೆ. ಈ ಬಗ್ಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಜಿಲ್ಲಾಧಿಕಾರಿಗಳು, ಮುಳಬಾಗಲು ನಗರಸಭೆಯಿಂದ ತಕ್ಷಣವೇ ಬಾಕಿ ವಸೂಲು ಮಾಡಲು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಇನ್ನುಳಿದಂತೆ ಕೋಲಾರ ನಗರಸಭೆಯಿಂದ ರೂ. 50,91,578.00, ಬಂಗಾರಪೇಟೆ ಪುರಸಭೆಯಿಂದ ರೂ. 50,89,554.00, ಮಾಲೂರು ಪುರಸಭೆಯಿಂದ ರೂ. 49,27,000.00, ಶ್ರೀನಿವಾಸಪುರ ಪುರಸಭೆಯಿಂದ ರೂ. 26,11,045.00 ಹಾಗೂ ವೇಮಗಲ್/ಕುರುಗಲ್ ಪಟ್ಟಣ ಪಂಚಾಯಿತಿಯಿಂದ ರೂ. 23,19,953.00 ಗ್ರಂಥಾಲಯ ಕರ ಬಾಕಿ ಬರಬೇಕಿದೆ ಎಂದರು.

ಜಿಲ್ಲಾ ಕೇಂದ್ರ ಗ್ರಂಥಾಲಯಕ್ಕೆ ಆಗಮಿಸುವ ಓದುಗರ ಸಂಖ್ಯೆ ದಿನೇ ದಿನೇ ಹೆಚ್ಚುತ್ತಿರುವುದರಿಂದ ಸದ್ಯ ಇರುವ ಸ್ಥಳಾವಕಾಶದ ಕೊರತೆಯನ್ನು ನೀಗಿಸಲು, ಪ್ರಸ್ತುತ ಇರುವ ಕಟ್ಟಡದ ಮೇಲ್ಭಾಗದಲ್ಲಿ ಓದುಗರಿಗಾಗಿ ಮತ್ತೊಂದು ಪ್ರತ್ಯೇಕ ಸವಲತ್ತಿನ ಓದುಗರ ವಿಭಾಗವನ್ನು ಸಿದ್ಧಪಡಿಸಲು ಜಿಲ್ಲಾಧಿಕಾರಿಗಳು ಆದೇಶಿಸಿದರು.

ಸಾರ್ವಜನಿಕರಿಗೆ ಹಾಗೂ ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗೆ ಡಿಜಿಟಲ್ ಜ್ಞಾನ ಒದಗಿಸುವ ನಿಟ್ಟಿನಲ್ಲಿ ಗ್ರಂಥಾಲಯಗಳಲ್ಲಿ ಗಣಕಯಂತ್ರಗಳ (ಕಂಪ್ಯೂಟರ್) ಸಂಖ್ಯೆಯನ್ನು ಹೆಚ್ಚಿಸಲು ಮತ್ತು ಉತ್ತಮ ಇಂಟರ್ನೆಟ್ ಸಂಪರ್ಕ ಕಲ್ಪಿಸಲು ತೀರ್ಮಾನಿಸಲಾಯಿತು. ಕೆ.ಜಿ.ಎಫ್.ನ ಸರ್ಕಾರಿ ಡಿಗ್ರಿ ಕಾಲೇಜಿನಲ್ಲಿ ಹಾಗೂ ಮಾಸ್ತಿಯಲ್ಲಿ ನೂತನ ಡಿಜಿಟಲ್ ಗ್ರಂಥಾಲಯಗಳನ್ನು ಆರಂಭಿಸುವ ಕುರಿತು ಸಭೆಯಲ್ಲಿ ಚರ್ಚಿಸಿ, ಶೀಘ್ರ ಕ್ರಮ ಕೈಗೊಳ್ಳಲು ನಿರ್ಧರಿಸಲಾಯಿತು.

ಈ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಗ್ರಂಥಾಲಯ ಪ್ರಾಧಿಕಾರದ ಉಪಾಧ್ಯಕ್ಷರು ಸೇರಿದಂತೆ ಅಲ್ಮಾಸ್ ಪರ್ವೀನ್ ತಾಜ್, ಸರ್ಕಾಯ್ ಮಹಿಳಾ ಕಾಲೇಜಿನ ಲೆಕ್ಕಧಿಕಾರಿ ದಿಲೀಪ್, ಸರ್ಕಾರಿ ಪದವೀಪೂರ್ವ ಕಾಲೇಜಿನ ಉಪಪ್ರಂಶುಪಾಲರಾದ ಸುನಂದಮ್ಮ, ಜಿಲ್ಲಾ ಪತ್ರಕರ್ತರ ಸಹಕಾರ ಸಂಘದ ಅಧ್ಯಕ್ಷ ಗಣೇಶ್, ಹಿರಿಯ ಪತ್ರಕರ್ತ ಬಿ. ವಿ. ಗೋಪಿನಾಥ್, ಬಿ.ಇ.ಓ (ಃಇಔ) ಉಮಾ ಸೇರಿದಂತೆ ಪ್ರಾಧಿಕಾರದ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# 'ರಾಜ್ಯದ ಜ್ವಲಂತ ಸಮಸ್ಯೆಗಳ ವಿರುದ್ಧ ಬಿಜೆಪಿ ಹೋರಾಟ'



ಮಂಗಳೂರು

ರಾಜ್ಯದ ಜ್ವಲಂತ ಸಮಸ್ಯೆಗಳ ಪರಿಹಾರಕ್ಕಾಗಿ ಬಿಜೆಪಿ ರಾಜ್ಯಾದ್ಯಂತ ಹೋರಾಟ ನಡೆಸಲಿದ್ದು, ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಜನರ ಮುಂದಿಡುವ ಕೆಲಸವನ್ನು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಕೈಗೊಳ್ಳಲಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಹೇಳಿದರು.

ಶ್ರೀ ಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ನೀಡಿದ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಪಕ್ಷದ ಸಂಘಟನೆ ಹಾಗೂ ಲಕ್ಷಾಂತರ ಕಾರ್ಯಕರ್ತರ ಶಕ್ತಿಯ ಮೇಲೆ ಸಂಪೂರ್ಣ ವಿಶ್ವಾಸವಿದೆ. ಜನವಿರೋಧಿ, ರೈತ ವಿರೋಧಿ, ಯುವಕರ ವಿರೋಧಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಜನಾಭಿಪ್ರಾಯ ರೂಪಿಸಿ, ಮುಂದಿನ ಚುನಾವಣೆಯಲ್ಲಿ ಬಿಜೆಪಿಯನ್ನು ಅಧಿಕಾರಕ್ಕೆ ತರುವ ಗುರಿಯೊಂದಿಗೆ ಕಾರ್ಯಕರ್ತರು ಕೆಲಸ ಮಾಡಲಿದ್ದಾರೆ ಎಂದು ತಿಳಿಸಿದರು.

ರಾಜ್ಯದಲ್ಲಿ ಆಡಳಿತ ವೈಫಲ್ಯ, ಬೆಲೆ ಏರಿಕೆ, ರೈತರ ಸಮಸ್ಯೆಗಳು, ನಿರುದ್ಯೋಗ ಸೇರಿದಂತೆ ಜನಸಾಮಾನ್ಯರನ್ನು ಕಾಡುತ್ತಿರುವ ಹಲವು ಸಮಸ್ಯೆಗಳ ವಿರುದ್ಧ ಬಿಜೆಪಿ ನಿರಂತರ ಹೋರಾಟ ನಡೆಸಲಿದೆ ಎಂದು ಹೇಳಿದರು.

ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ಅವರ ಇತ್ತೀಚಿನ ಹೇಳಿಕೆಗಳ ಕುರಿತು ಪ್ರತಿಕ್ರಿಯಿಸಿದ ವಿಜಯೇಂದ್ರ, ಹಿಂದಿನ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಹಲವು ಹಿಂದೂ ಕಾರ್ಯಕರ್ತರ ಹತ್ಯೆಗಳು ನಡೆದಿದ್ದವು. ಸಾವಿರಾರು ಕಾರ್ಯಕರ್ತರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಅವರನ್ನು ಕುಗ್ಗಿಸುವ ಪ್ರಯತ್ನಗಳು ನಡೆದಿದ್ದವು ಎಂದು ಆರೋಪಿಸಿದರು.


ಅಂತಹ ಸಂದರ್ಭದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದು ಉತ್ತಮ ಆಡಳಿತ ನೀಡಲು ಸಾಧ್ಯವಾಯಿತು. ಪಕ್ಷದ ಕಾರ್ಯಕರ್ತರಿಗೆ ವಿವಿಧ ನಿಗಮ ಮತ್ತು ಮಂಡಳಿಗಳಲ್ಲಿ ಅವಕಾಶ ಕಲ್ಪಿಸಲಾಗಿತ್ತು ಎಂದು ಹೇಳಿದರು.

ಪಕ್ಷದ ವಿರುದ್ಧ ಅಡ್ಡ ಮತದಾನ ಮಾಡಿದವರ ವಿಚಾರದಲ್ಲಿ ವರಿಷ್ಠರು ಗಮನ ಹರಿಸಿದ್ದು, ಸತ್ಯ ಹೊರಬರಲಿದೆ. ಈ ಕುರಿತು ಹೆಚ್ಚಿನ ಚರ್ಚೆ ಬೇಡ ಎಂದು ಅವರು ತಿಳಿಸಿದರು.

ಮುಂದಿನ ಎರಡು ವರ್ಷಗಳಲ್ಲಿ ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಪಕ್ಷದ ಸಂಘಟನೆಯನ್ನು ಇನ್ನಷ್ಟು ಬಲಪಡಿಸಲಾಗುವುದು. ಮುಖ್ಯಮಂತ್ರಿ ಸಿದ್ದರಾಮಯ್ಯ ಎಷ್ಟೇ ಪ್ರಬಲರಾಗಿದ್ದರೂ ಬಿಜೆಪಿ ಹಿಂಜರಿಯುವುದಿಲ್ಲ. ಮುಂದಿನ ಚುನಾವಣೆಯಲ್ಲಿ ಬಿಜೆಪಿ ಬಹುಮತದೊಂದಿಗೆ ಅಧಿಕಾರಕ್ಕೆ ಬಂದು ಜನರಿಗೆ ಉತ್ತಮ ಆಡಳಿತ ನೀಡಲಿದೆ ಎಂಬ ವಿಶ್ವಾಸವಿದೆ ಎಂದು ವಿಜಯೇಂದ್ರ ಹೇಳಿದರು.

ಧರ್ಮಸ್ಥಳ ಭೇಟಿಯ ಸಂದರ್ಭದಲ್ಲಿ ಪಕ್ಷದ ಸ್ಥಳೀಯ ಮುಖಂಡರು, ಕಾರ್ಯಕರ್ತರು ಹಾಗೂ ಬೆಂಬಲಿಗರು ಉಪಸ್ಥಿತರಿದ್ದರು.

ವಿಶ್ವ ಧಾರ್ಮಿಕ ನಾಯಕರ ಸಮಾವೇಶದಲ್ಲಿ ಭಾಗವಹಿಸಲು ಮಾರಿಷಸ್‌ಗೆ ಆಗಮಿಸಿರುವ ಶ್ರೀ ಪುತ್ತಿಗೆ ಶ್ರೀಗಳನ್ನು ಮಾರಿಷಸ್ ದೇಶದ ರಾಷ್ಟ್ರಪತಿಗಳಾದ ಶ್ರೀ ಧರಮ್ ಬೀರ್ ಗೋಕುಲ್ ಅವರು ರಾಷ್ಟ್ರಪತಿ ಭವನಕ್ಕೆ ಸ್ವಾಗತಿಸಿ ಸುಮಾರು ನಲವತ್ತು ನಿಮಿಷಗಳ ಕಾಲ ಪ್ರಸ್ತುತ ವಿದ್ಯಮಾನಗಳ ಕುರಿತು ಮಾತುಕತೆ ನಡೆಸಿದರು. ಪೂಜ್ಯ ಶ್ರೀಗಳ ಧಾರ್ಮಿಕ, ಆಧ್ಯಾತ್ಮಿಕ ಮತ್ತು ಸಾಮಾಜಿಕ ಭಾಗಿತ್ವದಿಂದ ಪ್ರಭಾವಿತರಾದ ರಾಷ್ಟ್ರಪತಿಯವರು ಉಡುಪಿ ಶ್ರೀಕೃಷ್ಣನ ಸ್ಥಾಪನೆಯ ಹಿನ್ನೆಲೆಯ ಮಧ್ವ ಸಿದ್ಧಾಂತದ ತಿರುಳನ್ನು ಶ್ರೀಗಳಿಂದ ತಿಳಿದುಕೊಂಡರು.



## ಧರ್ಮಸ್ಥಳಕ್ಕೆ ಬರಲು ಶಾಸಕ ಎಸ್.ಟಿ.ಸೋಮಶೇಖರ್‌ಗೆ ಸವಾಲು

ಬೆಂಗಳೂರು

ಬಿಜೆಪಿ ಶಾಸಕ ಎಸ್.ಟಿ. ಸೋಮಶೇಖರ್ ಅವರಿಗೆ ಧರ್ಮಸ್ಥಳಕ್ಕೆ ಬಂದು ಪಕ್ಷದ್ರೋಹ ಮಾಡಿಲ್ಲವೆಂದು ಪ್ರಮಾಣ ಮಾಡಲು ಬಿಜೆಪಿ ಬೆಂಗಳೂರು ಕೇಂದ್ರ ಜಿಲ್ಲಾ ಅಧ್ಯಕ್ಷ ಎಸ್. ಹರೀಶ್ ಆಹ್ವಾನ ನೀಡಿದ್ದು, ತಾಕತ್ತಿದ್ದರೆ ಮೊದಲು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಕಾಂಗ್ರೆಸ್ ಟಿಕೆಟ್‌ನಿಂದ ಸ್ಪರ್ಧಿಸಲಿ ಎಂದು ಸವಾಲು ಹಾಕಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಎಸ್.ಟಿ. ಸೋಮಶೇಖರ್ ಬಿಜೆಪಿ ಸೇರ್ಪಡೆಯಾದ ಬಳಿಕವೇ ಸಚಿವ ಸ್ಥಾನ ಪಡೆದಿದ್ದಾರೆ. ಕಾಂಗ್ರೆಸ್‌ನಲ್ಲಿ ಇದ್ದಿದ್ದರೆ ಹತ್ತು ಬಾರಿ ಗೆದ್ದರೂ ಸಚಿವರಾಗಲು ಸಾಧ್ಯವಾಗುತ್ತಿರಲಿಲ್ಲ ಎಂದು ಟೀಕಿಸಿದರು.

ರಾಜ್ಯಸಭೆ ಚುನಾವಣೆಯಲ್ಲಿ ಅಡ್ಡ ಮತದಾನ ಮಾಡಿ ಪಕ್ಷಕ್ಕೆ ದ್ರೋಹ ಮಾಡಿದ್ದಾರೆ ಎಂದು ಆರೋಪಿಸಿದ ಹರೀಶ್, ಬಿಜೆಪಿ ಚಿಹ್ನೆಯಿಂದ ಗೆದ್ದು ನಂತರ ಪಕ್ಷದ ವಿರುದ್ಧ ನಡೆದುಕೊಂಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಪಕ್ಷ ಮತ್ತು ತಾಯಿ ಒಂದೇ ಎಂದವರು ತಾಯಿಗೂ ದ್ರೋಹ ಮಾಡಿದ್ದಾರೆ ಎಂದು ಕಿಡಿಕಾರಿದರು.

ಯಶವಂತಪುರ ಕ್ಷೇತ್ರದಲ್ಲಿ ಸೋಮಶೇಖರ್ ಯಾವುದೇ ಹೊಸ ಅಭಿವೃದ್ಧಿ ಕಾರ್ಯ ಮಾಡಿಲ್ಲ. ಕೆರೆ, ರಸ್ತೆ ಸೇರಿದಂತೆ ಪ್ರಮುಖ ಅಭಿವೃದ್ಧಿ ಕಾಮಗಾರಿಗಳನ್ನು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ಸಚಿವರಾಗಿದ್ದಾಗಲೇ ಮಾಡಿಸಿದ್ದಾರೆ ಎಂದು ಹೇಳಿದರು. ಒಂದು ಹೊಸ ಅಭಿವೃದ್ಧಿ ಯೋಜನೆಯಾದರೂ ತೋರಿಸಲಿ ಎಂದು ಸವಾಲು ಹಾಕಿದರು.

ಇದೇ ವೇಳೆ, ಶೋಭಾ ಕರಂದ್ಲಾಜೆ ಅವರೊಂದಿಗೆ ಧರ್ಮಸ್ಥಳಕ್ಕೆ ಬರಲು ಸಿದ್ಧವಿದ್ದೇವೆ. ಸೋಮಶೇಖರ್ ಕೂಡ ಧರ್ಮಸ್ಥಳಕ್ಕೆ ಬಂದು ಪಕ್ಷದ್ರೋಹ ಮಾಡಿಲ್ಲವೆಂದು ಪ್ರಮಾಣ ಮಾಡಲಿ ಎಂದು ಆಹ್ವಾನ ನೀಡಿದರು.

ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ರಾಜ್ಯಸಭೆ ಹಾಗೂ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಪರ ಮತ ಹಾಕಿದವರು ಈಗ ಬಿಜೆಪಿ ಬಗ್ಗೆ ಮಾತನಾಡುವುದು ಸರಿಯಲ್ಲ. ಅಡ್ಡ ಮತದಾನದ ಹಿಂದೆ ಅವರ ಪಾತ್ರವೂ ಇದೆ ಎಂದು ಆರೋಪಿಸಿದರು.

ರಾಜಕೀಯ ನಿಷ್ಠೆ ಮತ್ತು ಜನಮಂಡೇಟ್‌ಗೆ ಗೌರವ ನೀಡಬೇಕಾದ ಜವಾಬ್ದಾರಿ ಜನಪ್ರತಿನಿಧಿಗಳ ಮೇಲಿದೆ. ಬಿಜೆಪಿ ಚಿಹ್ನೆಯಿಂದ ಗೆದ್ದು ಪಕ್ಷದ ವಿರುದ್ಧ ನಡೆದುಕೊಳ್ಳುವುದು ಮತದಾರರ ವಿಶ್ವಾಸಕ್ಕೆ ಧಕ್ಕೆ ತರುವ ಕೆಲಸ ಎಂದು ಎಸ್. ಹರೀಶ್ ಅಭಿಪ್ರಾಯಪಟ್ಟರು.

## ವೈಶಾಖ್ ಆತ್ಮಹತ್ಯೆ: ಕೃಷಿ ತಾಪಂಡ ಹೇಳಿಕೆ ಪಡೆದ ಪೊಲೀಸರು

ಬೆಂಗಳೂರು

ನಟಿ ಕೃಷಿ ತಾಪಂಡ ಅವರ ಸ್ನೇಹಿತ ವೈಶಾಖ್ ಆತ್ಮಹತ್ಯೆ ಪ್ರಕರಣದ ತನಿಖೆಯನ್ನು ಪೊಲೀಸರು ಮುಂದುವರಿಸಿದ್ದು, ಘಟನೆ ನಡೆದ ದಿನವೇ ನಟಿಯ ಹೇಳಿಕೆಯನ್ನು ದಾಖಲಿಸಿಕೊಂಡಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಅವರ ಮೊಬೈಲ್‌ನ್ನು ಪರಿಶೀಲಿಸಿದ ಬಳಿಕ ವಾಪಸ್ ನೀಡಿದ್ದಾರೆ.

ಪೊಲೀಸರ ವಿಚಾರಣೆ ವೇಳೆ ಕೃಷಿ ತಾಪಂಡ ಅವರು ಮೂರು ದಿನಗಳ ಕಾಲ ಕ್ಷೇಮವನಕ್ಕೆ ತೆರಳಿದ್ದೆ ಎಂದು ತಿಳಿಸಿದ್ದಾರೆ. ಬುಧವಾರ ರಾತ್ರಿ ಸುಮಾರು 11 ಗಂಟೆಗೆ ಮನೆಗೆ ಹಿಂದಿರುಗಿದಾಗ ಫ್ಲ್ಯಾಟ್‌ನ ಬಾಗಿಲು ಲಾಕ್ ಆಗಿತ್ತು. ಫ್ಲ್ಯಾಟ್‌ಗೆ ಎರಡು ಕೀಗಳಿದ್ದು, ಒಂದು ತಮ್ಮ ಬಳಿ ಹಾಗೂ ಇನ್ನೊಂದು ವೈಶಾಖ್ ಬಳಿ ಇತ್ತು. ತಮ್ಮ ಬಳಿಯಿದ್ದ ಕೀಯಿಂದ ಬಾಗಿಲು ತೆರೆದಾಗ ವೈಶಾಖ್ ನೇಣು ಬಿಗಿದ ಸ್ಥಿತಿಯಲ್ಲಿ ಕಂಡುಬಂದರು ಎಂದು ಹೇಳಿಕೆ ನೀಡಿದ್ದಾರೆ.

ಬಳಿಕ ಸೀರೆಯನ್ನು ಕತ್ತರಿಸಿ ಅವರನ್ನು ಕೆಳಗಿಳಿಸಿ, ತಕ್ಷಣವೇ ಪೊಲೀಸರಿಗೆ ಹಾಗೂ ವೈಶಾಖ್ ಅವರ ಕುಟುಂಬದವರಿಗೆ ಮಾಹಿತಿ ನೀಡಿದ್ದಾಗಿ ಅವರು ತಿಳಿಸಿದ್ದಾರೆ.

ತನಿಖೆಯ ಭಾಗವಾಗಿ ಪೊಲೀಸರು ಕೃಷಿ ತಾಪಂಡ ಅವರ ಮೊಬೈಲ್‌ನ್ನು ಪರಿಶೀಲಿಸಿ, ಸಂದೇಶಗಳು, ಕರೆ ವಿವರಗಳು ಹಾಗೂ ವಾಟ್ಸ್‌ಆಪ್ ಸಂಭಾಷಣೆಗಳನ್ನು ಪರಿಶೀಲಿಸಿದ್ದಾರೆ. ಯಾವುದೇ ಅನುಮಾನಾಸ್ಪದ ಮಾಹಿತಿ ಪತ್ತೆಯಾಗದ ಹಿನ್ನೆಲೆಯಲ್ಲಿ ಹೇಳಿಕೆ ದಾಖಲಿಸಿಕೊಂಡು ಮೊಬೈಲ್ ವಾಪಸ್ ನೀಡಿದ್ದಾರೆ.

ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ವೈಶಾಖ್ ಅವರ ಪತ್ನಿ ಮೇಘನಾ ಆರ್.ಆರ್.ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ರಾತ್ರಿ 11 ಗಂಟೆ ಸುಮಾರಿಗೆ ವೈಶಾಖ್ ಅವರ ತಂದೆಗೆ ಕರೆ ಮಾಡಿ, ಎಲಿಗೆಂಟ್ ಟೆರಸ್ ಅಪಾರ್ಟ್‌ಮೆಂಟ್‌ನ 403ನೇ ಫ್ಲ್ಯಾಟ್‌ನಲ್ಲಿ ಮೃತದೇಹ ಪತ್ತೆಯಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದರು ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಸ್ಥಳಕ್ಕೆ ತೆರಳಿದಾಗ ಕೃಷಿ ತಾಪಂಡ ಅವರ ಫ್ಲ್ಯಾಟ್‌ನ ಕೋಣೆಯಲ್ಲಿ ವೈಶಾಖ್ ಅವರ ಮೃತದೇಹ ಪತ್ತೆಯಾಗಿದ್ದು, ಸೀರೆಯಿಂದ ನೇಣು ಬಿಗಿದ ಸ್ಥಿತಿಯಲ್ಲಿದ್ದರು ಎಂದು ದೂರಿನಲ್ಲಿ ತಿಳಿಸಲಾಗಿದೆ.

### ಸುರಕ್ಷತಾ ಮಾನದಂಡ ಉಲ್ಲಂಘಿಸಿದ ಸ್ಲೀಪರ್ ಬಸ್‌ಗಳ ವಿರುದ್ಧ

## ಸಾರಿಗೆ ಇಲಾಖೆ ಕಠಿಣ ಕ್ರಮ

ತುಮಕೂರು

ರಸ್ತೆ ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸಿ ಸಂಚರಿಸುತ್ತಿದ್ದ ನಾಲ್ಕು ಖಾಸಗಿ ಸ್ಲೀಪರ್ ಬಸ್‌ಗಳ ವಿರುದ್ಧ ತುಮಕೂರು ಪ್ರಾದೇಶಿಕ ಸಾರಿಗೆ ಇಲಾಖೆ ವಿಶೇಷ ಕಾರ್ಯಾಚರಣೆ ನಡೆಸಿ ಕ್ರಮ ಕೈಗೊಂಡಿದೆ.

ಅಪರ ಸಾರಿಗೆ ಆಯುಕ್ತೆ ಓಂಕಾರೇಶ್ವರಿ ಅವರ ನಿರ್ದೇಶನದ ಮೇರೆಗೆ ಹಿರಿಯ ಮೋಟಾರ್ ವಾಹನ ನಿರೀಕ್ಷಕ ಸದ್ರುಲ್ಲಾ ಷರೀಫ್ ನೇತೃತ್ವದ ತಂಡ, ಬೆಂಗಳೂರಿನಿಂದ ಯಾದಗಿರಿ, ಕೆಂಭಾವಿ ಹಾಗೂ ತೇರದಾಳ ಭಾಗಗಳಿಗೆ ಸಂಚರಿಸುತ್ತಿದ್ದ ಬಸ್‌ಗಳನ್ನು ಮಧ್ಯರಾತ್ರಿ ವೇಳೆ ತಪಾಸಣೆಗೆ ಒಳಪಡಿಸಿತು.




ಪರಿಶೀಲನೆ ವೇಳೆ ಬಸ್‌ಗಳ ಮೇಲ್ಭಾಗದಲ್ಲಿ ಪ್ರಯಾಣಿಕರಿಗೆ ಸಂಬಂಧಿಸದ ಭಾರೀ ಪ್ರಮಾಣದ ಲಗೇಜುಗಳು, ರಬ್ಬರ್ ಟೈರ್‌ಗಳು, ಗುಜರಿ ಬಟ್ಟೆಗಳು, ಪ್ಲಾಸ್ಟಿಕ್ ಹಾಗೂ ಫೈಬರ್ ವಸ್ತುಗಳನ್ನು ಸಾಗಿಸಲಾಗುತ್ತಿರುವುದು ಪತ್ತೆಯಾಯಿತು. ಇಂತಹ ವಸ್ತುಗಳ ಸಾಗಣೆ ಪ್ರಯಾಣಿಕರ ಸುರಕ್ಷತೆಗೆ ಅಪಾಯಕಾರಿಯಾಗಿರುವ ಹಿನ್ನೆಲೆಯಲ್ಲಿ ಅವುಗಳನ್ನು ಪ್ರಾದೇಶಿಕ ಸಾರಿಗೆ ಕಚೇರಿ ಆವರಣದಲ್ಲಿ ಸುರಕ್ಷಿತವಾಗಿ ಕೆಳಗಿಳಿಸಿ, ಸಂಬಂಧಿತ ವಾಹನಗಳ ವಿರುದ್ಧ ತನಿಖಾ ವರದಿ ಸಿದ್ಧಪಡಿಸಿ ಮುಂದಿನ ಕ್ರಮಕ್ಕೆ ಶಿಫಾರಸು ಮಾಡಲಾಗಿದೆ.



ಸಾರಿಗೆ ಅಧಿಕಾರಿಗಳ ಪ್ರಕಾರ, ರಾಜ್ಯ ಹೆದ್ದಾರಿಗಳಲ್ಲಿ ಸಂಚರಿಸುವ ಕೆಲವು ಸ್ಲೀಪರ್ ಬಸ್‌ಗಳು ನಿಯಮಬಾಹಿರವಾಗಿ ಭಾರೀ ಪ್ರಮಾಣದ ಸರಕುಗಳನ್ನು ಸಾಗಿಸುತ್ತಿದ್ದು, ಇದರಿಂದ ಅಪಘಾತ, ವಾಹನಗಳಲ್ಲಿ ಬೆಂಕಿ ಅವಘಡ ಹಾಗೂ ಇತರೆ ಅನಾಹುತಗಳ ಸಂಭವ ಹೆಚ್ಚಾಗುತ್ತಿದೆ.

ಈ ಹಿನ್ನೆಲೆಯಲ್ಲಿ ರಸ್ತೆ ಸುರಕ್ಷತಾ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಜಾಗೃತಿ ಮೂಡಿಸುವ ಜೊತೆಗೆ ಉಲ್ಲಂಘನೆ ಮಾಡುವ ವಾಹನಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.

ಕಾರ್ಯಾಚರಣೆಯಲ್ಲಿ ಹಿರಿಯ ಮೋಟಾರ್ ವಾಹನ ನಿರೀಕ್ಷಕ ಸದ್ರುಲ್ಲಾ ಷರೀಫ್ ಹಾಗೂ ಸಾರಿಗೆ ಇಲಾಖೆಯ ಸಿಬ್ಬಂದಿ ಭಾಗವಹಿಸಿದ್ದರು. ಸಾರ್ವಜನಿಕರ ಸುರಕ್ಷಿತ ಪ್ರಯಾಣಕ್ಕೆ ಧಕ್ಕೆಯುಂಟು ಮಾಡುವ ಯಾವುದೇ ರೀತಿಯ ನಿಯಮ ಉಲ್ಲಂಘನೆಗಳನ್ನು ಸಹಿಸಲಾಗುವುದಿಲ್ಲ ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

## ವಿದ್ಯುತ್ ಸುರಕ್ಷತಾ ಜಾಗೃತಿಗೆ ಎಸ್ಕಾಂಗಳಿಂದ ಆರ್ಥಿಕ ನೆರವು: ಗೌರವ್‌ಗುಪ್ತ

ಬೆಂಗಳೂರು

ವಿದ್ಯುತ್ ಬಳಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸುರಕ್ಷತಾ ಜಾಗೃತಿಯನ್ನೂ ವಿಸ್ತರಿಸುವ ಅಗತ್ಯವಿದ್ದು, ಈ ನಿಟ್ಟಿನಲ್ಲಿ ವಿದ್ಯುತ್ ಪರಿವೀಕ್ಷಣಾಲಯ ಆಯೋಜಿಸಿರುವ ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಸಪ್ತಾಹಕ್ಕೆ ರಾಜ್ಯದ ಎಲ್ಲ ವಿದ್ಯುತ್ ಸರಬರಾಜು ಕಂಪನಿಗಳಿಂದ (ಎಸ್ಕಾಂ) ಪ್ರತಿ ವಿಭಾಗಕ್ಕೆ 1 ಲಕ್ಷ ರೂಪಾಯಿ ಆರ್ಥಿಕ ನೆರವು ನೀಡಲಾಗುವುದು ಎಂದು ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ತಿಳಿಸಿದ್ದಾರೆ.



ನಗರದ ಸರ್ಕಾರಿ ನೌಕರರ ಸಂಘದ ಸಭಾಂಗಣದಲ್ಲಿ ಶುಕ್ರವಾರ ನಡೆದ ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಸಪ್ತಾಹ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯುತ್ ಇಂದು ವಿಶ್ವದ ಅತ್ಯಂತ ಹೆಚ್ಚು ಬಳಕೆಯಾಗುವ ಇಂಧನವಾಗಿದ್ದು, ಅದರ ಬಳಕೆ ವೇಗವಾಗಿ ಹೆಚ್ಚುತ್ತಿರುವಂತೆ ಸುರಕ್ಷತೆಯ ಕುರಿತ ಅರಿವು ಕೂಡ ಹೆಚ್ಚಾಗಬೇಕು ಎಂದು ಹೇಳಿದರು.

ವಿದ್ಯುತ್ ಅವಘಡಗಳನ್ನು ತಡೆಯಲು ಕೇವಲ ಜಾಗೃತಿ ಸಾಕಾಗುವುದಿಲ್ಲ. ಮುನ್ನೆಚ್ಚರಿಕಾ ಕ್ರಮಗಳನ್ನೂ ಕಟ್ಟುನಿಟ್ಟಾಗಿ ಅನುಸರಿಸಬೇಕು. ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ಮಾರ್ಗದರ್ಶನದಲ್ಲಿ ಈ ಸಂಬಂಧ ಸಮಗ್ರ ಕಾರ್ಯಯೋಜನೆ ರೂಪಿಸಲಾಗುವುದು ಎಂದು ಅವರು ತಿಳಿಸಿದರು.

ಸರ್ಕಾರಿ ಇಲಾಖೆಗಳು, ನಿಗಮಗಳು ಮತ್ತು ಮಂಡಳಿಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರ ಆದ್ಯತೆ ನೀಡುತ್ತಿದೆ. ನೇಮಕಾತಿ ಪ್ರಕ್ರಿಯೆಯಲ್ಲಿದ್ದ ಸಮಸ್ಯೆಗಳನ್ನು ನಿವಾರಿಸಿ, ಹೊಸ ನೇಮಕಾತಿಗಳನ್ನು ವ್ಯವಸ್ಥಿತವಾಗಿ ಕೈಗೊಳ್ಳಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ ಎಂದು ಗೌರವ್ ಗುಪ್ತ ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಡಾ. ಶಿವಶಂಕರ ಎನ್., ವಿದ್ಯುತ್ ಸುರಕ್ಷತೆ ಕುರಿತು ಸಾರ್ವಜನಿಕರು, ಇಲಾಖೆ ಸಿಬ್ಬಂದಿ ಹಾಗೂ ಗುತ್ತಿಗೆದಾರರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು. ಈ ನಿಟ್ಟಿನಲ್ಲಿ ವಿದ್ಯುತ್ ಪರಿವೀಕ್ಷಣಾಲಯದ ಅಧಿಕಾರಿಗಳು ಜಿಲ್ಲಾಡಳಿತದೊಂದಿಗೆ ಸಮನ್ವಯ ಸಾಧಿಸಿ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಮುಖ್ಯ ವಿದ್ಯುತ್ ಪರಿವೀಕ್ಷಣಾಧಿಕಾರಿ ಡಾ. ತೀತಿರ ಎನ್. ಅಪ್ಪಚ್ಚು, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಕ್ಷರಿ, ಕೆಪಿಟಿಸಿಎಲ್ ನಿರ್ದೇಶಕ (ಕಾರ್ಯಾಚರಣೆ) ವಿಶ್ವನಾಥ್ ನಾಯಕ್, ರಾಜ್ಯ ಮಾನ್ಯತೆ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘದ ಅಧ್ಯಕ್ಷ ಸಿ. ರಮೇಶ್, ರಾಜ್ಯ ವಿದ್ಯುತ್ ಗುತ್ತಿಗೆದಾರರ ಸಂಘದ ಅಧ್ಯಕ್ಷ ಎಚ್.ಎಸ್. ವೆಂಕಟೇಶ್ ಸೇರಿದಂತೆ ಹಲವು ಗಣ್ಯರು

## 'ಬಿಡದಿ ಟೌನ್‌ಶಿಪ್ ವಿವಾದ: ರೈತರ ಮಧ್ಯೆಯೇ ಸಮಸ್ಯೆ ಬಗೆಹರಿಸಿ, ವಿಧಾನಸೌಧದಲ್ಲಿ ಅಲ್ಲ'

ಬೆಂಗಳೂರು

ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದ ರೈತರ ಸಮಸ್ಯೆಯನ್ನು ವಿಧಾನಸೌಧದ ನಾಲ್ಕು ಗೋಡೆಗಳ ಮಧ್ಯೆ ಅಲ್ಲ, ರೈತರ ಸಮ್ಮುಖದಲ್ಲೇ ಚರ್ಚಿಸಿ ಬಗೆಹರಿಸಬೇಕು ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆಗ್ರಹಿಸಿದರು.



ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಇದೇ ಉದ್ದೇಶದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ರೈತರ ಮಧ್ಯೆ ಸಭೆ ನಡೆಸುವಂತೆ ಮನವಿ ಮಾಡಿದ್ದಾರೆ. ಆದರೆ ಇದುವರೆಗೆ ಸರ್ಕಾರದಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಹೇಳಿದರು.

ನಾಳೆ ಭೈರಮಂಗಲ ಸರ್ಕಲ್‌ನಲ್ಲಿ ರೈತರೊಂದಿಗೆ ಕುಮಾರಸ್ವಾಮಿ ಅವರು ಸಭೆ ನಡೆಸಲಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೂಡ ಅಲ್ಲಿಗೆ ಬಂದು ರೈತರ ಸಮಸ್ಯೆಗಳನ್ನು ಆಲಿಸಬೇಕು. ಪಹಣಿ ದಾಖಲೆ ಹೊಂದಿರುವ ಹಾಗೂ ಭೂ ವಿವಾದ ಎದುರಿಸುತ್ತಿರುವ ರೈತರನ್ನು ಕರೆಸಿ ಚರ್ಚೆ ನಡೆಸಿದರೆ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗಲಿದೆ ಎಂದು ಅಭಿಪ್ರಾಯಪಟ್ಟರು.

ರೈತರ ಸಮಸ್ಯೆ ಪರಿಹಾರವಾಗಬೇಕು ಎಂಬುದೇ ನಮ್ಮ ಉದ್ದೇಶ. ಯಾವುದೇ ಸಂಘರ್ಷ ಅಥವಾ ಗಲಭೆಗೆ ಅವಕಾಶವಿಲ್ಲ. ರೈತರ ಪರ ನಿಲ್ಲುವ ಬದ್ಧತೆಯನ್ನು ಕುಮಾರಸ್ವಾಮಿ ಅವರು ಸದಾ ಉಳಿಸಿಕೊಂಡಿದ್ದಾರೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದ ಪೋಸ್ಟರ್ ಅಭಿಯಾನದ ಕುರಿತು ಪ್ರತಿಕ್ರಿಯಿಸಿದ ನಿಖಿಲ್ ಕುಮಾರಸ್ವಾಮಿ, ಪೋಸ್ಟರ್ ರಾಜಕೀಯ ಕಾಂಗ್ರೆಸ್‌ಗೆ ಹೊಸದೇನಲ್ಲ. ಹಿಂದೆ ಬಿಜೆಪಿ ಸರ್ಕಾರದ ವಿರುದ್ಧವೂ ಇದೇ ರೀತಿಯ ಅಭಿಯಾನ ನಡೆಸಲಾಗಿತ್ತು. ಆದರೆ ನಾವು ವೈಯಕ್ತಿಕ ಟೀಕೆ ಅಥವಾ ಕುಟುಂಬದ ತೇಜೋವಧೆ ಮಾಡುವ ರಾಜಕಾರಣವನ್ನು ನಂಬುವುದಿಲ್ಲ ಎಂದು ಹೇಳಿದರು.

ಯಾರ ಬಳಿ ಎಷ್ಟು ಭೂಮಿ ಇದೆ, ಯಾರ ಹೆಸರಿನಲ್ಲಿ ಯಾವ ಆಸ್ತಿ ಇದೆ ಎಂಬ ದಾಖಲೆಗಳನ್ನು ಬೇಕಾದರೆ ಬಿಡುಗಡೆ ಮಾಡಬಹುದು. ಆದರೆ ಅಂಥ ಸಣ್ಣತನದ ರಾಜಕಾರಣದಲ್ಲಿ ತೊಡಗಿಕೊಳ್ಳಲು ನಾವು ಬಯಸುವುದಿಲ್ಲ. ರೈತರ ಹಿತಾಸಕ್ತಿ ನಮ್ಮ ಮೊದಲ ಆದ್ಯತೆಯಾಗಿದೆ ಎಂದು ಸ್ಪಷ್ಟಪಡಿಸಿದರು.

ಶಾಸಕ ಪ್ರದೀಪ್ ಈಶ್ವರ್ ಅವರ ಟೀಕೆಗಳಿಗೆ ಪ್ರತಿಕ್ರಿಯಿಸಿದ ಅವರು, ಅನಗತ್ಯ ಆರೋಪಗಳ ಮೂಲಕ ಪ್ರಚಾರ ಪಡೆಯುವ ಪ್ರಯತ್ನ ನಡೆಯುತ್ತಿದೆ. ಸಾರ್ವಜನಿಕ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸುವುದು ಮುಖ್ಯ, ವೈಯಕ್ತಿಕ ವಿಚಾರಗಳ ಬಗ್ಗೆ ಅಲ್ಲ ಎಂದು ತಿರುಗೇಟು ನೀಡಿದರು.

ರೈತರ ಭೂಮಿ ಮತ್ತು ಹಕ್ಕುಗಳ ರಕ್ಷಣೆಗೆ ಜೆಡಿಎಸ್ ಬದ್ಧವಾಗಿದ್ದು, ಸರ್ಕಾರ ರೈತರ ಧ್ವನಿಗೆ ಸ್ಪಂದಿಸಿ ಸಮಸ್ಯೆ ಪರಿಷ್ಕಾರಕ್ಕೆ ಮುಂದಾಗಬೇಕು ಎಂದು ನಿಖಿಲ್ ಕುಮಾರಸ್ವಾಮಿ ಒತ್ತಾಯಿಸಿದರು.

## ಮಾವು ಬೆಳೆಗಾರರಿಗೆ ಸರ್ಕಾರದ ನೆರವು: 'ಪಿಡಿಪಿಎಸ್' ಯೋಜನೆ ಜಾರಿ



ಕೋಲಾರ

ತೋತಾಪುರಿ ಮಾವು ಬೆಳೆಗಾರರ ಹಿತದೃಷ್ಟಿಯಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಾರಿಗೊಳಿಸಿರುವ ಬೆಲೆ ಕೊರತೆ ಪಾವತಿ ಯೋಜನೆ ಯನ್ನು ಜಿಲ್ಲೆಯಲ್ಲಿ ಇಂದಿನಿಂದಲೇ ಜಾರಿಗೆ ತರಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ತೋತಾಪುರಿ ಮಾವಿಗೆ ಪ್ರತಿ ಕ್ವಿಂಟಾಲ್‌ಗೆ 1,750 ರೂ. ಬೆಲೆ ವ್ಯತ್ಯಾಸ ಮೊತ್ತವನ್ನು ನಿಗದಿಪಡಿಸಲಾಗಿದೆ. ಮಾರುಕಟ್ಟೆ ದರ ಕುಸಿತದಿಂದ ಸಂಕಷ್ಟದಲ್ಲಿರುವ ರೈತರಿಗೆ ಈ ಯೋಜನೆ ಆರ್ಥಿಕ ಭದ್ರತೆ ಒದಗಿಸಲಿದೆ ಎಂದು ಹೇಳಿದರು.

ಜಿಲ್ಲೆಯ ಮಾವು ಬೆಳೆಗಾರರು ತಮ್ಮ ಸಮೀಪದ ನೋಂದಣಿ ಕೇಂದ್ರಗಳಿಗೆ ಭೇಟಿ ನೀಡಿ ಆಧಾರ್ ಸಂಖ್ಯೆ ಆಧಾರಿತ ಆನ್‌ಲೈನ್ ನೋಂದಣಿ ಮಾಡಿಸಿಕೊಳ್ಳಬೇಕು.

ನೋಂದಣಿ ಪ್ರಕ್ರಿಯೆ ಪೂರ್ಣಗೊಂಡು ಸ್ವೀಕೃತಿ ಪತ್ರ ಪಡೆದ ಬಳಿಕವೇ ಮಾವು ಕಟಾವು ಹಾಗೂ ಮಾರಾಟ ಪ್ರಕ್ರಿಯೆ ಆರಂಭಿಸಬೇಕು ಎಂದು ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಿದರು.

ರೈತರಿಗೆ ಅನುಕೂಲವಾಗುವಂತೆ ಜಿಲ್ಲೆಯಾದ್ಯಂತ ರೈತ ಸಂಪರ್ಕ ಕೇಂದ್ರಗಳು, ತೋಟಗಾರಿಕೆ ಇಲಾಖೆಯ ಕಚೇರಿಗಳು ಹಾಗೂ ಎಪಿಎಂಸಿ ಆವರಣಗಳಲ್ಲಿ ವಿಶೇಷ ನೋಂದಣಿ ಕೌಂಟರ್‌ಗಳನ್ನು ತೆರೆಯಲಾಗಿದೆ. ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ 47 ನೋಂದಣಿ ಅಧಿಕಾರಿಗಳನ್ನು ನಿಯೋಜಿಸಲಾಗಿದೆ.

ಶ್ರೀನಿವಾಸಪುರ: ಎಲ್ಲಾ ರೈತ ಸಂಪರ್ಕ ಕೇಂದ್ರಗಳು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಹಾಗೂ ಎಪಿಎಂಸಿ ಕಚೇರಿ.

ಮುಳಬಾಗಿಲು: ದುಗಸಂದ್ರ ಮತ್ತು ತಾಯಲೂರು ಹೋಬಳಿ ರೈತ ಸಂಪರ್ಕ ಕೇಂದ್ರಗಳು ಹಾಗೂ ಎಪಿಎಂಸಿ ಮಾರುಕಟ್ಟೆ.

ಕೆಜಿಎಫ್: ಕ್ಯಾಸಂಬಹಳ್ಳಿ ಮತ್ತು ಬೇತಮಂಗಲ ಹೋಬಳಿಯ ರೈತ ಸಂಪರ್ಕ ಕೇಂದ್ರಗಳು.

ಬಂಗಾರಪೇಟೆ: ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ.

ಕೋಲಾರ: ಹೋಳೂರು ಹಾಗೂ ಸುಗಟೂರು ರೈತ ಸಂಪರ್ಕ ಕೇಂದ್ರಗಳು ಮತ್ತು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ.

# 'ಭೈರಮಂಗಲದಲ್ಲಿ ಮುಖ್ಯಮಂತ್ರಿಗಾಗಿ ಕಾಯುತ್ತೇನೆ'

ಬೆಂಗಳೂರು

ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದ ರೈತರ ಸಮಸ್ಯೆಗಳ ಕುರಿತು ಚರ್ಚಿಸಲು ಜೂನ್ 27ರಂದು ಭೈರಮಂಗಲದಲ್ಲಿ ಮುಖ್ಯಮಂತ್ರಿಗಳಿಗಾಗಿ ಕಾಯುತ್ತೇನೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಬೆಂಗಳೂರಿನ ನಿವಾಸದ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳೊಂದಿಗೆ ಯಾವುದೇ ಪತ್ರ ಸಮರ ಇಲ್ಲ. ವಿಧಾನಸೌಧದಲ್ಲಿ ಸಭೆ ನಡೆಸುವಂತೆ ಮುಖ್ಯಮಂತ್ರಿ ಪತ್ರ ಬರೆದಿದ್ದರು. ಆದರೆ ರೈತರ ಸಮಸ್ಯೆಗೆ ಸಂಬಂಧಿಸಿದ ಚರ್ಚೆ ನೊಂದ ರೈತರ ಸಮ್ಮುಖದಲ್ಲಿಯೇ ನಡೆಯಬೇಕು ಎಂಬ ಕಾರಣಕ್ಕೆ ಭೈರಮಂಗಲದಲ್ಲಿ ಸಭೆ ನಡೆಸುವಂತೆ ತಾವು ಪತ್ರದ ಮೂಲಕ ಮನವಿ ಮಾಡಿದ್ದಾಗಿ ಹೇಳಿದರು.



ಶನಿವಾರ ಮಧ್ಯಾಹ್ನದವರೆಗೆ ಭೈರಮಂಗಲದಲ್ಲೇ ಉಳಿದು ರೈತರ ಅಹವಾಲುಗಳನ್ನು ಆಲಿಸುತ್ತೇನೆ. ಮುಖ್ಯಮಂತ್ರಿ ಸ್ಥಳಕ್ಕೆ ಬಂದು ಚರ್ಚೆ ನಡೆಸಿದರೆ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಅನುಕೂಲವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ತಾವು ಯಾವುದೇ ಗಲಾಟೆ ಅಥವಾ ಸಂಘರ್ಷಕ್ಕೆ ಅವಕಾಶ ನೀಡುವ ಉದ್ದೇಶ ಹೊಂದಿಲ್ಲ. ರೈತರು ನಡೆಸುತ್ತಿರುವ ಪ್ರತಿಭಟನೆಗೆ ಬೆಂಬಲ ಸೂಚಿಸಲು ಮಾತ್ರ ತೆರಳುತ್ತಿದ್ದೇನೆ. ರೈತರು ಸ್ವಇಚ್ಛೆಯಿಂದ ಭೂಮಿ ನೀಡಲು ಸಿದ್ಧರಾಗಿದ್ದರೆ ಯಾವುದೇ ತಕರಾರು ಇಲ್ಲ. ಆದರೆ ಒತ್ತಡ ಅಥವಾ ಬೆದರಿಕೆಯ ಮೂಲಕ ಭೂಮಿ ಪಡೆಯಲು ಮುಂದಾದರೆ ಅದು ಸರಿಯಾದ ಕ್ರಮವಾಗುವುದಿಲ್ಲ ಎಂದು ಎಚ್ಚರಿಸಿದರು. ಹಿಂದೆಯೂ ಮುಖ್ಯಮಂತ್ರಿ ಆಗಿದ್ದಾಗ ರೈತರ ನಡುವೆ ತೆರಳಿ ಸಮಸ್ಯೆಗಳನ್ನು ಆಲಿಸಿದ್ದೇನೆ. ಬಿಡದಿ ಉಪನಗರ ಯೋಜನೆ ವಿಚಾರದಲ್ಲಿಯೂ ರೈತರ ಸಮ್ಮುಖದಲ್ಲೇ ಸಭೆ ನಡೆಸಿದ್ದೆ. ಆಗ ಈ ಯೋಜನೆಯನ್ನು ವಿರೋಧಿಸಿದ್ದವರು ಈಗ ಅದರ ಪರವಾಗಿ ನಿಂತಿರುವುದು ಆಶ್ಚರ್ಯಕರ ಬೆಳವಣಿಗೆ ಎಂದು ಹೇಳಿದರು.

ಭೂಮಿ ಸ್ವಾಧೀನಕ್ಕೆ ಸಂಬಂಧಿಸಿದಂತೆ ಕೆಲ ರೈತರು ಒಪ್ಪಿಗೆ ಸೂಚಿಸಿದ್ದರೂ, ಹೆಚ್ಚಿನ ಸಂಖ್ಯೆಯ ರೈತರು ಭೂಮಿ ನೀಡಲು ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಅವರ ಅಭಿಪ್ರಾಯವನ್ನು ಸರ್ಕಾರ ಗೌರವಿಸಬೇಕು. ಎಲ್ಲರ ಮೇಲೂ ಬಲವಂತದ ಕ್ರಮ ಜರುಗಿಸುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಕುಮಾರಸ್ವಾಮಿ ಹೇಳಿದರು.

ಭೈರಮಂಗಲ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿಗೊಳಿಸುವ ಚಿಂತನೆ ನಡೆಯುತ್ತಿದೆ ಎಂಬ ಮಾಹಿತಿ ಇದೆ. ಆದರೆ ನಾವು ಕಾನೂನುಬದ್ಧವಾಗಿ ರೈತರ ಪರ ಹೋರಾಟ ನಡೆಸುತ್ತಿದ್ದು, ಯಾವುದೇ ಅಶಾಂತಿ ಸೃಷ್ಟಿಸುವ ಉದ್ದೇಶವಿಲ್ಲ ಎಂದು ಸ್ಪಷ್ಟಪಡಿಸಿದರು.

ತಮ್ಮ ಬಳಿ ದುಬಾರಿ ವಾಚ್ ಇದೆ ಎಂಬ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ತಾವು ಧರಿಸಿರುವುದು ಎಚ್‌ಎಂಟಿ ತಯಾರಿಸಿರುವ ಸಾಮಾನ್ಯ ಗಡಿಯಾರವಾಗಿದ್ದು, ಅದರಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿತ್ರವಿದೆ ಎಂದು ಮಾಧ್ಯಮಗಳಿಗೆ ತೋರಿಸಿದರು.

ಸರ್ಕಾರಕ್ಕೆ ಅನುಮಾನಗಳಿದ್ದರೆ ತನಿಖೆ ನಡೆಸಬಹುದು. ಸರ್ಕಾರದ ಬಳಿ ವಿವಿಧ ತನಿಖಾ ಸಂಸ್ಥೆಗಳಿದ್ದು, ಬೇಕಾದರೆ ತಮ್ಮ ಮನೆಗೂ ತನಿಖೆಗಾಗಿ ಅಧಿಕಾರಿಗಳನ್ನು ಕಳುಹಿಸಬಹುದು ಎಂದು ಕುಮಾರಸ್ವಾಮಿ ಸವಾಲು ಹಾಕಿದರು.

27/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಅವಧಿ ಮೀರಿದ ದಿನಸಿ ವಸ್ತುಗಳ ವಶ

ಕೆಜಿಎಫ್

ಗ್ರಾಹಕರ ಆರೋಗ್ಯ ಹಾಗೂ ಸುರಕ್ಷತೆಗೆ ಅಪಾಯ ಉಂಟುಮಾಡುವ ಅವಧಿ ಮುಗಿದ ದಿನಸಿ ವಸ್ತುಗಳನ್ನು ನಿರ್ಲಕ್ಷ್ಯದಿಂದ ವರ್ತಿಸಿ ಕೆಟ್ಟುಹೊದ ದಿನಸಿ ವಸ್ತುಗಳನ್ನು ಮಾರಟಕ್ಕೆ ದಾಸ್ತಾನು ಮಾಡಿಕೊಂಡಿದ್ದ ಆರೋಪಿ ವಿರುದ್ದ ಕಾನೂನು ಕ್ರಮ ವಹಿಸಿ ದಿನಸಿ ವಸ್ತುಗಳನ್ನು ರಾಬರ್ಟ್‌ಸನ್‌ಪೇಟೆ ಪೊಲೀಸರು ವಶಪಡಿಸಿಕೊಂಡಿರುತ್ತಾರೆ.



ಜೂ.24 ರಂದು ರಾಬರ್ಟ್‌ಸನ್‌ಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯ ಉರಿಗಾಂಪೇಟೆ–ಯರ್ರನಾಗನಹಳ್ಳಿ ರಸ್ತೆಯ ಬಳಿಯಿರುವ ನಾಮಫಲಕ ಇಲ್ಲದ ಒಂದು ಗೋಡೌನ್‌ನಲ್ಲಿ ಮಾರಾಟದ ಅವಧಿ ಮುಗಿದ ದಿನಸಿ ವಸ್ತುಗಳನ್ನು ಸಂಗ್ರಹಿಸಿ ಗ್ರಾಹಕರಿಗೆ ಮಾರಾಟ ಮಾಡಲು ಯತ್ನಿಸುತ್ತಿರುವ ಕುರಿತು ಬಂದ ಖಚಿತ ಮಾಹಿತಿಯ ಮೇರೆಗೆ ತಾಲ್ಲೂಕು ಆಹಾರ ಸುರಕ್ಷತಾ ಅಧಿಕಾರಿ ಪ್ರತೀಶ ಜೆ.ಪಿ. ಹಾಗೂ ರಾಬರ್ಟ್‌ಸನ್‌ಪೇಟೆ ಪೊಲೀಸ್ ಠಾಣೆಯ ಸಿಬ್ಬಂದಿಗಳಾದ ಬಾಬು ಮತ್ತು ಬಸವರಾಜ ಕಾಂಬ್ಳೆ ಅವರು ಜಂಟಿಯಾಗಿ ದಾಳಿ ನಡೆಸಿ, ಆರೋಪಿ ಮೊಹಮ್ಮದ್ ಯೂಸೂಫ್ (33 ವರ್ಷ), ವಾಸ:ಮಿನಿ ಇಬ್ರಾಹಿಂ ರಸ್ತೆ, ರಾಬರ್ಟ್‌ಸನ್‌ಪೇಟೆ ಎಂಬಾತನನ್ನು ವಶಕ್ಕೆ ಪಡೆದು ಗೌಡನ್‌ನಲ್ಲಿ ದಾಸ್ತಾನು ಮಾಡಿದ್ದ ಗ್ರಾಹಕರ ಆರೋಗ್ಯ ಹಾಗೂ ಸುರಕ್ಷತೆಗೆ ಅಪಾಯ ಉಂಟುಮಾಡುವ ಅವಧಿ ಮುಗಿದ ದಿನಸಿ ವಸ್ತುಗಳನ್ನು ವಶಪಡಿಸಿಕೊಂಡು ಆರೋಪಿಯ ವಿರುದ್ದ ರಾಬರ್ಟ್‌ಸನ್‌ಪೇಟೆ ಪೊಲೀಸ್ ಠಾಣೆಯಲ್ಲಿ ಮೊ.ಸಂ:103/2026 ರಂತೆ ಪ್ರಕರಣ ದಾಖಲಿಸಿ ಕಾನೂನು ಕ್ರಮ ವಹಿಸಲಾಗಿರುತ್ತದೆ.

ಡಿವೈಎಸ್‌ಪಿ ಲಕ್ಷ್ಮಯ್ಯ.ವಿ ಮತ್ತು ರಾಬರ್ಟ್‌ಸನ್‌ಪೇಟೆ ವೃತ್ತ ನಿರೀಕ್ಷಕರು ಅನಿಲ್‌ಕುಮಾರ್ ಎಂ.ಎಸ್ ರವರ ಮಾರ್ಗದರ್ಶನದಲ್ಲಿ ಅವಧಿ ಮುಗಿದ ದಿನಸಿ ವಸ್ತುಗಳನ್ನು ವಶಪಡಿಸಿಕೊಂಡು ಆರೋಪಿಯ ವಿರುದ್ದ ಕಾನೂನು ಕ್ರಮ ಕ್ರಮವಹಿಸಿರುವ ರಾಬರ್ಟ್‌ಸನ್‌ಪೇಟೆ ಪಿ.ಎಸ್.ಐ ಮಹೇಶ್ ಮಾಲಿ, ಆಹಾರ ಸುರಕ್ಷತಾ ಅಧಿಕಾರಿ ಪ್ರತೀಶ ಜೆ.ಪಿ. ಮತ್ತು ಸಿಬ್ಬಂದಿಯವರಾದ ಬಾಬು, ಬಸವರಾಜ ಕಾಂಬ್ಳೆ ರವರ ಉತ್ತಮ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ರವರು ಪ್ರಶಂಶಿಸಿದ್ದಾರೆ.

# ಮೂರು ದಿನ ವಿಶೇಷ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ

ತಿಪಟೂರು

ಜೂನ್ 28ರ ಭಾನುವಾರದಿಂದ ರಾಜ್ಯಾದ್ಯಂತ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ನಡೆಯಲಿದ್ದು, ತಾಲೂಕಿನಾದ್ಯಂತ ಮೂರು ದಿನಗಳ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಕೆ. ಷಡಕ್ಷರಿ ತಿಳಿಸಿದ್ದಾರೆ.

ನಗರಸಭೆಯ ಶಾಸಕರ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಐದು ವರ್ಷದೊಳಗಿನ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಬೇಕು ಎಂದು ಕರೆ ನೀಡಿದರು. ತಾಲೂಕಿನಲ್ಲಿ ಒಟ್ಟು 88 ಲಸಿಕಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಹಾಗೂ ಕೆಬಿ ಕ್ರಾಸ್ ಬಸ್ ನಿಲ್ದಾಣ ಸೇರಿದಂತೆ ಜನಸಂಚಾರ ಹೆಚ್ಚು ಇರುವ ಸ್ಥಳಗಳಲ್ಲಿ ವಿಶೇಷ ಲಸಿಕಾ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಹೇಳಿದರು.

ತಾ.ಆರೋಗ್ಯಾಧಿಕಾರಿ ಡಾ. ಚನ್ನಕೇಶವ ಮಾತನಾಡಿ, ತಾಲೂಕಿನಲ್ಲಿ ಸುಮಾರು 75 ತೆಂಗಿನಕಾಯಿ ಪುಡಿ ತಯಾರಿಕಾ ಘಟಕಗಳಿದ್ದು, ಅಲ್ಲಿ ಹಾಗೂ ಇತರ ಸ್ಥಳಗಳಲ್ಲಿ ವಲಸಿಗ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ ಎಂದು ತಿಳಿಸಿದರು. ಒಟ್ಟು 2368 ವಲಸಿಗರನ್ನು ಗುರುತಿಸಲಾಗಿದ್ದು, ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಸಿಬ್ಬಂದಿ ಅವರ ಸ್ಥಳಕ್ಕೆ ತೆರಳಿ ಮಕ್ಕಳಿಗೆ ಲಸಿಕೆ ನೀಡಲಿದ್ದಾರೆ ಎಂದು ಹೇಳಿದರು.

ಮೂರು ದಿನಗಳ ಕಾಲ ನಡೆಯುವ ಈ ಅಭಿಯಾನದಲ್ಲಿ ಐದು ವರ್ಷದೊಳಗಿನ ಮಕ್ಕಳ ಪೋಷಕರು ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಎಂದು ಆರೋಗ್ಯ ಇಲಾಖೆ ಮನವಿ ಮಾಡಿದೆ.

# ಆರು ಯೋಧರು ಹುತಾತ್ಮ

ಬಂಗಾರಪೇಟೆ

ರಾಷ್ಟ್ರೀಯ ಯುದ್ಧ ಸ್ಮಾರಕದಲ್ಲಿರುವ ತ್ಯಾಗ ವೃತ್ತವು 16 ವೃತ್ತಾಕಾರದ ಗ್ರಾನೈಟ್ ಗೋಡೆಗಳನ್ನು ಒಳಗೊಂಡಿದ್ದು, ಸ್ವಾತಂತ್ರ್ಯಾನಂತರ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ಪ್ರತಿಯೊಬ್ಬ ಸೈನಿಕನ ಹೆಸರು, ಹುದ್ದೆ ಮತ್ತು ಘಟಕದ ಮಾಹಿತಿಯನ್ನು ಅಲ್ಲಿ ಕೆತ್ತಲಾಗಿದೆ. ಹುತಾತ್ಮರಾದ ಆರು ಯೋಧರೂ ಈ ಗೌರವಾನ್ವಿತ ಪಟ್ಟಿಗೆ ಸೇರ್ಪಡೆಯಾಗಲಿದ್ದು, ರಾಷ್ಟ್ರದ ಸ್ಮರಣೆಯಲ್ಲಿ ಶಾಶ್ವತ ಸ್ಥಾನ ಪಡೆಯಲಿದ್ದಾರೆ.

ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಲ್ಲಿ 26 ನಿರಪರಾಧ ಭಾರತೀಯ ನಾಗರಿಕರು ಸಾವನ್ನಪ್ಪಿದ್ದರು. ಈ ಅಮಾನುಷ ಕೃತ್ಯಕ್ಕೆ ತಕ್ಕ ಉತ್ತರ ನೀಡುವ ಉದ್ದೇಶದಿಂದ ಭಾರತೀಯ ಸೇನೆ ‘ಆಪರೇಷನ್ ಸಿಂಧೂರ’ ಕಾರ್ಯಾಚರಣೆಯನ್ನು ಆರಂಭಿಸಿತ್ತು. ಇದರಡಿ ಪಾಕಿಸ್ತಾನ ಹಾಗೂ ಪಾಕ್ ಆಕ್ರಮಿತ ಕಾಶ್ಮೀರದಲ್ಲಿದ್ದ ಉಗ್ರರ ನೆಲೆಗಳ ಮೇಲೆ ನಿಖರ ದಾಳಿ ನಡೆಸಿ ಭಯೋತ್ಪಾದನಾ ಮೂಲಸೌಕರ್ಯಕ್ಕೆ ಭಾರೀ ಹೊಡೆತ ನೀಡಲಾಗಿತ್ತು.

ಈ ಕಾರ್ಯಾಚರಣೆಯಲ್ಲಿ ಪ್ರಾಣತ್ಯಾಗ ಮಾಡಿದ ವೀರ ಯೋಧರ ಬಲಿದಾನವು ದೇಶದ ಭದ್ರತೆ ಮತ್ತು ಸಾರ್ವಭೌಮತ್ವಕ್ಕಾಗಿ ಭಾರತೀಯ ಸಶಸ್ತ್ರ ಪಡೆಗಳ ಅಚಲ ಬದ್ಧತೆಯ ಸಂಕೇತವಾಗಿದ್ದು, ಅವರ ಸೇವೆಯನ್ನು ರಾಷ್ಟ್ರ ಸದಾ ಗೌರವದಿಂದ ಸ್ಮರಿಸಲಿದೆ.

# ಮಾವಿಗೆ ಬೆಂಬಲ ಬೆಲೆ ಘೋಷಿಸಲು ರೈತ ಸಂಘ ಆಗ್ರಹ

ಕೋಲಾರ

ಕೇಂದ್ರ ಸರ್ಕಾರ ಮಾವಿಗೆ ಬೆಂಬಲ ಬೆಲೆ ಘೋಷಿಸಿರುವುದನ್ನು ಸ್ವಾಗತಿಸಿರುವ ರೈತ ಸಂಘ, ಅದೇ ರೀತಿಯಲ್ಲಿ ರಾಜ್ಯ ಸರ್ಕಾರವೂ ಕೂಡ ತಕ್ಷಣವೇ ಬೆಂಬಲ ಬೆಲೆ ಘೋಷಿಸಬೇಕು ಎಂದು ಆಗ್ರಹಿಸಿದೆ.

ಮಾವು ಮಾರುಕಟ್ಟೆಗೆ ಭೇಟಿ ನೀಡಿ ಜಿಲ್ಲಾಧಿಕಾರಿ ಎಂ.ಆರ್. ರವಿ ಅವರಿಗೆ ಮನವಿ ಸಲ್ಲಿಸಿದ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ. ನಾರಾಯಣಗೌಡ ಮಾತನಾಡಿ, ಕೇಂದ್ರ ಸರ್ಕಾರ ರೈತರ ಸಮಸ್ಯೆಗೆ ಸ್ಪಂದಿಸಿ ಮಧ್ಯಪ್ರವೇಶ ಮಾಡಿರುವುದು ಸ್ವಾಗತಾರ್ಹ ಎಂದು ಹೇಳಿದರು. ಈ ನಿರ್ಧಾರಕ್ಕೆ ಸಹಕರಿಸಿದ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹಾಗೂ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹ್ವಾಣ್ ಅವರಿಗೆ ಅವರು ಅಭಿನಂದನೆ ಸಲ್ಲಿಸಿದರು.

ಆದರೆ ಈ ಕ್ರಮವು ತಾತ್ಕಾಲಿಕ ಪರಿಹಾರವಾಗಿದ್ದು, ಪ್ರತಿವರ್ಷ ಇಂತಹ ಸಮಸ್ಯೆ ಮರುಕಳಿಸದಂತೆ ಶಾಶ್ವತ ಪರಿಹಾರ ಅಗತ್ಯವಿದೆ ಎಂದು ಅವರು ಹೇಳಿದರು. ರಾಜ್ಯ ಸರ್ಕಾರವೂ ಕೂಡ ತಕ್ಷಣ ಬೆಂಬಲ ಬೆಲೆ ಘೋಷಿಸಿ ರೈತರ ನೆರವಿಗೆ ಬರಬೇಕು ಎಂದು ಒತ್ತಾಯಿಸಿದರು.

ಮಾವು ಬೆಳೆಗಾರರು ಮಳೆ, ಗಾಳಿ ಜೊತೆಗೆ ಬೆಲೆ ಕುಸಿತದ ಸಮಸ್ಯೆಯನ್ನೂ ಎದುರಿಸುತ್ತಿದ್ದಾರೆ ಎಂದು ಹೇಳಿದ ಅವರು, ಸರ್ಕಾರ ಶಾಶ್ವತ ಪರಿಹಾರ ರೂಪಿಸಬೇಕು ಎಂದು ಆಗ್ರಹಿಸಿದರು. ಜೊತೆಗೆ ಆಂಧ್ರಪ್ರದೇಶದಿಂದ ಮಾರುಕಟ್ಟೆಗೆ ಬರುವ ಮಾವಿನ ಹರಿವನ್ನು ನಿಯಂತ್ರಿಸಲು ವಿಶೇಷ ತಂಡ ರಚಿಸಬೇಕು ಎಂದು ಮನವಿ ಮಾಡಿದರು.



ಜಿಲ್ಲೆಯ ರೈತರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಸರ್ಕಾರಕ್ಕೆ ವರದಿ ಕಳುಹಿಸಿರುವ ಜಿಲ್ಲಾಧಿಕಾರಿ ಎಂ.ಆರ್. ರವಿ ಅವರ ಕಾರ್ಯವೈಖರಿಯನ್ನು ರೈತ ಸಂಘ ಪ್ರಶಂಸಿಸಿದೆ. ಬೆಂಬಲ ಬೆಲೆ ಯೋಜನೆಯಡಿ ತಕ್ಷಣ ಮಾವು ಖರೀದಿ ಆರಂಭಿಸಬೇಕು ಹಾಗೂ ಖರೀದಿ ಕೇಂದ್ರಗಳಲ್ಲಿ ಯಾವುದೇ ಅಡಚಣೆ ಆಗದಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದೆ.

ಪ್ರತಿ ಐದು ಹಳ್ಳಿಗೆ ಒಂದೊಂದು ಖರೀದಿ ಕೇಂದ್ರ ಸ್ಥಾಪಿಸಬೇಕು, ಖರೀದಿ ಮಿತಿಯನ್ನು ಸಡಿಲಿಸಬೇಕು ಹಾಗೂ ಈಗಾಗಲೇ ಕಟಾವು ಮಾಡಿರುವ ಮಾವಿಗೂ ಬೆಂಬಲ ಬೆಲೆ ಅನ್ವಯಿಸಬೇಕು ಎಂದು ರೈತ ಸಂಘ ಆಗ್ರಹಿಸಿದೆ.

ಈ ಸಂದರ್ಭದಲ್ಲಿ ಸಂಘದ ರಾಜ್ಯ ಮತ್ತು ಜಿಲ್ಲಾ ಮುಖಂಡರು ಉಪಸ್ಥಿತರಿದ್ದರು.

# ದೊಡ್ಡಬಳ್ಳಾಪುರ: ಜನತಾ ನ್ಯಾಯಾಲಯದಿಂದ ತ್ವರಿತ ಪರಿಹಾರ ಸಾಧ್ಯ; ವಿಜಯ ದೇವರಾಜ ಅರಸ್

ದೊಡ್ಡಬಳ್ಳಾಪುರ

ಸಾರ್ವಜನಿಕರ ದೈನಂದಿನ ಅಗತ್ಯ ಸೇವೆಗಳ ಸಂಬಂಧ ಉಂಟಾಗುವ ವಿವಾದಗಳಿಗೆ ಕಾಯಂ ಜನತಾ ನ್ಯಾಯಾಲಯದ ಮೂಲಕ ತ್ವರಿತ ಪರಿಹಾರ ಪಡೆಯಬಹುದು ಎಂದು ಹೆಚ್ಚುವರಿ ನಗರ ಸಿವಿಲ್ ಹಾಗೂ ಸೆಷನ್ಸ್ ನ್ಯಾಯಾಧೀಶ ಮತ್ತು ನಗರ ಕಾಯಂ ಜನತಾ ನ್ಯಾಯಾಲಯದ ಅಧ್ಯಕ್ಷ ವಿಜಯ ದೇವರಾಜ ಅರಸ್ ತಿಳಿಸಿದ್ದಾರೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ, ತಾಲ್ಲೂಕು ಕಾನೂನು ಸೇವಾ ಸಮಿತಿ ಹಾಗೂ ವಕೀಲರ ಸಂಘದ ಸಹಯೋಗದಲ್ಲಿ ಬಾಶೆಟ್ಟಿಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ಕಾನೂನು ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರಯಾಣಿಕರ ಸಾರಿಗೆ ಸೇವೆ, ಅಂಚೆ, ದೂರವಾಣಿ, ವಿದ್ಯುತ್, ನೀರು ಪೂರೈಕೆ, ನೈರ್ಮಲ್ಯ ವ್ಯವಸ್ಥೆ, ಆಸ್ಪತ್ರೆ ಸೇವೆ, ವಿಮೆ, ಬ್ಯಾಂಕಿಂಗ್, ಹಣಕಾಸು ಸಂಸ್ಥೆಗಳು, ವಸತಿ ಮತ್ತು ಶಿಕ್ಷಣ ಸೇರಿದಂತೆ ಸಾರ್ವಜನಿಕ ಉಪಯೋಗ ಸೇವೆಗಳಲ್ಲಿ ನ್ಯೂನತೆ ಉಂಟಾದ ಸಂದರ್ಭದಲ್ಲಿ ಜನತಾ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿ ಪರಿಹಾರ



ಪಡೆಯಬಹುದು ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ ಒಟ್ಟು ಆರು ಕಾಯಂ ಜನತಾ ನ್ಯಾಯಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಜನರು ತಮ್ಮ ಸಮಸ್ಯೆಗಳಿಗಾಗಿ ಅವುಗಳನ್ನು ಬಳಸಿಕೊಳ್ಳಬಹುದು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀಶೈಲ ಭೀಮಸೇನ ಬಾಗಾಡಿ, ಮಾದಕ ವಸ್ತುಗಳ ಸೇವನೆ ವ್ಯಕ್ತಿಯ ಜೀವನವನ್ನು ಹಾಳು ಮಾಡುವುದಲ್ಲದೆ ಇಡೀ ಕುಟುಂಬವನ್ನೇ ಸಂಕಷ್ಟಕ್ಕೆ ದೂಡುತ್ತದೆ ಎಂದು ಎಚ್ಚರಿಸಿದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಪದಾಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಶಿಕ್ಷಣ ಇಲಾಖೆ

# ವಿದ್ಯಾರ್ಥಿಗಳಿಗೆ ಮಾದಕವಸ್ತು ವಿರೋಧಿ ಶಪಥ ಬೋಧನೆ

ಬೂದಿಕೋಟೆ

ಯುವಜನರು ಮಾದಕ ವಸ್ತುಗಳ ಆಮಿಷಕ್ಕೆ ಒಳಗಾಗದೆ ಶಿಕ್ಷಣ, ಕ್ರೀಡೆ ಹಾಗೂ ಉತ್ತಮ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಬೂದಿಕೋಟೆ ಪೊಲೀಸ್ ಠಾಣೆಯ ಪಿಎಸ್‌ಐಗುರುರಾಜ್ ಚಿಂತಕಲ್ ಹೇಳಿದ್ದಾರೆ.

ಅಂತರಾಷ್ಟ್ರೀಯ ಮಾದಕ ದ್ರವ್ಯ ಸೇವನೆ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನದ ಅಂಗವಾಗಿ ಬೂದಿಕೋಟೆ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ವೇಳೆ ವಿದ್ಯಾರ್ಥಿಗಳಿಗೆ ಮಾದಕವಸ್ತು ವಿರೋಧಿ ಶಪಥ ಬೋಧಿಸಲಾಯಿತು.

ಮಾದಕ ವಸ್ತುಗಳ ಸೇವನೆಯಿಂದ ಆರೋಗ್ಯ, ಕುಟುಂಬ ಹಾಗೂ ಸಮಾಜದ ಮೇಲೆ ಗಂಭೀರ ಪರಿಣಾಮ ಉಂಟಾಗುತ್ತದೆ ಎಂದು ತಿಳಿಸಿದ ಪಿಎಸ್‌ಐಗುರುರಾಜ್ ಚಿಂತಕಲ್, ವಿದ್ಯಾರ್ಥಿಗಳು ಮಾದಕ ವಸ್ತುಗಳಿಂದ ದೂರವಿದ್ದು ತಮ್ಮ ಸ್ನೇಹಿತರು ಹಾಗೂ ಕುಟುಂಬದವರಲ್ಲಿಯೂ ಜಾಗೃತಿ ಮೂಡಿಸಬೇಕು




ಎಂದು ಹೇಳಿದರು.

ಅಕ್ರಮ ಮಾದಕ ವಸ್ತು ಮಾರಾಟ ಅಥವಾ ಬಳಕೆಯ ಕುರಿತು ಮಾಹಿತಿ ದೊರೆತರೆ ತಕ್ಷಣ ಪೊಲೀಸ್ ಇಲಾಖೆಗೆ ತಿಳಿಸುವಂತೆ ವಿದ್ಯಾರ್ಥಿಗಳಿಗೆ ಅವರು ಮನವಿ ಮಾಡಿದರು. ಸಮಾಜವನ್ನು ಮಾದಕವಸ್ತು ಮುಕ್ತವಾಗಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ದ್ರಾಕ್ಷಾಯಿಣಿ, ಮಾಲಿನಿ, ಉಪನ್ಯಾಸಕರು, ಪಿಎಸ್‌ಐವೆಂಕಟರಾಮಪ್ಪ, ಪೊಲೀಸ್ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಮಾದಕವಸ್ತು ವಿರೋಧಿ ಶಪಥ ಸ್ವೀಕರಿಸಿದರು.

# ಮುಳಬಾಗಿಲಿನ ಮಹಾಸಂತ ಶ್ರೀ ಶ್ರೀಪಾದರಾಜರು

ಮುಳಬಾಗಿಲು

(ಜೂನ್ 28ರ ಗುರುಗಳ ಆರಾಧನೆ ಅಂಗವಾಗಿ) ದ್ವೈತ ವೇದಾಂತ ಪರಂಪರೆಯ ಮಹಾಸಂತರಲ್ಲಿ ಒಬ್ಬರಾಗಿರುವ ಶ್ರೀ ಶ್ರೀಪಾದರಾಜರು (1402–1502) ಕನ್ನಡ ಭಕ್ತಿಸಾಹಿತ್ಯ ಮತ್ತು ಮಧ್ವಸಿದ್ಧಾಂತದ ಪ್ರಸಾರದಲ್ಲಿ ಮಹತ್ವದ ಪಾತ್ರ ವಹಿಸಿದ ವಿಭೂತಿಪುರುಷರು.

ಶ್ರೀ ಪದ್ಮನಾಭತೀರ್ಥರಿಂದ ಆರಂಭವಾದ ಪೀಠದಲ್ಲಿ ವಿರಾಜಮಾನರಾದ ಇವರು, ತಮ್ಮ ಸಾಧನೆಯ ಫಲವಾಗಿ ಆ ಮಠವೇ ಮುಂದೆ “ಶ್ರೀ ಶ್ರೀಪಾದರಾಜ ಮಠ” ಎಂದು ಪ್ರಸಿದ್ಧಿಯಾಯಿತು. ಚನ್ನಪಟ್ಟಣದ ಅಬ್ಬೂರು ಇವರ ಜನ್ಮಸ್ಥಳವಾಗಿದ್ದು, ಪೂರ್ವಾಶ್ರಮದ ಹೆಸರು ಲಕ್ಷ್ಮೀನಾರಾಯಣ ಎಂದು ತಿಳಿದುಬರುತ್ತದೆ. ಬಾಲ್ಯದಲ್ಲೇ ಶ್ರೀ ಸ್ವರ್ಣವರ್ಣತೀರ್ಥರಿಂದ ಸನ್ಯಾಸ ದೀಕ್ಷೆ ಪಡೆದು ಯತಿಜೀವನ ಸ್ವೀಕರಿಸಿದ ಇವರು ಶತಾಯುಷಿಗಳಾಗಿ ಧರ್ಮಪ್ರಚಾರ ಕಾರ್ಯ ನಡೆಸಿದರು.



ಶ್ರೀರಂಗ ಸೇರಿದಂತೆ ದಕ್ಷಿಣ ಭಾರತದಲ್ಲಿ ಮಧ್ವಸಿದ್ಧಾಂತವನ್ನು ವ್ಯಾಪಕವಾಗಿ ಪ್ರಸಾರ ಮಾಡಿದ ಮಹನೀಯರಲ್ಲಿ ಇವರು ಅಗ್ರಸ್ಥಾನ ಪಡೆದಿದ್ದಾರೆ. ಬಳಿಕ ಮುಳುಬಾಗಿಲಿನ ನರಸಿಂಹತೀರ್ಥವನ್ನು ತಮ್ಮ ಕಾರ್ಯಕ್ಷೇತ್ರವಾಗಿ ಮಾಡಿಕೊಂಡು, ಅಕ್ಷೋಭ್ಯತೀರ್ಥರಿಂದ ನಿರ್ಮಿತವಾದ ಶ್ರೀ ಯೋಗನರಸಿಂಹನ ಸನ್ನಿಧಿಯನ್ನು ಪ್ರಮುಖ ವಿದ್ಯಾಕೇಂದ್ರವನ್ನಾಗಿ ರೂಪಿಸಿದರು. ಇದರ ಫಲವಾಗಿ ಮುಳುಬಾಗಿಲು ಶತಮಾನಗಳ ಕಾಲ ವಿದ್ವಾಂಸರ ಕೇಂದ್ರವಾಗಿಯೇ ಪ್ರಸಿದ್ಧಿಯಾಯಿತು.

ನರಸಿಂಹಭೂಪಾಲನ ಬ್ರಹ್ಮಹತ್ಯಾ ದೋಷ ನಿವಾರಣೆ ಸೇರಿದಂತೆ ಅನೇಕ ಧಾರ್ಮಿಕ ಘಟನೆಗಳಲ್ಲಿ ಇವರ ತಪೋಬಲ ಪ್ರಸಿದ್ಧವಾಗಿದೆ. ರಾಜರುಗಳಿಂದ ಹಿಡಿದು ಸಾಮಾನ್ಯರ ತನಕ ಎಲ್ಲರ ಜೀವನದಲ್ಲಿಯೂ ಧಾರ್ಮಿಕ ಮಾರ್ಗದರ್ಶನ ನೀಡಿದ ಯತಿಯಾಗಿ ಇವರು ಗುರುತಿಸಲ್ಪಟ್ಟಿದ್ದಾರೆ.

ವೈರಾಗ್ಯ ಮತ್ತು ರಾಜಸಮ ಗೌರವ ಎರಡನ್ನೂ ಹೊಂದಿದ್ದ ವಿಶೇಷ ಯತಿಯಾಗಿ ಗುರುತಿಸಲ್ಪಟ್ಟ ಇವರು, ದಿನನಿತ್ಯ ಶ್ರೀಹರಿಗೆ 60 ಬಗೆಯ ಶಾಕ ಸಮರ್ಪಿಸುವಂತಹ ರಾಜೋಚಿತ ಆರಾಧನಾ ಸಂಪ್ರದಾಯವನ್ನು ನಡೆಸುತ್ತಿದ್ದರೆಂದು ಹೇಳಲಾಗಿದೆ.

ಇವರ ಕೃತಿಗಳಲ್ಲಿ “ಶ್ರೀಮಧ್ವನಾಮ” ಅತ್ಯಂತ ಪ್ರಸಿದ್ಧವಾಗಿದ್ದು, ಕನ್ನಡ ಭಕ್ತಿಸಾಹಿತ್ಯದಲ್ಲಿ ಮಹತ್ವದ ಸ್ಥಾನ ಪಡೆದಿದೆ. ಜೊತೆಗೆ ವಾಗ್ವಜ್ರ, ಲಕ್ಷ್ಮೀನೃಸಿಂಹಪ್ರಾದುರ್ಭಾವ ದಂಡಕ ಮೊದಲಾದ ಕೃತಿಗಳೂ ಇವರಿಗೆ ಸೇರಿರುವುದಾಗಿ ಪರಂಪರೆಯಲ್ಲಿ ಹೇಳಲಾಗುತ್ತದೆ. ಇವರ ಕೃತಿಗಳು ಭಕ್ತಿ, ಸಂಗೀತ ಮತ್ತು ತತ್ವಜ್ಞಾನಗಳ ಸಮನ್ವಯವಾಗಿವೆ.

ಹರಿದಾಸ ಸಾಹಿತ್ಯದ ರೂಪುಗೊಳಿಸುವಿಕೆಯಲ್ಲಿ ಶ್ರೀಪಾದರಾಜರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ನರಹರಿತೀರ್ಥರಿಂದ ಆರಂಭವಾದ ಹರಿದಾಸ ಪರಂಪರೆಯನ್ನು ಇವರು ವ್ಯವಸ್ಥಿತ ರೂಪಕ್ಕೆ ತಂದರು. ಈ ಪರಂಪರೆ ಮುಂದಿನ ಶತಮಾನಗಳ ಭಕ್ತಿಸಾಹಿತ್ಯಕ್ಕೆ ಬಲವಾದ ನೆಲೆ ಒದಗಿಸಿತು.

ಇವರ ಶಿಷ್ಯರಲ್ಲಿ ಪ್ರಮುಖರಾದ ಶ್ರೀ ವ್ಯಾಸರಾಜರು ದ್ವೈತ ವೇದಾಂತದ ಮಹಾನ್ ಪಂಡಿತರಾಗಿ ರೂಪುಗೊಂಡಿದ್ದು, ಇದರ ಹಿಂದಿನ ಪ್ರಮುಖ ಗುರುಗಳಾಗಿ ಶ್ರೀಪಾದರಾಜರ ಪಾತ್ರ ಅಪಾರವಾಗಿದೆ. ಶ್ರೀ ವಿಭುದೇಂದ್ರತೀರ್ಥರ ಶಿಷ್ಯರಾಗಿಯೂ, ಶ್ರೀ ವ್ಯಾಸರಾಜರಿಗೆ ಗುರುಗಳಾಗಿಯೂ, ಮಠ ಪರಂಪರೆಯಲ್ಲಿ ಪ್ರಮುಖ ಸ್ಥಾನ ಹೊಂದಿದ ಶ್ರೀ ಶ್ರೀಪಾದರಾಜರು ದ್ವೈತ ಪರಂಪರೆಯ ಧ್ರುವತಾರೆಯಾಗಿ ಇಂದಿಗೂ ಭಕ್ತಿಭಾವದಿಂದ ಸ್ಮರಿಸಲ್ಪಡುತ್ತಾರೆ.

ಪ್ರಾತಃಕಾಲದಲ್ಲಿ ಇವರ ಸ್ಮರಣೆ ಶುಭಫಲಕಾರಿಯೆಂದು ಭಕ್ತರ ನಂಬಿಕೆ ಇಂದಿಗೂ ಜೀವಂತವಾಗಿದೆ.

# ‘ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಕಾರ್ಯಕರ್ತರು ಸಕ್ರಿಯವಾಗಿ ಪಾಲ್ಗೊಳ್ಳಲಿ’

ಬಂಗಾರಪೇಟೆ

ಪ್ರಜಾಪ್ರಭುತ್ವದ ಬಲವರ್ಧನೆಗೆ ಮುಕ್ತ ಹಾಗೂ ನಿಷ್ಪಕ್ಷಪಾತ ಚುನಾವಣೆಗಳು ಅತ್ಯಗತ್ಯವಾಗಿದ್ದು, ಮತದಾರರ ಪಟ್ಟಿಯ ವಿಶ್ವಾಸಾರ್ಹತೆ ಕಾಪಾಡುವ ನಿಟ್ಟಿನಲ್ಲಿ ನಡೆಯಲಿರುವ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಲ್ಲಿ ಪಕ್ಷದ ಕಾರ್ಯಕರ್ತರು ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕೋಲಾರ ಲೋಕಸಭಾ ಕ್ಷೇತ್ರದ ಸಂಸದ ಮಲ್ಲೇಶ್ ಬಾಬು ಕರೆ ನೀಡಿದರು.

ಬಂಗಾರಪೇಟೆ ನಗರದ ವಿಬಿಆರ್ ಸಭಾಂಗಣದಲ್ಲಿ ಕರ್ನಾಟಕ ಪ್ರದೇಶ ಜನತಾದಳ (ಜಾತ್ಯಾತೀತ) ತಾಲೂಕು ಘಟಕ ಆಯೋಜಿಸಿದ್ದ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ನಡೆದ ಕಾರ್ಯಕರ್ತರ ಸಭೆಯಲ್ಲಿ ಅವರು




ಮಾತನಾಡಿದರು.

ಭಾರತವು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ದೇಶದ ಚುನಾವಣಾ ವ್ಯವಸ್ಥೆ ಜಗತ್ತಿಗೆ ಮಾದರಿಯಾಗಿದೆ. ಸಂಸತ್ತು ಮತ್ತು ವಿಧಾನಮಂಡಲಗಳ ಚುನಾವಣೆಗಳನ್ನು ಭಾರತ ಚುನಾವಣಾ ಆಯೋಗವು ಪಾರದರ್ಶಕ ಹಾಗೂ ನಿಷ್ಪಕ್ಷಪಾತವಾಗಿ ನಡೆಸುತ್ತಿದ್ದು, ಈ ಪ್ರಕ್ರಿಯೆಯಲ್ಲಿ ಮತದಾರರ ಪಟ್ಟಿಯ ನಿಖರತೆ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯದಲ್ಲಿ ಜವಾಬ್ದಾರಿಯುತ ರಾಜಕೀಯ ಪಕ್ಷವಾಗಿ ಸಕ್ರಿಯವಾಗಿ ಭಾಗವಹಿಸುವುದು ಪ್ರತಿಯೊಬ್ಬ ಕಾರ್ಯಕರ್ತರ ಕರ್ತವ್ಯವಾಗಿದೆ. ರಾಜ್ಯದಲ್ಲಿ ಶೀಘ್ರದಲ್ಲೇ ನಡೆಯಲಿರುವ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಉತ್ಸಾಹದಿಂದ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಬೂತ್ ಮಟ್ಟದ ಸಂಘಟನೆಯೇ ಯಾವುದೇ ರಾಜಕೀಯ ಪಕ್ಷದ ಶಕ್ತಿಯ ಮೂಲವಾಗಿದೆ. ಬೂತ್ ಗೆದ್ದರೆ ಚುನಾವಣೆಯನ್ನು ಸುಲಭವಾಗಿ ಗೆಲ್ಲಬಹುದು. ಹಲವು ವರ್ಷಗಳಿಂದ ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಪಕ್ಷವನ್ನು ಬಲಪಡಿಸಲು ಶ್ರಮಿಸಿದ್ದು, ಅವರ ಪರಿಶ್ರಮದಿಂದಲೇ ಪಕ್ಷ ಅಧಿಕಾರದ ಗದ್ದುಗೆ ಏರಲು ಸಾಧ್ಯವಾಗಿದೆ ಎಂದು ಹೇಳಿದರು.

ಮತದಾರರ ಪಟ್ಟಿಯ ಪರಿಷ್ಕರಣೆಗೆ ಸಂಬಂಧಿಸಿದಂತೆ ಚುನಾವಣಾ ಆಯೋಗ ಕೈಗೊಳ್ಳುವ ಕ್ರಮಗಳು, ರಾಜಕೀಯ ಪಕ್ಷಗಳ ಜವಾಬ್ದಾರಿಗಳು ಹಾಗೂ ಬೂತ್ ಮಟ್ಟದ ಏಜೆಂಟರು (ಬಿಎಲ್‌ಎ) ನಿರ್ವಹಿಸಬೇಕಾದ ಕರ್ತವ್ಯಗಳ ಕುರಿತು ಕಾರ್ಯಕರ್ತರಿಗೆ ವಿವರಿಸಿದರು.

ಸಭೆಯಲ್ಲಿ ಕೋಮುಲ್ ನಿರ್ದೇಶಕ ವಡಗೂರು ಹರೀಶ್, ಜಿಲ್ಲಾ ಯೂನಿಯನ್ ನಿರ್ದೇಶಕ ಹನುಮಂತು, ಮಂಜುನಾಥ್, ಮುಖಂಡ ಬಣಕಮಹಳ್ಳಿ ನಟರಾಜ್, ಟಿಎಪಿಎಂಎಸ್ ನಿರ್ದೇಶಕ ಸತೀಶ್ ಗೌಡ, ಭೂ ಬ್ಯಾಂಕ್ ನಿರ್ದೇಶಕ ಬಾಲಕೃಷ್ಣ ಸೇರಿದಂತೆ ಹಲವಾರು ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಬಂಗಾರಪೇಟೆಯ ವಿಬಿಆರ್ ಸಭಾಂಗಣದಲ್ಲಿ ನಡೆದ ಈ ಸಭೆಯಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ರಮದ ಯಶಸ್ಸಿಗೆ ಕಾರ್ಯತಂತ್ರ ರೂಪಿಸಿ, ಬೂತ್ ಮಟ್ಟದಲ್ಲಿ ಕಾರ್ಯಕರ್ತರು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚಿಸಲಾಯಿತು.

# ‘ಯುವಕರು ದುಶ್ಚಟಗಳಿಂದ ದೂರವಿದ್ದು ಉತ್ತಮ ಜೀವನ ರೂಪಿಸಿಕೊಳ್ಳಬೇಕು’

ದೊಡ್ಡಬಳ್ಳಾಪುರ

ಮಕ್ಕಳು ಮತ್ತು ಯುವಜನತೆ ದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರವಹಿಸುತ್ತಿದ್ದು, ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಉತ್ತಮ ಜೀವನ ರೂಪಿಸಿಕೊಳ್ಳಬೇಕು ಎಂದು ಬೆಂಗಳೂರು ಗ್ರಾಮಾಂತರ ಪೊಲೀಸ್ ಅಧೀಕ್ಷಕ ಚಂದ್ರಕಾಂತ್ ಎಂ.ವಿ. ತಿಳಿಸಿದ್ದಾರೆ.

ನಗರದ ಜಾಲಪ್ಪ ಶಿಕ್ಷಣ ಸಂಸ್ಥೆಯಲ್ಲಿ ಮಾದಕ ವಸ್ತು ವಿರೋಧಿ ಸಪ್ತಾಹದ ಅಂಗವಾಗಿ ನಡೆದ ಮ್ಯಾರಥಾನ್ ಸ್ಪರ್ಧೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಮಾದಕ ವಸ್ತು ಸಂಬಂಧಿತ ಪ್ರಕರಣಗಳು ಹೆಚ್ಚುತ್ತಿರುವುದು ಆತಂಕಕಾರಿ ಸಂಗತಿ ಎಂದು ಹೇಳಿದ ಅವರು, ಡ್ರಗ್ ಮಾಫಿಯಾ ಯುವಕರು ಮತ್ತು ದುಡಿಯುವ ವರ್ಗವನ್ನು ಗುರಿಯಾಗಿಸಿಕೊಂಡಿದೆ. ಇದರ ನಿಯಂತ್ರಣಕ್ಕೆ ಎಲ್ಲರೂ ಒಟ್ಟಾಗಿ ಕೈಜೋಡಿಸಿ ಜಾಗೃತಿ ಮೂಡಿಸಬೇಕು ಎಂದು ಕರೆ ನೀಡಿದರು. ಪೊಲೀಸ್ ಇಲಾಖೆ ಸಿಬ್ಬಂದಿ ನಿರಂತರವಾಗಿ ಈ ಬಗ್ಗೆ ಕ್ರಮ




ಕೈಗೊಳ್ಳುತ್ತಿದೆ ಎಂದೂ ಹೇಳಿದರು.

ಮನೆಮನೆಗೆ ಪೊಲೀಸ್ ಕಾರ್ಯಕ್ರಮದ ಮೂಲಕ ಅಧಿಕಾರಿಗಳು ಮನೆಗಳಿಗೆ ಭೇಟಿ ನೀಡಿ ಸಮಸ್ಯೆಗಳನ್ನು ಆಲಿಸಲಾಗುತ್ತಿದೆ. ಒಂಟಿ ಮನೆಗಳು, ಮಹಿಳೆಯರ ಸುರಕ್ಷತೆ ಹಾಗೂ ಹಿರಿಯ ನಾಗರಿಕರ ರಕ್ಷಣೆಗಾಗಿ ಆಸರೆ ಯೋಜನೆಯಡಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅವರು ವಿವರಿಸಿದರು. ಜೊತೆಗೆ ದುಶ್ಚಟಗಳಲ್ಲಿ ತೊಡಗಿರುವವರ ಬಗ್ಗೆ ಮಾಹಿತಿ ನೀಡಿದರೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಆರ್.ಎಲ್. ಜಾಲಪ್ಪ ಅವರು ದೂರದೃಷ್ಟಿಯ ನಾಯಕನಾಗಿದ್ದು, ಶಿಕ್ಷಣದ ಮಹತ್ವವನ್ನು ಅರಿತು ಶಿಕ್ಷಣ ಸಂಸ್ಥೆ ಸ್ಥಾಪಿಸಿದವರು ಎಂದು ಚಂದ್ರಕಾಂತ್ ಎಂ.ವಿ. ಪ್ರಶಂಸಿಸಿದರು.

ಇದೇ ವೇಳೆ ಮಾತನಾಡಿದ ಡಿವೈಎಸ್‌ಪಿ ಪಾಂಡುರಂಗ, ಮಾದಕ ವಸ್ತು ವಿರೋಧಿ ಜಾಗೃತಿ ಮೂಡಿಸಲು 5 ಕಿಲೋಮೀಟರ್ ಮ್ಯಾರಥಾನ್ ಆಯೋಜಿಸಲಾಗಿದೆ ಎಂದು ತಿಳಿಸಿದರು. ಇನ್ಸ್‌ಪೆಕ್ಟರ್ ನವೀನ್ ಕುಮಾರ್, ದೇಶದ ಯುವಶಕ್ತಿ ಹಾಳಾದರೆ ರಾಷ್ಟ್ರದ ಭವಿಷ್ಯಕ್ಕೂ ಧಕ್ಕೆ ಉಂಟಾಗುತ್ತದೆ ಎಂದು ಎಚ್ಚರಿಸಿದರು.

ಜಾಲಪ್ಪ ಶಿಕ್ಷಣ ಸಂಸ್ಥೆಯಿಂದ ಆರಂಭವಾದ ಮ್ಯಾರಥಾನ್ ಭಗತ್‌ಸಿಂಗ್ ಕ್ರೀಡಾಂಗಣದವರೆಗೆ ನಡೆಯಿತು. ಕಾರ್ಯಕ್ರಮದಲ್ಲಿ ನೂರಾರು ವಿದ್ಯಾರ್ಥಿಗಳು ಹಾಗೂ ಪೊಲೀಸ್ ಸಿಬ್ಬಂದಿ ಭಾಗವಹಿಸಿದರು. ಯಶಸ್ವಿಗಳಾದವರಿಗೆ ಬಹುಮಾನ ವಿತರಿಸಲಾಯಿತು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy